RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 69 ಪುಟ: 06 ಗುರುವಾರ 06-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



‘ಅಸೂಯೆಗೆ ನನ್ನಲ್ಲಿ ಜಾಗವಿಲ್ಲ’ ಮದುವೆ ಆಹ್ವಾನ ಪತ್ರಿಕೆ ನೋಡಿ ನನಗೆ ಭಯವಾಗಿತ್ತು: ‘ಉಪೇಂದ್ರ ಇಲ್ಲ ಅಂದ್ರೆ ನಾನಿಲ್ಲ’

ಪುಟ 6

# ರೆಬೆಲ್ಸ್ ವಿರುದ್ಧ ಬಿವೈವಿ ಗುಡುಗು

## ರೈತ ನಾಯಕ ಯಡಿಯೂರಪ್ಪ ಅವರ ತೇಜೋವಧೆಗೆ ಯತ್ನಿಸಿದರೆ ಸುಮ್ಮನೆ ಕೂರಲ್ಲ

**ಬೆಂಗಳೂರು:** ಪಕ್ಷಕ್ಕಾಗಿ ತಮ್ಮ ಜೀವಮಾನವಿಡಿ ದುಡಿದ ಯಡಿಯೂರಪ್ಪನವರ ವಿರುದ್ಧ ಮಾತನಾಡುವುದನ್ನು ಮೊದಲು ನಿಲ್ಲಿಸಿ. ನೀವು ಮನಸೋಇಚ್ಛೆ ಹೇಳಿಕೆ ನೀಡುತ್ತಾ ಅವರ ತೇಜೋವಧೆಗೆ ಮುಂದಾದರೆ ಸುಮ್ಮನೇ ಕೂರುವ ಪ್ರಶ್ನೆಯೇ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರೋಧಿ ಪಡೆಗೆ ಪರೋಕ್ಷವಾಗಿ ಎಚ್ಚರಿಕೆ ನೀಡಿದ್ದಾರೆ.

ಪರಮೋಚ್ಚ ನಾಯಕ ಯಡಿಯೂರಪ್ಪ ಮತ್ತು ತಮ್ಮ ಬಗ್ಗೆ ಹಾದಿ ಬೀದಿಗಳಲ್ಲಿ ಮಾತನಾಡುತ್ತಿರುವ ತಮ್ಮ ಪಕ್ಷದ ವಿರೋಧಿ ಬಣದ ವಿರುದ್ಧ ಇಂದು ನೇರವಾಗಿ ಹರಿಹಾಯ್ದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನೂತನ ರಾಜ್ಯಾಧ್ಯಕ್ಷರನ್ನಾಗಿ ಯಾರನ್ನು ಆಯ್ಕೆ ಮಾಡಬೇಕು ಅಥವಾ ಚುನಾವಣೆ ಪ್ರಕ್ರಿಯೆ ನಡೆಸಬೇಕೆ ಎಂಬುದನ್ನು ಹೈಕಮಾಂಡ್ ನಾಯಕರು ನಿರ್ಧರಿಸುತ್ತಾರೆ. ಈ ಬಗ್ಗೆ ಇದೇ 20ರೊಳಗೆ ಸ್ಪಷ್ಟ ಸೂಚನೆ ಬರಲಿದೆ. ಅದುವರೆಗೂ ಕಾದು ನೋಡಿ, ನಿಮಗೆ ಅಷ್ಟೂ ತಾಳ್ಮೆಯಿಲ್ಲವೇ ಎಂದು ಯತ್ನಾಳ್ ಬಣಕ್ಕೆ ಟಾಂಗ್ ನೀಡಿದರು.ನನಗೆ ಅನುಭವದ ಕೊರತೆ ಎಂದು ಕೆಲ ಮಹಾನ್ ನಾಯಕರು ಹೇಳಿದ್ದಾರೆ. ನನಗೆ ನಿಮ್ಮಷ್ಟು ಅನುಭವ ಇಲ್ಲದೇ ಇರಬಹುದು ಆದರೆ ಪಕ್ಷ ಸಂಘಟಿಸುವಷ್ಟು, ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವಷ್ಟು ಅನುಭವ ಇದೆ. ಅಂತಹ ಅನುಭವ ಇಲ್ಲದಿದ್ದರೆ ರಾಜ್ಯದಲ್ಲಿ ಪಕ್ಷ ಇಷ್ಟು ಬಲಿಷ್ಟವಾಗಿರುತ್ತಿರಲಿಲ್ಲ.

ಲೋಕಸಭೆ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಆಗುತ್ತಿರಲಿಲ್ಲ. ನೀವು ನನಗೆ ಶಹಬ್ಬಾಸ್‌ಗಿರಿ ಕೊಡಬೇಕಿಲ್ಲ ರಾಜ್ಯದಲ್ಲಿ ಲಕ್ಷಾಂತರ ಕಾರ್ಯಕರ್ತರು ನನ್ನ ಮೇಲೆ ವಿಶ್ವಾಸ ಇಟ್ಟಿದ್ದಾರೆ ಅಷ್ಟೇ ಸಾಕು ಎಂದು ನಿನ್ನೆಯಷ್ಟೇ ತಮ್ಮನ್ನು ಲೇವಡಿ ಮಾಡಿದ್ದ ಶ್ರೀರಾಮುಲುಗೆ ತಿರುಗೇಟು



ಕೊಟ್ಟರು. ನನಗೆ ಮತ್ತು ರಾಜ್ಯದಲ್ಲಿನ ಲಕ್ಷಾಂತರ ಮಂದಿ ಕಾರ್ಯಕರ್ತರಿಗೆ ನೋವು ಇರುವುದು ಒಬ್ಬ ಧೀಮಂತ ನಾಯಕ ಯಡಿಯೂರಪ್ಪ ಅವರ ಬಗ್ಗೆ ಮಾತನಾಡುತ್ತೀರಲ್ಲ ಎಂಬುದಕ್ಕೆ. ನನ್ನ ಬಗ್ಗೆ ನೀವು ಏನೇ ಮಾತನಾಡಿಕೊಂಡರೂ ಪರವಾಗಿಲ್ಲ. ನಿಮ್ಮೆಲ್ಲ ಹೇಳಿಕೆಗಳನ್ನು ಹೈಕಮಾಂಡ್ ಗಮನಿಸುತ್ತಿದೆ. ನಾನು ಕೂಡ ವರಿಷ್ಠರ ಗಮನಕ್ಕೆ ತಂದಿದ್ದೇನೆ. ಇನ್ನೂ 8-10 ದಿನಗಳಲ್ಲಿ ನಿಮ್ಮೆಲ್ಲಾ ಪ್ರಶ್ನೆಗಳಿಗೆ ಉತ್ತರ ಸಿಗಲಿದೆ ಕಾದು ನೋಡಿ ಎಂದರು.

ನಾಲ್ಕು ಗೋಡೆಗಳ ಮಧ್ಯೆ ಮಾತನಾಡಬೇಕಿದ್ದ ವಿಷಯಗಳನ್ನು ಹಾದಿ-ಬೀದಿ ರಂಪ ಮಾಡುತ್ತಿದ್ದೀರಿ. ನಿಮ್ಮಿಂದಾಗಿ ಕಾರ್ಯಕರ್ತರು ನೊಂದು ಹೋಗಿದ್ದಾರೆ. ಮೊದಲುಇಂತಹ ಹುಚ್ಚಾಟಗಳನ್ನು ನಿಲ್ಲಿಸಿ ಎಂದು ಸಲಹೆ ನೀಡಿದರು.

**ಹೊಂದಾಣಿಕೆ ರಾಜಕೀಯ ಮಾಡಿಲ್ಲ:** ನಾನು ಹೊಂದಾಣಿಕೆ ರಾಜಕೀಯ ಮಾಡುತ್ತಿದ್ದೇನೆ. ಸರ್ಕಾರದೊಂದಿಗೆ ಕೈ ಜೋಡಿಸಿದ್ದೇನೆ ಎಂಬ ಆರೋಪ ಮಾಡುತ್ತಿದ್ದೀರಿ ಇದು ನಿಮಗೆ ಶೋಭೆ ತರುವುದಲ್ಲ. ನಾನು ಎಂದೂ ಹೊಂದಾಣಿಕೆ ರಾಜಕೀಯ ಮಾಡಿಲ್ಲ. ರಾಜ್ಯ ಸರ್ಕಾರದ ವಿರುದ್ಧ ನಮ್ಮ ಪಕ್ಷದ ಕಾರ್ಯಕರ್ತರೊಂದಿಗೆ ಸೇರಿ ಯಶಸ್ವಿ ಹೋರಾಟ ಮಾಡಿದ್ದೇನೆ ಎಂದರು.

ಸರ್ಕಾರದ ಹಗರಣ ಹಾಗೂ ಭ್ರಷ್ಟಚಾರದ ವಿರುದ್ಧ ಸಾಕಷ್ಟು ಹೋರಾಟಗಳನ್ನು ಮಾಡಿದ್ದೇವೆ.ಬೆಂಗಳೂರು-ಮೈಸೂರು ರ್‍ಯಾಲಿ ಮಾಡಿದ್ದೇವೆ,

ಮುಡಾ ಹಗರಣ, ವಾಲ್ಮೀಕಿ ನಿಗಮದ ಹಗರಣ, ಹೀಗೆ ಹಲವಾರು ಹೋರಾಟಗಳನ್ನು ಮಾಡಿದ್ದೇವೆ ಅದು ರಾಜ್ಯದ ಜನರಿಗೆ ತಿಳಿದಿದೆ ಎಂದು ವಿಜಯೇಂದ್ರ ಹೇಳಿದರು.



ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಲಾಖಾವಾರು ಬಜೆಟ್ ಪೂರ್ವ ಸಭೆಗಳು ಗುರುವಾರ ಆರಂಭಗೊಂಡಿವೆ. ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಹಣಕಾಸು ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.


## ಬಿಟ್ ಕಾಯಿನ್: ನಲಪಾಡ್‌ಗೆ ನೋಟಿಸ್



**ಬೆಂಗಳೂರು:** ಬಿಟ್ ಕಾಯಿನ್ ಕೇಸ್‌ನಲ್ಲಿ ನಲಪಾಡ್‌ಗೆ ನೋಟಿಸ್ ನೀಡಲಾಗಿದೆ. ಬಿಟ್ ಕಾಯಿನ್ ಪ್ರಕರಣ ತನಿಖೆ ನಡೆಯುತ್ತಿದೆ. ನಲಪಾಡ್- ಶ್ರೀಕಿ ನಡುವೆ ವ್ಯವಹಾರ ಸಂಬಂಧ ತನಿಖೆ ನಡೆಸಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಲಾಗಿದ್ದು, ಅವರು ವಿಚಾರಣೆಗೆ ಹಾಜರಾದ ನಂತರ ಎಲ್ಲಾ ಸತ್ಯಾಸತ್ಯತೆಗಳು ಬಹಿರಂಗಗೊಳ್ಳಲಿವೆ ಎಂದು ಅವರು ಹೇಳಿದರು. ಪುಟ 2

## ಪಕ್ಷದಲ್ಲಿನ ಆಂತರಿಕ ಭಿನ್ನಾಭಿಪ್ರಾಯ ದುರದೃಷ್ಟಕರ

**ಬೆಂಗಳೂರು:** ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಅತ್ಯಂತ ಕೆಟ್ಟ ದುರಾಡಳಿ ನಡೆಯುತ್ತಿದ್ದು, ಎಲ್ಲ ರಂಗದಲ್ಲೂ ವೈಫಲ್ಯ ವಾಗಿದೆ. ಜನ ಸಾಮನ್ಯರು, ರೈತರು, ಮಹಿಳೆಯರು ಸಂಕಷ್ಟದಲ್ಲಿದ್ದು, ದಿನನಿತ್ಯ ಹಿಂಸೆ ಮತ್ತು ಆತ್ಮಹತ್ಯೆ ಪ್ರಕರಣಗಳು ಹೆಚ್ಚುತ್ತಿರುವುದನ್ನು ನೋಡಿದಾಗ ಅದರ ವಿರುದ್ದ ಸಮರ ಸಾರಬೇಕಾಗಿರುವ ಭಾರತೀಯ ಜನತಾ ಪಕ್ಷ ಆಂತರಿಕವಾಗಿ ಭಿನ್ನಾಭಿಪ್ರಾಯದ ಮಾತಿನ ಸಮರ ಅತ್ಯಂತ ದುರದೃಷ್ಟಕರ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಬೇಸರ ವ್ಯಕ್ತಪಡಿಸಿದ್ದಾರೆ.



ಇಡೀ ದೇಶಕ್ಕೆ ಸಮರ್ಥ ಆಡಳಿತ ಕೊಡುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಈ ಪಕ್ಷ ಮತ್ತು ವರಿಷ್ಠರ ತೀರ್ಮಾನವೇ ಅಂತಿಮವಾಗಿದ್ದು ನಾನು ಯಾವುದೇ ಗುಂಪುಗಾರಿಕೆಯಲ್ಲಿ ನಂಬಿಕೆ ಇಟ್ಟವನಲ್ಲ. ಆದುದರಿಂದ ನಾನು ಯಾವುದೇ ಒಂದು ಗುಂಪಿನ ಸಭೆಯನ್ನು ಕರೆಯುವ ಪ್ರಶ್ನೆಯೇ ಬರುವುದಿಲ್ಲ. ಎಲ್ಲರನ್ನೂ ಒಂದುಗೂಡಿಸುವ ಪ್ರಾಮಾಣಿಕ ಪ್ರಯತ್ನ ಮಾಡುವ ಹಲವಾರು ಮುಖಂಡರಲ್ಲಿ ನಾನೂ ಒಬ್ಬ. ಎರಡೂ ಕಡೆ ತಾಳ್ಮೆ ಯನ್ನು ಕಳೆದುಕೊಳ್ಳದೆ ಕರ್ನಾಟಕ ಬಿಜೆಪಿಯ ಸರ್ವೋಚ್ಚ ನಾಯಕ ಮಾಜಿ ಮುಖ್ಯಮಂತ್ರಿ ಬಿ. ಎಸ್ ಯಡಿಯೂರಪ್ಪ ಹಾಗೂ ಇತರ ಹಿರಿಯ ಮುಖಂಡರ ಪುಟ 2

## ಡಿಕ್ಕಿ: ಸ್ಥಳದಲ್ಲಿಯೇ ಚಾಲಕ ಸಾವು

**ವಿಜಯನಗರ:** ದಾಳಿಂಬೆ ತುಂಬಿದ್ದ ಲಾರಿಯೊಂದು ಅತಿವೇಗವಾಗಿ ಬಂದು ಬೊಲೆರೊಗೆ ಹಿಂದಿನಿಂದ ಡಿಕ್ಕಿ ಹೊಡೆದು ಡಿವೈಡರ್‌ಗೆ ಗುದ್ದಿದ ಪರಿಣಾಮ ಲಾರಿ ಚಾಲಕ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಮರಿಯಮ್ಮನಹಳ್ಳಿ ಹತ್ತಿರದ ಹೆದ್ದಾರಿ -50ರ ತಿಮ್ಮಲಾಪುರ ಟೋಲ್‌ನಲ್ಲಿ ನಡೆದಿದೆ. ಬಸವನಬಾಗೇವಾಡಿಯ ಲಾರಿ ಚಾಲಕ ಈರಣ್ಣ ಬಾಗಿ(37) ಮೃತಪಟ್ಟವರು. ಕ್ಲೀನರ್ ಶ್ರೀಶೈಲ ತೀವ್ರ ಗಾಯಗೊಂಡಿದ್ದು, ಹೊಸಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪುಟ 2

## ಬಾಲಕಿ ಮೇಲೆ ಅತ್ಯಾಚಾರ

**ರಾಯಚೂರು:** ಎರಡನೇ ತರಗತಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿದ ಹೇಯ ಕೃತ್ಯ ರಾಯಚೂರು ಜಿಲ್ಲೆಯ ಮಾನ್ವಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸದ್ಯ ಸಂತ್ರಸ್ತೆ ಬಾಲಕಿಯನ್ನು ಮಾನ್ವಿ ತಾಲೂಕು ಆಸ್ಪತ್ರೆಯಿಂದ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ಸ್ಥಳಾಂತರ ಮಾಡಲಾಗಿದ್ದು, ಚಿಕಿತ್ಸೆ ಮುಂದುವರಿಸಲಾಗಿದೆ. ಸದ್ಯ ಪ್ರಕರಣ ಸಂಬಂಧ ಅತ್ಯಾಚಾರ ಆರೋಪಿ ಶಿವನಗೌಡ ಹಾಗೂ ಖಾಸಗಿ ಪುಟ 2

## ಡಿಸಿಎಂ ಮನೆಗೆ ಸುದೀಪ್ ಭೇಟಿ

**ಬೆಂಗಳೂರು:** ಡಿಸಿಎಂ ಡಿ.ಕೆ ಶಿವಕುಮಾರ್ ಅವರನ್ನ ನಟ ಕಿಚ್ಚ ಸುದೀಪ್ ಅವರು ಇಂದು ಭೇಟಿಯಾಗಿದ್ದಾರೆ. ಸದಾಶಿವ ನಗರದ ನಿವಾಸಕ್ಕೆ ನಟ ಪುಟ 2

## ವಿಜಯೇಂದ್ರ ಒಬ್ಬರೇ ಅಲ್ಲ, ಇನ್ನೋರ್ವ ನಾಯಕರ ತಲೆದಂಡವೂ ಆಗಲಿದೆ

**ಬೆಂಗಳೂರು / ಬೆಳಗಾವಿ :** ರಾಜ್ಯ ಬಿಜೆಪಿಯಲ್ಲಿ ಎರಡು ಪ್ರಮುಖ ಹುದ್ದೆ ಖಾಲಿಯಾಗಲಿದೆ ಎಂದು ಕಾಂಗ್ರೆಸ್ ನಾಯಕ ಲಕ್ಷ್ಮಣ್ ಸವದಿ ಹೇಳಿದ್ದಾರೆ.

ಬಿಜೆಪಿಯ ಆಂತರಿಕ ವಿಚಾರದ ಸ್ಫೋಟಕ ಮಾಹಿತಿಯೊಂದನ್ನು ಹೊರ ಹಾಕಿರುವ ಅವರು, " ಬಿಜೆಪಿಯಲ್ಲಿ ಅಧ್ಯಕ್ಷ ಹುದ್ದೆ




ಮಾತ್ರವಲ್ಲ, ವಿರೋಧ ಪಕ್ಷದ ನಾಯಕರ ಬದಲಾವಣೆಯೂ ಆಗಲಿದೆ. ಇದು ನನಗೆ ಬಂದಿರುವ ಖಚಿತ ಮಾಹಿತಿ" ಎಂದು ಹೇಳಿದ್ದಾರೆ. ಆ ಮೂಲಕ, ಈಗಿನ ವಿಜಯೇಂದ್ರ ಕೆಳಗಿಳಿಯಬೇಕು ಎನ್ನುವ ಒತ್ತಾಯದ ಜೊತೆಗೆ, ಆರ್. ಅಶೋಕ್ ಕೂಡಾ ಪುಟ 2

## ಮಾಂಸಹಾರ ನಿಷೇಧಿಸಬೇಕು: ಆಕ್ರೋಶ

ನವದೆಹಲಿ: ದೇಶಾದ್ಯಂತ ಮಾಂಸಾಹಾರವನ್ನು ಬ್ಯಾನ್ ಮಾಡಬೇಕು ಎಂದು ಶತ್ರುಘ್ನ ಸಿನ್ಹಾ ಅವರು ಆಗ್ರಹಿಸಿದ್ದಾರೆ.

ಉತ್ತರಾಖಂಡದಲ್ಲಿ ಏಕರೂಪ ನಾಗರಿಕ ಸಂಹಿತೆ (ಯುನಿಫಾರ್ಮ್ ಸಿವಿಲ್ ಕೋಡ್) ಜಾರಿಗೆ ಬಂದ ಬಗ್ಗೆ ಮಾತನಾಡುವ ಸಂದರ್ಭದಲ್ಲಿ ಅವರು ಈ ರೀತಿಯಾಗಿ ನುಡಿದರು.



ಉತ್ತರಾಖಂಡ ಸರ್ಕಾರ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತಂದ ಬಗ್ಗೆ ಶತ್ರುಘ್ನ ಸಿನ್ಹಾಗೆ ಪ್ರಶ್ನೆ ಮಾಡಲಾಯಿತು. ಈ ವೇಳೆ ಅವರು ಪ್ರತಿಕ್ರಿಯೆ ನೀಡಿದ್ದಾರೆ. ಯುಸಿಸಿಯನ್ನು ಉತ್ತರಾಖಂಡದಲ್ಲಿ ಪ್ರಾಥಮಿಕ ಹಂತದಲ್ಲಿ ಜಾರಿಗೆ ತಂದಿದ್ದು ಖುಷಿ ಇದೆ. ಇದು ದೇಶದಾದ್ಯಂತ ಬರಬೇಕು ಎಂಬುದು ನನ್ನ ಆಗ್ರಹ ಎಂದು ಅವರು ಹೇಳಿದ್ದಾರೆ.

ಏಕರೂಪ ನಾಗರಿಕ ಸಂಹಿತೆಯಲ್ಲಿ ಹಲವು ಸೂಕ್ಷ್ಮ ವಿಚಾರ ಮತ್ತು ಲೋಪದೋಷಗಳಿವೆ. ಕೇವಲ ಗೋಮಾಂಸವಲ್ಲ, ಒಟ್ಟಾರೆಯಾಗಿ ಮಾಂಸಾಹಾರವನ್ನೇ ದೇಶದಲ್ಲಿ ನಿಷೇಧಿಸಬೇಕು. ಆದರೆ ಉತ್ತರ ಭಾರತದಲ್ಲಿ ಹೇರಬಹುದಾದ ನಿಯಮಗಳನ್ನು ಈಶಾನ್ಯ ರಾಜ್ಯಗಳಲ್ಲಿ ಹೇರಲು ಸಾಧ್ಯವಿಲ್ಲ. ಪುಟ 2


## ಗುಂಡಿನ ದಾಳಿ; ಟ್ರಕ್ ಚಾಲಕ ಸಾವು

ಬಾರಾಮುಲ್ಲಾ: ಉತ್ತರ ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯಲ್ಲಿ ಬುಧವಾರ ಮತ್ತು ಗುರುವಾರ ಮಧ್ಯರಾತ್ರಿ ಸೇನಾಪಡೆಗಳ ಗುಂಡಿನ ದಾಳಿಯಿಂದ ಟ್ರಕ್ ಚಾಲಕನೊಬ್ಬ ಸಾವಿಗೀಡಾಗಿದ್ದಾನೆ ಎಂದು ಆರೋಪಿಸಲಾಗಿದೆ.

ಮೃತ ವ್ಯಕ್ತಿಯನ್ನು ಸೋಪೋರ್‌ನ ಗೋರಿಪೊರಾದ ವಸೀಮ್ ಅಹ್ಮದ್ ಮಲ್ಲಾ ಎಂದು ಗುರುತಿಸಲಾಗಿದ್ದು, ಬಾರಾಮುಲ್ಲಾದಿಂದ ಶ್ರೀನಗರಕ್ಕೆ ತೆರಳುತ್ತಿದ್ದಾಗ ಉತ್ತರ ಕಾಶ್ಮೀರ ಜಿಲ್ಲೆಯ ಡೆಲಿನಾ ಪ್ರದೇಶದಲ್ಲಿ ಸೇನೆಯು ಆತನನ್ನು ತಡೆದಿತ್ತು.

ಗುರುವಾರ ಬೆಳಗ್ಗೆ ಬಿಡುಗಡೆ ಮಾಡಿದ ಸೇನೆಯ ಹೇಳಿಕೆಯ ಪ್ರಕಾರ, ಸಂಭಾವ್ಯ ಭಯೋತ್ಪಾದಕ ಚಲನವಲನಗಳ ಬಗ್ಗೆ ನಿರ್ದಿಷ್ಟ ಗುಪ್ತಚರ ಮಾಹಿತಿಗಳನ್ನು ಆಧರಿಸಿ ಸೇನಾಪಡೆ ಯೋಧರು ಬುಧವಾರ ಡೆಲಿನಾದಲ್ಲಿ ಮೊಬೈಲ್ ವಾಹನ ಚೆಕ್ ಪೋಸ್ಟ್ (ಎಂವಿಸಿಪಿ) ಸ್ಥಾಪಿಸಿದ್ದರು. ಅತ್ಯಂತ ವೇಗವಾಗಿ ಚಲಿಸುತ್ತಿದ್ದ ನಾಗರಿಕ ಟ್ರಕ್ ನಿಲ್ಲಿಸುವಂತೆ ಸೂಚಿಸಲಾಗಿತ್ತು. ಆದರೆ, ಚಾಲಕ ವೇಗವನ್ನು ಮತ್ತಷ್ಟು ಹೆಚ್ಚಿಸಿ ಚೆಕ್ ಪಾಯಿಂಟ್ ಪಾಸ್ ಮಾಡಿ ಹೋದ. ನಂತರ ಯೋಧರು ಆ ವಾಹನವನ್ನು 23 ಕಿ.ಮೀ.ಗೂ ಹೆಚ್ಚು ದೂರ ಹಿಂಬಾಲಿಸಿದ್ದರು. ಟ್ರಕ್ ನಿಲ್ಲಿಸುವ ಸಲುವಾಗಿ ಪುಟ 2

## ಬಿಜೆಪಿಯವರಿಗೆ ಸಾಮಾನ್ಯ ಗಣಿತವು ಬರಲ್ಲ



**ಬೆಂಗಳೂರು:** ಬಿಜೆಪಿಯವರು ಸಾಮಾನ್ಯ ಗಣಿತ ಭಾರತ ಅಜ್ಞಾನಿಗಳು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕಿಡಿಕಾರಿದ್ದಾರೆ.ಇಂಧನ ಭಾಗ್ಯ ಮತ್ತು ಪಿ.ಎಫ್. ಪಾವತಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಸಾಲ ಪಡೆಯಲು ಮುಂದಾಗಿದೆ ಎಂಬ ಬಿಜೆಪಿಯ ಸಾಮಾಜಿಕ ಜಾಲತಾಣ ಪೋಸ್ಟ್‌ಗೆ ತಿರುಗೇಟು ನೀಡಿರುವ ಸಚಿವ ರಾಮಲಿಂಗಾರೆಡ್ಡಿ ಅವರು, ಆದಾಯ ಮತ್ತು ಲಾಭಕ್ಕೆ ವ್ಯತ್ಯಾಸ ತಿಳಿಯದ, ಸಾಮಾನ್ಯ ಗಣಿತವೂ ಬಾರದ ಅಜ್ಞಾನಿಗಳು ಬಿಜೆಪಿಯವರು ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ. ಬಿಜೆಪಿ ಎಂದರೆ ಬುರುಡೆ ಜನರ ಪಕ್ಷ. ಅವರಿಗೆ ಬುರುಡೆಯಲ್ಲಿ ಮೆದುಳು ಇದೆಯೋ, ಇಲ್ಲವೋ ಗೊತ್ತಿಲ್ಲ ಎಂದು ಪುಟ 2

## ವೈಮಾನಿಕ ಪ್ರದರ್ಶನ ಸಂಚಾರದಲ್ಲಿ ಬದಲಾವಣೆ

**ಬೆಂಗಳೂರು:** ನಗರ ಯಲಹಂಕ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ಯಲಹಂಕ ವಾಯುಸೇನಾ ನೆಲೆಯಲ್ಲಿ ಫೆ.10 ರಿಂದ ದಿನಗಳ ಕಾಲ ಪ್ರತಿಷ್ಠಿತ ಏರೋ ಇಂಡಿಯಾ 2025 ವೈಮಾನಿಕ ಪ್ರದರ್ಶನವನ್ನು ಹಮ್ಮಿಕೊಂಡಿರುವ ಹಿನ್ನೆಲೆ ಸಂಚಾರ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆಯಾಗಿದೆ.

ಏಕಮುಖ ಸಂಚಾರ ನಿಟ್ಟೆ ಮೀನಾಕ್ಷಿ ಕಾಲೇಜ್ ರಸ್ತೆ (ಪೂರ್ವದಿಕ್ಕಿನಿಂದ ಪಶ್ಚಿಮ ದಿಕ್ಕಿನ ಕಡೆಗೆ) ಇದ್ದು, ಬಾಗಲೂರು ಮುಖ್ಯರಸ್ತೆ (ಪಶ್ಚಿಮದಿಂದ ಪೂರ್ವದಿಕ್ಕಿನ ಕಡೆಗೆ)ಯೂ ಮಾರ್ಗದಲ್ಲಿಯೂ ಏಕಮುಖ ರಸ್ತೆ ಇರಲಿದೆ.ಉಚಿತ ಪಾರ್ಕಿಂಗ್: ಜಿಕೆವಿಕೆ ಪಾರ್ಕಿಂಗ್ ಸ್ಥಳದಿಂದ ಅಡ್ವಾ ಪಾರ್ಕಿಂಗ್ ಹಾಗೂ ಡೊಮೆಸ್ಟಿಕ್



ಪಾರ್ಕಿಂಗ್ ಸ್ಥಳಕ್ಕೆ ತೆರಳಲು ಹಾಗೂ ವಾಪಸ್ ಜಿಕೆವಿಕೆ ಪಾರ್ಕಿಂಗ್ ಸ್ಥಳಕ್ಕೆ ಬರಲು ಬಿಎಂಟಿಸಿ ವತಿಯಿಂದ ಉಚಿತ ಎಸಿ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಸಾರ್ವಜನಿಕರು ಈ ಸೌಲಭ್ಯವನ್ನು ಬಳಸಿಕೊಳ್ಳಲು ಕೋರಿದೆ ಎಂದು ಟ್ರಾಫಿಕ್ ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು ಪೂರ್ವ ದಿಕ್ಕಿನಿಂದ ಅಡ್ವಾ (ಏರ್ ಡಿಸ್‌ಪ್ಲೇ ಪ್ರದೇಶ) ಪಾರ್ಕಿಂಗ್ ಕಡೆ ಬರುವವರು ಕೆ.ಆರ್.ಪುರ-ನಾಗವಾರ ಜಂಕ್ಷನ್ - ಬಲತಿರುವು - ಥಣಿಸಂದ್ರ - ನಾರಾಯಣಪುರ ಕ್ರಾಸ್ - ಎಡ ತಿರುವು - ಟೆಲಿಕಾಂ ಲೇಔಟ್ - ಜಕ್ಕೂರು ಕ್ರಾಸ್ - ಬಲ ತಿರುವು - ಯಲಹಂಕ ಬೈಪಾಸ್ - ಯಲಹಂಕ ಕಾಫಿ ಡೇ - ಪಾಲನಹಳ್ಳಿ ಗೇಟ್ ಸರ್ವಿಸ್ ರಸ್ತೆ (ಗ್ರೀಲ್ ಓಪನ್) ಫೋರ್ಡ್ ಷೋ ರೂಂ - ಎಡ ತಿರುವು - ನಿಟ್ಟೆ ಮೀನಾಕ್ಷಿ ಕಾಲೇಜ್ ರಸ್ತೆ ಯಿಂದ ಬರಬೇಕು. ಪುಟ 2

## ಕೃಷ್ಣಯ್ಯ ಶೆಟ್ಟಿ ವಿರುದ್ಧದ ಎಫ್‌ಐಆರ್ ರದ್ದು

**ಬೆಂಗಳೂರು:** ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಹಂಚುವುದಕ್ಕಾಗಿ ದೊಡ್ಡ ಪ್ರಮಾಣದಲ್ಲಿ ದಿನಸಿ ವಸ್ತುಗಳು ಸಂಗ್ರಹ ಮಾಡಿದ ಆರೋಪದಲ್ಲಿ ಮಾಲೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಮತ್ತು ಮಾಜಿ ಸಚಿವ ಎಸ್.ಎನ್. ಕೃಷ್ಣಯ್ಯ ಶೆಟ್ಟಿ ವಿರುದ್ಧ ದಾಖಲಾಗಿದ್ದ ಎಫ್‌ಐಆರ್‌ನ್ನು ಹೈಕೋರ್ಟ್ ರದ್ದುಪಡಿಸಿದೆ. ಪುಟ 2



## ಮೊದಲ ಪುಟದಿಂದ

### ನಲಪಾಡ್‌ಗೆ ನೋಟಿಸ್

ಈ ಸಂಬಂಧಎಸ್‌ಐಟಿ ಅಧಿಕಾರಿಗಳು ಈಗಾಗಲೇ ತನಿಖೆ ನಡೆಸುತ್ತಿದ್ದಾರೆ. ಅವರ ಭಾಗ ಏನೆಂಬುದು ತನಿಖೆಯ ನಂತರ ತಿಳಿಯಲಿದೆ ಎಂದು ತಿಳಿಸಿದರು. ಮೈಕ್ರೋ ಫೈನಾನ್ಸ್ ಕಿರುಕುಳ ಕುರಿತು ಪ್ರತಿಕ್ರಿಯಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಮೈಕ್ರೋ ಫೈನಾನ್ಸ್ ಬಿಲ್ ರಾಜ್ಯಪಾಲರಿಗೆ ಕಳುಹಿಸಿದ್ದೇವೆ. ರಾಜ್ಯಪಾಲರ ಸಹಿ ಆಗಿ ಬರಬೇಕು. ಬದಲಾವಣೆಗೆ ಸೂಚನೆ ನೀಡಿದರೇ ಸರಿ ಮಾಡುತ್ತೇವೆ ಎಂದರು.

### ಭಿನ್ನಾಭಿಪ್ರಾಯ ದುರದೃಷ್ಟಕರ

ಮಾರ್ಗದರ್ಶನದಲ್ಲಿ ಒಟ್ಟಿಗೆ ಕುಳಿತು ಮಾತುಕತೆಯ ಮೂಲಕ ಇದನ್ನು ಬಗೆ ಹರಿಸಬೇಕು. ಇಲ್ಲದಿದ್ದರೆ ವರಿಷ್ಠರ ತೀರ್ಮಾನಕ್ಕೆ ನಾವೆಲ್ಲರೂ ಬದ್ಧರಾಗಬೇಕು.

ವರಿಷ್ಠರು ಕೂಡಲೇ ಕರ್ನಾಟಕದ ಪಕ್ಷದ ಬೆಳವಣಿಗೆಯ ಬಗ್ಗೆ ಗಮನವನ್ನು ಹರಿಸಿ, ಎಲ್ಲ ಪ್ರಮುಖರ ಜೊತೆಗೆ ಚರ್ಚೆ ಮಾಡಿ ಸೂಕ್ತ ನಿರ್ಣಯವನ್ನು ತೆಗೆದುಕೊಳ್ಳುತ್ತಾರೆ ಎನ್ನುವ ನಂಬಿಕೆ ನನಗಿದೆ ಎಂದು ತಿಳಿಸಿದ್ದಾರೆ.

ಈ ವೇಳೆ ಕೇಂದ್ರ ವಿಮಾನ ಖಾತೆ ಸಚಿವರಾದ ರಾಮಮೋಹನ್ ನಾಯ್ಡು ಅವರು, ಕರ್ನಾಟಕದ ಸರ್ಕಾರ ಜಾಗವನ್ನು ಗುರುತಿಸಿದರೆ, ನಾವು ಮತ್ತೊಂದು ವಿಮಾನ ನಿಲ್ದಾಣಕ್ಕೆ ಅನುಮತಿ ಕೊಡುತ್ತೇವೆ ಎಂದು ಉತ್ತರಿಸಿದರು.

### ಮಾಂಸಹಾರ ನಿಷೇಧಿಸಬೇಕು: ಆಕ್ರೋಶ

ಯುಸಿಸಿ ನಿಬಂಧನೆಗಳನ್ನು ರಚಿಸುವ ಮೊದಲು ಸರ್ವಪಕ್ಷ ಸಭೆ ನಡೆಸಬೇಕು ಎಂದು ಅವರು ಹೇಳಿದ್ದಾರೆ.

ಶತ್ರುಘ್ನ ಅವರ ಹೇಳಿಕೆ ಚರ್ಚೆಗೆ ಕಾರಣ ಆಗಿದೆ. ಯುಸಿಸಿಯಲ್ಲಿ ಯಾವ ಆಹಾರ ತಿನ್ನಬೇಕು, ಯಾವುದನ್ನು ತಿನ್ನಬಾರದು ಎಂಬುದನ್ನು ಹೇಳುತ್ತಾರಾ ಎಂದು ಕೆಲವರು ಪ್ರಶ್ನೆ ಮಾಡಿದ್ದಾರೆ. ಯುಸಿಸಿ ಆಹಾರ ಮತ್ತು ಅಭ್ಯಾಸಗಳ ಬಗ್ಗೆ ಇಲ್ಲ. ಇದು ಮದುವೆ ಮತ್ತು ಆಸ್ತಿಗಳ ಹಕ್ಕಿನ ಬಗ್ಗೆ ಇರುವ ಕಾಯ್ದೆ ಎಂದು ಕೆಲವರು ತಿರುಗೇಟು ನೀಡಿದ್ದಾರೆ.

ಈ ವಿಚಾರದಲ್ಲಿ ಶತ್ರುಘ್ನ ಸಿನ್ಹಾ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಈ ಮೊದಲು ಶತ್ರುಘ್ನ ಸಿನ್ಹಾ ಮಗಳು ಸೋನಾಕ್ಷಿ ಸಿನ್ಹಾ ಜಹೀರ್ ಇಕ್ಬಾಲ್‌ನ ವಿವಾಹ ಆದಾಗ ಸಾಕಷ್ಟು ಚರ್ಚೆಗಳು ನಡೆದಿದ್ದವು. ಈ ಮದುವೆಗೆ ಶತ್ರುಘ್ನ ಅವರ ಒಪ್ಪಿಗೆ ಇಲ್ಲ ಎಂಬ ಮಾತುಗಳು ಕೇಳಿ ಬಂದಿದ್ದವು. ಆದರೆ, ಅವರು ಒಪ್ಪಿ ವಿವಾಹ ಮಾಡಿಕೊಟ್ಟರು. ಈ ಬಗ್ಗೆ ಟೀಕೆ ಮಾಡಿದವರ ವಿರುದ್ಧ ಶತ್ರುಘ್ನ ಸಿನ್ಹಾ ಕಿಡಿಕಾರಿದ್ದರು

### ನಾಯಕರ ತಲೆದಂಡವೂ ಆಗಲಿದೆ

ಕೆಳಗಿಳಿಯಲಿದ್ದಾರೆ ಎನ್ನುವ ಸುಳಿವನ್ನು ಸವದಿ ನೀಡಿದ್ದಾರೆ. ನಾನು ಬಿಜೆಪಿಯಲ್ಲಿ ಇದ್ದವನು, ಹಾಗಾಗಿ ಅಲ್ಲಿ ಈಗಲೂ ಬಹಳಷ್ಟು ಜನ ಸ್ನೇಹಿತರಿದ್ದಾರೆ. ಎರಡೂ ಸ್ಥಾನಗಳು ಅಲ್ಲಾಡುತ್ತಿವೆ, ಸಾಕಷ್ಟು ಬಿಜೆಪಿ ನಾಯಕರು ಈಗಾಗಲೇ ಆ ಸ್ಥಾನಗಳಿಗೆ ಟವೆಲ್ ಅನ್ನು ಹಾಕಿದ್ದಾರೆ ಎಂದು ಅಥಣಿ ಶಾಸಕ ಲಕ್ಷ್ಮಣ ಸವದಿ ಹೇಳಿದ್ದಾರೆ. ಅಶೋಕ್ ಅವರ ಹೇಳಿಕೆಗೆ ಪ್ರತಿಕ್ರಿಯೆಯನ್ನು ನೀಡುತ್ತಾ ಸವದಿ ಈ ಮಾತನ್ನು ಹೇಳಿದ್ದಾರೆ. ಹೈಕಮಾಂಡ್ ನಾಯಕರನ್ನು ಸಂತೋಷ ಪಡಿಸಲು ಮತ್ತು ತಮ್ಮ ಅಸ್ತಿತ್ವವನ್ನು ತೋರಿಸಿಕೊಳ್ಳಲು, ಆರ್.ಅಶೋಕ್ ಅವರು ಸರ್ಕಾರದ ವಿರುದ್ಧ ಟೀಕೆಯನ್ನು ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರ ರಾಜೀನಾಮೆಯ ಬಗ್ಗೆ ಅಶೋಕ್ ಅಣ್ಣ ಮಾತನಾಡುತ್ತಿದ್ದಾರೆ. ಮೊದಲು, ಅವರ ತಟ್ಟೆಯಲ್ಲಿ ಬಿದ್ದ ಹೆಗ್ಗಣದ ಬಗ್ಗೆ ನೋಡಲಿ ಎಂದು ಲಕ್ಷ್ಮಣ ಸವದಿ, ಸಲಹೆಯನ್ನು ನೀಡಿದ್ದಾರೆ.ಆರ್.ಅಶೋಕ್ ಮತ್ತು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಆರ್ ಎಸ್ ಎಸ್ ನಾಯಕರನ್ನು ಭೇಟಿಯಾಗಿ, ವಿಜಯೇಂದ್ರ ಅವರ ವಿರುದ್ದ ದೂರು ನೀಡಿದ್ದರು ಎಂದು ಸುದ್ದಿಯಾಗಿತ್ತು. ಇದಕ್ಕೆ ಸ್ಪಷ್ಟನೆಯನ್ನು ಕೊಟ್ಟಿದ್ದ ಅಶೋಕ್, ನಾನು ರಾಜ್ಯಾಧ್ಯಕ್ಷ ಸ್ಥಾನಕ್ಕಾಗಿ ಪೈಪೋಟಿ ನಡೆಸುತ್ತಿಲ್ಲ ಎನ್ನುವ ಸ್ಪಷ್ಟನೆಯನ್ನು ಕೊಟ್ಟಿದ್ದರು.

### ಟ್ರಕ್ ಚಾಲಕ ಸಾವು

ಟೈರ್‌ಗಳಿಗೆ ಗುಂಡು ಹಾರಿಸಲಾಗಿತ್ತು. ಆಗ ಟ್ರಕ್ ಸಂಗ್ರಾಮ್ ಚೌಕ್‌ನಲ್ಲಿ ನಿಂತಿತು. "ವಾಹನವನ್ನು ಪರಿಶೀಲನೆ ಮಾಡಿದಾಗ ಚಾಲಕ ಗಾಯಗೊಂಡಿರುವುದು ಕಂಡು ಬಂದಿತ್ತು ಮತ್ತು ತಕ್ಷಣ ಭದ್ರತಾ ಪಡೆಗಳು ಆತನನ್ನು ಬಾರಾಮುಲ್ಲಾದ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಸೇರಿಸಿದ್ದರು. ಆದರೆ, ಅಲ್ಲಿನ ವೈದ್ಯರು ಚಾಲಕ ಮೃತಪಟ್ಟಿರುವುದಾಗಿ ಘೋಷಿಸಿದರು" ಎಂದು ಸೇನೆ ತಿಳಿಸಿದೆ.

ಸಂಪೂರ್ಣ ಲೋಡ್ ಆಗಿರುವ ಟ್ರಕ್ ಅನ್ನು ಶೋಧಕ್ಕಾಗಿ ಹತ್ತಿರದ ಪೊಲೀಸ್ ಠಾಣೆಗೆ ಕಳುಹಿಸಲಾಗಿದೆ. ಶಂಕಿತನ ಪೂರ್ವಾಪರಗಳ ಬಗ್ಗೆ ತನಿಖೆ ಪ್ರಗತಿಯಲ್ಲಿದೆ ಎಂದು ಸೇನೆ ತಿಳಿಸಿದೆ. ಸಾವಿಗೆ ಕಾರಣವನ್ನು ಕಂಡುಹಿಡಿಯಲು ಹತ್ಯೆಗೀಡಾದ ಚಾಲಕನ ಮರಣೋತ್ತರ ಪರೀಕ್ಷೆ ನಡೆಯುತ್ತಿದೆ ಎಂದು ಜಮ್ಮು ಮತ್ತು ಕಾಶ್ಮೀರದ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಂಭಾವ್ಯ ದಾಳಿಗಳನ್ನು ತಡೆಯಲು ಸೇನೆಯ ರಾಷ್ಟ್ರೀಯ ರೈಫಲ್ಸ್ ವಿಭಾಗವು ಮೊಬೈಲ್ ವಾಹನ ಚೆಕ್ ಪೋಸ್ಟ್ (ಎಂವಿಸಿಪಿ) ಸ್ಥಾಪಿಸಿದೆ ಎಂಬ ಮಾಹಿತಿ ಬಂದಿದೆ ಎಂದು ಜಮ್ಮು ಮತ್ತು ಕಾಶ್ಮೀರದ ಪೊಲೀಸ್ ವಕ್ತಾರರು ಘಟನೆಯ ಬಗ್ಗೆ ಹೇಳಿಕೆ ನೀಡಿದ್ದಾರೆ. "ಸೈನಿಕರು ಟ್ರಕ್ ಅನ್ನು 23 ಕಿ.ಮೀ.ಗಿಂತಲೂ ಹೆಚ್ಚು ದೂರದವರೆಗೆ ಹಿಂಬಾಲಿಸಿದರು ಮತ್ತು ಪ್ರೋಟೋಕಾಲ್ ಪ್ರಕಾರ, ಟೈರ್ ಪಂಕ್ಚರ್ ಮಾಡಲು ಟೈರ್‌ಗಳ ಮೇಲೆ ಗುಂಡು ಹಾರಿಸಿದರು. ಆಗ ವಾಹನ ಸಂಗ್ರಾಮ ಚೌಕ್‌ನಲ್ಲಿ ನಿಂತಿತು" ಎಂದು ವಕ್ತಾರರು ಹೇಳಿದರು. "ಶಾಂತಿ ಕಾಪಾಡುವಂತೆ ಮತ್ತು ಘಟನೆಯ ಬಗ್ಗೆ ವದಂತಿಗಳು ಅಥವಾ ತಪ್ಪು ಮಾಹಿತಿಯನ್ನು ಹರಡದಂತೆ ನಾವು ಜನರಿಗೆ ಮನವಿ ಮಾಡುತ್ತಿದ್ದೇವೆ. ಸಮಗ್ರ ತನಿಖೆ ನಡೆಯುತ್ತಿದೆ ಮತ್ತು ಮುಂದಿನ ಬೆಳವಣಿಗೆಗಳ ಬಗ್ಗೆ ಅಧಿಕೃತವಾಗಿ ಮಾಹಿತಿಯನ್ನು ಹಂಚಿಕೊಳ್ಳಲಾಗುವುದು. ಸಾರ್ವಜನಿಕ ಸುವ್ಯವಸ್ಥೆಗೆ ಭಂಗ ತರುವ ಅಥವಾ ಸುಳ್ಳು ಮಾಹಿತಿಯನ್ನು ಹರಡುವ ಪ್ರಯತ್ನ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು" ಎಂದು ಅವರು ತಿಳಿಸಿದರು.

### ಸುದೀಪ್ ಭೇಟಿ

ಕಿಚ್ಚ ಸುದೀಪ್ ಆಗಮಿಸಿ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನ ಭೇಟಿಯಾಗಿದ್ದಾರೆ. ನಿರ್ದೇಶಕ ಅನೂಪ್ ಬಂಡಾರಿ ಸಹ ಭೇಟಿ ನೀಡಿದ್ದಾರೆ. ಈ ಮಧ್ಯೆ ಇತ್ತೀಚೆಗೆ ನಟ ಕಿಚ್ಚ ಸುದೀಪ್ ಅವರು ಕಾಂಗ್ರೆಸ್‌ಗೆ ಕರೆತರುವ ಪ್ರಯತ್ನ ನಡೆದಿದೆ ಎನ್ನುವ ಸುದ್ದಿ ಹಬ್ಬಿತ್ತು. ಈ ಬೆನ್ನಲ್ಲೇ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ನಟ ಸುದೀಪ್ ಮನೆಗೆ ಮತ್ತಷ್ಟು ಕುತೂಹಲವನ್ನುಂಟು ಮಾಡಿದೆ.ಫೆಬ್ರವರಿ 8 ರಿಂದ ಬೆಂಗಳೂರಿನಲ್ಲಿ ಸಿಸಿಎಲ್ ಆರಂಭ ಆಗಲಿದೆ. ಇದರ ಉದ್ಘಾಟನೆಗೆ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾಗಿರುವ ಡಿ ಕೆ ಶಿವಕುಮಾರ್ ಅವರಿಗೆ ಸುದೀಪ್ ಆಹ್ವಾನ ನೀಡಿದ್ದಾರೆ ಎನ್ನಲಾಗಿದೆ.

### ಅತ್ಯಾಚಾರ

ಶಾಲೆಯ ವ್ಯವಸ್ಥಾಪಕ ರಾಜು ತಾಳಿಕೋಟೆಯನ್ನು ಪೊಲೀಸರು ವಶಕ್ಕೆ ಪಡೆದಿದ್ದು ಪೋಕ್ಸೋ ಕಾಯ್ದೆ ಅಡಿ ಪ್ರಕರಣ ದಾಖಲಿಸಲಾಗಿದೆ.

**ನಡೆದಿದ್ದೇನು?** : ಶಾಲೆಯಿಂದ ಮನೆಗೆ ಕರೆದೊಯ್ಯುವ ನೆಪಮಾಡಿ ಆರೋಪಿ ಶಿವನಗೌಡ ಬಾಲಕಿಯನ್ನು ಶಾಲೆಯಿಂದ ಕರೆದುಕೊಂಡು ಹೋಗಿದ್ದ. ನಂತರ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾನೆ.

**ಶಾಲಾ ಆಡಳಿತದ ವಿರುದ್ಧ ಪೋಷಕರ ಆಕ್ರೋಶ:** ಪೋಷಕರ ಅನುಮತಿಯಿಲ್ಲದೆ ಅಪರಿಚಿತರೊಂದಿಗೆ ಮಗುವನ್ನು ಕಳುಹಿಸಿದ ಶಾಲಾ ಸಿಬ್ಬಂದಿ ವಿರುದ್ಧ ಸಂತ್ರಸ್ತೆ ಬಾಲಕಿಯ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಪ್ರಕರಣದಲ್ಲಿ ಶಾಲಾ ಸಿಬ್ಬಂದಿಯ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಅತ್ಯಾಚಾರ ಎಸಗಿದಾತನಿಗೆ ಗಲ್ಲು ಶಿಕ್ಷೆ ವಿಧಿಸಬೇಕು. ಬೇರೆ ಯಾವ ಮಕ್ಕಳಿಗೂ ಇಂತಹ ಪರಿಸ್ಥಿತಿ ಬರಬಾರದು ಎಂದು ಪೋಷಕರು ಆಗ್ರಹಿಸಿದ್ದಾರೆ.

# ಬೆಳಗಾವಿ ಜಿಲ್ಲೆಗೆ ಐದು ಪ್ರಶಸ್ತಿಗಳ ಗರಿ: ಜಿಪಂಗೆ ಮೂರು, ಗ್ರಾಪಂಗೆ ಎರಡು ಪ್ರಶಸ್ತಿಗಳು ಪ್ರದಾನ

**ಬೆಳಗಾವಿ:** 2023-24ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅಮೃತ ಸರೋವರ ಜಿಲ್ಲಾ ಪುರಸ್ಕಾರ, ಅತ್ಯುತ್ತಮ ಗ್ರಾಮ ಪಂಚಾಯಿತಿ, ಉತ್ತಮ ಕಾಯಕ ಬಂಧು ಸೇರಿದಂತೆ ಒಟ್ಟು ಐದು ಪ್ರಶಸ್ತಿಗಳು ಬೆಳಗಾವಿ ಜಿಲ್ಲೆಗೆ ಒಲಿದಿವೆ.

ಬೆಂಗಳೂರಿನ ವಸಂತ ನಗರದ ಡಾ.ಬಿ.ಆರ್. ಅಂಬೇಡ್ಕರ್ ಮೆಮೋರಿಯಲ್ ಟ್ರಸ್ಟ್ ಅಂಬೇಡ್ಕರ್ ಭವನದಲ್ಲಿ ಬುಧವಾರ ನರೇಗಾ ಹಬ್ಬ-2025 ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಿತು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಂಕ್ ಖರ್ಗೆ ಅವರು ಬೆಳಗಾವಿ ಜಿಪಂ ಸಿಇಒ ರಾಹುಲ್ ಶಿಂಧೆ, ಜಿಪಂ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪ, ಎಡಿಪಿಸಿ ಬಸವರಾಜು, ಜಿಲ್ಲಾ ಐಇಸಿ ಸಂಯೋಜಕ ಪ್ರಮೋದ ಗೋಡೆಕರ್ ಅವರಿಗೆ ಅಮೃತ ಸರೋವರ ಜಿಲ್ಲಾ ಪುರಸ್ಕಾರ ನೀಡಿ ಗೌರವಿಸಿದರು.



ಹಾಗೆಯೇ ಬೆಳಗಾವಿ ಜಿಲ್ಲೆಯ ಕೃಷಿ ಮತ್ತು ಜಲಾನಯನ ಹಾಗೂ ಅರಣ್ಯ ಇಲಾಖೆಗೆ ಅತ್ಯುತ್ತಮ ಜಿಲ್ಲಾ ಒಗ್ಗೂಡಿಸುವಿಕೆ ಪುರಸ್ಕಾರವನ್ನು ಜಿಪಂ ಸಿಇಒ ರಾಹುಲ್ ಶಿಂಧೆ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಹಾಗೂ ಸಾಮಾಜಿಕ ಅರಣ್ಯ ಇಲಾಖೆ ಉಪ ಸಂರಕ್ಷಣಾಧಿಕಾರಿ ಕೆ.ಎಸ್.ಗೊರವರ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ವಲಯ ಅರಣ್ಯಾಧಿಕಾರಿ ಅವರು ಸ್ವೀಕರಿಸಿದರು.

ಹುಕ್ಕೇರಿ ತಾಲೂಕಿನ ಕೊಟಬಾಗಿ ಗ್ರಾಮ ಪಂಚಾಯಿತಿಯು ಅತ್ಯುತ್ತಮ ಗ್ರಾಮ ಪಂಚಾಯಿತಿ ಪುರಸ್ಕಾರಕ್ಕೆ ಭಾಜನವಾಗಿದ್ದು, ಪ್ರಶಸ್ತಿಯನ್ನು ತಾಲೂಕು ಪಂಚಾಯತಿ ಇಒ ಟಿ.ಆರ್.ಮಲ್ಲಾಡದ, ಸಹಾಯಕ ನಿರ್ದೇಶಕ ಲಕ್ಷ್ಮೀನಾರಾಯಣ, ಗ್ರಾಪಂ ಅಧ್ಯಕ್ಷ ಬಸವರಾಜ ಗೊಸುರಿ ಹಾಗೂ ಪಿಡಿಒ ನಿರಂಜನ ಕುರಬೆಟ್ಟ ಅವರು ಸ್ವೀಕರಿಸಿದರು.

ಅನಿತಾ ತುಕಾರಾಮ ಬೆಳಗಾಂವಕರ್, ತಾಪಂ ಇಒ ರಮೇಶ ಹೆಡಗೆ, ತಾಲೂಕು ಐಇಸಿ ಸಂಯೋಜಕ ರಮೇಶ ಮಾದರ ಅವರು ಉತ್ತಮ ಕಾಯಕ ಬಂಧು ಪುರಸ್ಕಾರಕ್ಕೆ ಭಾಜನರಾದರು.


ಕಾರ್ಯಕ್ರಮದಲ್ಲಿ ಶಾಸಕರಾದ ರಿಜ್ವಾನ್ ಅರ್ಷದ್, ಶರತ್ ಬಚ್ಚೇಗೌಡ, ಪಂಚಾಯತ್ ರಾಜ್ ಅಪರ ಮುಖ್ಯ ಕಾರ್ಯದರ್ಶಿ ಉಮಾ ಮಹಾದೇವನ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಗ್ರಾಮೀಣಾಭಿವೃದ್ಧಿ ಆಯುಕ್ತ ಪವನಕುಮಾರ ಮಾಲಪಾಟಿ ಮತ್ತಿತರರು ಇದ್ದರು.

## ಕಾವೇರಿ 2.0 ತಂತ್ರಾಂಶ ಸಂಪೂರ್ಣ ಪುನಃಸ್ಥಾಪನೆ, ಎಂದಿನಂತೆ ಕಾರ್ಯನಿರ್ವಹಣೆ

**ಬೆಂಗಳೂರು:** "ಕಳೆದ ಒಂದು ವಾರದಿಂದ ಆಆಂಖ ದಾಳಿಯಿಂದ ಸಮಸ್ಯೆಗೆ ತುತ್ತಾಗಿದ್ದ ಕಾವೇರಿ 2.0 ತಂತ್ರಾಂಶವನ್ನು ಈಗ ಸಂಪೂರ್ಣವಾಗಿ ಪುನಃಸ್ಥಾಪಿಸಲಾಗಿದೆ. ಮತ್ತು ಈ ತಂತ್ರಾಂಶ ಇದೀಗ ಎಂದಿನಂತೆ ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿದೆ" ಎಂದು ಕಂದಾಯ ಇಲಾಖೆ ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

"ತಾಂತ್ರಿಕ ಸಮಸ್ಯೆಯ ಕಾರಣಕ್ಕೆ ಕಳೆದ ಕೆಲ ದಿನಗಳಿಂದ ಆಸ್ತಿ ನೋಂದಣಿ ಪ್ರಕ್ರಿಯೆ ಮತ್ತು ಇಅ/ಅಅ ಸೇವೆಗಳ ಮೇಲೆ ಪರಿಣಾಮ ಬೀರಿತ್ತು. ಇದು ಆದಾಯ ಸಂಗ್ರಹವನ್ನು ಮತ್ತಷ್ಟು ಕಡಿಮೆ ಮಾಡಿತ್ತು. ಇಂತಹ ಅನಿರೀಕ್ಷಿತ ದಾಳಿಗಳನ್ನು ಪರಿಹರಿಸಲು ಹಾಗೂ ಭವಿಷ್ಯದಲ್ಲಿ ಎದುರಾಗಬಹುದಾದ ಅಪಾಯಗಳನ್ನು ತಗ್ಗಿಸಲು ವರ್ಧಿತ ಭದ್ರತಾ ಕ್ರಮಗಳನ್ನು ಜಾರಿಗೆ ತರಲಾಗಿದೆ ಮತ್ತು ಅರ್ಜಿಯನ್ನು ರಕ್ಷಿಸಲು ಇ-ಆಡಳಿತ ಇಲಾಖೆ ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದೆ" ಎಂದು ಹೇಳಿದರು.

"ತಾಂತ್ರಿಕ ದಾಳಿಯ ಕಾರಣಕ್ಕೆ ಫೆಬ್ರವರಿ 1 ರಂದು ತಂತ್ರಾಂಶದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗಿತ್ತು. ಪರಿಣಾಮ ನೋಂದಣಿಗಳ ಸಂಖ್ಯೆ 556ಕ್ಕೆ ಇಳಿದಿತ್ತು. ಸಹಿ ಮಾಡಿದ ಇಸಿ (ಋಣಭಾರ ಪ್ರಮಾಣ ಪತ್ರ) ಸಂಖ್ಯೆ 1649 ಮತ್ತು ನೀಡಲಾದ ಸಿಸಿ ಸಂಖ್ಯೆ 405 ಆಗಿದ್ದು, 15,18,72,565.45 ರೂ. ಆದಾಯ ಸಂಗ್ರಹವಾಗಿದೆ. ನೋಂದಣಿ ಚಟುವಟಿಕೆಗಳು ಸಾಮಾನ್ಯ ಮಟ್ಟಕ್ಕೆ ಮರಳಿದೆ" ಎಂದು ತಿಳಿಸಿದರು.



"ಫೆ.3 ರಂದು ಮಧ್ಯಂತರ ತುರ್ತು ಕ್ರಮಗಳನ್ನು ತೆಗೆದುಕೊಳ್ಳಲಾಯಿತು. ಹೀಗಾಗಿ ನೋಂದಣಿಗಳ ಸಂಖ್ಯೆ ಅಲ್ಪ ಪ್ರಮಾಣದಲ್ಲಿ ಸುಧಾರಿಸಿತು. ಪರಿಣಾಮ 5,243 ನೋಂದಣಿಗಳಾಗಿದ್ದರೆ, 3,525 ಇಸಿಗಳನ್ನು ಸಹಿ ಮಾಡಿದ್ದು, 652 ಸಿಸಿಗಳನ್ನು ನೀಡಲಾಗಿತ್ತು. ರೂ. 52,24,42,289.78 ಆದಾಯ ಸಂಗ್ರಹವಾಗಿತ್ತು. ಫೆಬ್ರವರಿ 4 ರಂದು, ಅರ್ಜಿಗಳ ಸಂಖ್ಯೆ ಮತ್ತೊಮ್ಮೆ ಕಡಿಮೆಯಾಗಲಾರಂಭಿಸಿತ್ತು. ವಿವರವಾದ ವಿಶ್ಲೇಷಣೆಯ ನಂತರ ಅರ್ಜಿಗಳನ್ನು ಪುನಃಸ್ಥಾಪಿಸಲು ಅಗತ್ಯ ಕ್ರಮಗಳನ್ನು ಜಾರಿಗೆ ತರಲಾಯಿತು. ಪರಿಣಾಮ ತಂತ್ರಾಂಶದ ಕಾರ್ಯಕ್ಷಮತೆ ಸುಧಾರಿಸಿದೆ. 1,657 ನೋಂದಣಿಗಳು ದಾಖಲಾಗಿದ್ದು, ಇಸಿ 7,327 ಮತ್ತು ನೀಡಲಾದ ಸಿಸಿಗಳು 977 ಆಗಿದೆ. 17,13,86,591.75 ರೂ. ಆದಾಯ ಸಂಗ್ರಹವಾಗಿದೆ" ಎಂದು ಪತ್ರಿಕಾ ಹೇಳಿಕೆಯಲ್ಲಿ ಮಾಹಿತಿ ನೀಡಿದರು



ಬೆಂಗಳೂರಿನ ನಂದಿನಿ ಲೇಔಟ್ ನಲ್ಲಿ ನೂತನವಾಗಿ ಆರಂಭಗೊಂಡಿರುವ "ಆಲಿಸು ವಾಕ್ ಮತ್ತು ಶ್ರವಣ ಚಿಕಿತ್ಸಾಲಯ" ವನ್ನು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಉದ್ಘಾಟಿಸಿದರು. ವೈದ್ಯೆ ಪ್ರಿಯಾಂಕ ಮತ್ತು ಬಾಲಭವನ ಅಧ್ಯಕ್ಷರಾದ ಬಿ.ಆರ್.ನಾಯ್ಡು ಅವರು ಉಪಸ್ಥಿತರಿದ್ದರು.

## ಮಸಾಜ್ ಪಾರ್ಲರ್ ಮೇಲೆ ದಾಳಿ; 11 ಮಂದಿಗೆ ಜಾಮೀನು

ಮಂಗಳೂರು: ಮಸಾಜ್ ಪಾರ್ಲರ್ ಮೇಲಿನ ದಾಳಿ ಪ್ರಕರಣದಲ್ಲಿ ಆರೋಪಿಗಳಿಗೆ ಮಂಗಳೂರಿನ ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಷರತ್ತು ಬದ್ಧ ಜಾಮೀನು ಮಂಜೂರು ಮಾಡಿದೆ.

ರಾಮಸೇನಾ ಕರ್ನಾಟಕ ಸಂಸ್ಥಾಪಕ ಪ್ರಸಾದ್ ಅತ್ತಾವರ ಸೇರಿದಂತೆ 11 ಮಂದಿಗೆ ಜಾಮೀನು ನೀಡಲಾಗಿದೆ.: ಜ.23ರಂದು ಮಂಗಳೂರಿನ ಬಿಜೈನಲ್ಲಿರುವ ಮಸಾಜ್ ಪಾರ್ಲರ್‌ನಲ್ಲಿ ಅನೈತಿಕ ಚಟುವಟಿಕೆ ದಾಳಿ ನಡೆಸಲಾಗುತ್ತಿದೆ ಎಂದು ಆರೋಪಿಸಿ, ರಾಮಸೇನಾ ಸಂಘಟನೆಯ ಕಾರ್ಯಕರ್ತರು ದಾಳಿ ನಡೆಸಿದ್ದರು. ಈ ಬಗ್ಗೆ ಮಸಾಜ್ ಪಾರ್ಲರ್ ಮಾಲೀಕರು ಬರ್ಕೆ ಠಾಣೆಯಲ್ಲಿ ದೂರು ದಾಖಲಿಸಿದ್ದರು. ದಾಳಿಯ ಹಿನ್ನೆಲೆಯಲ್ಲಿ ಪ್ರಸಾದ್ ಅತ್ತಾವರ ಸೇರಿದಂತೆ 14 ಮಂದಿಯನ್ನು ಬರ್ಕೆ ಪೊಲೀಸರು ಬಂಧಿಸಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದರು.

ಬಂಧಿತರಿಗೆ ಮಂಗಳೂರು 6ನೇ ಜೆಎಂಎಫ್ ಸಿ ನ್ಯಾಯಾಲಯ ಫೆ.7ರವರೆಗೆ ನ್ಯಾಯಾಂಗ ಬಂಧನ ವಿಧಿಸಿತ್ತು. ಬಳಿಕ ಆರೋಪಿಗಳ ಪರ ವಕೀಲರು ಮಂಗಳೂರಿನ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಜಾಮೀನು ಅರ್ಜಿ ಸಲ್ಲಿಸಿದ್ದರು. 14ಮಂದಿ ಆರೋಪಿಗಳಲ್ಲಿ ಜಾಮೀನು ಅರ್ಜಿ ಸಲ್ಲಿಸದ ಮೂರು ಮಂದಿ ಆರೋಪಿಗಳನ್ನು ಹೊರತುಪಡಿಸಿ ನ್ಯಾಯಾಲಯವು 11 ಮಂದಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.



ಹೆಬ್ಬಾಳ ಬಳಿ ಫ್ಲೈಓವರ್ ಕಾಮಗಾರಿಯನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಗುರುವಾರ ಪರಿಶೀಲಿಸಿ, ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿದರು. ಬಿಡಿಎ ಕಮಿಷನರ್ ಜಯರಾಮ್, ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ವಿಶೇಷ ಆಯುಕ್ತ ಮುನಿಶ್ ಮೌದ್ಗಿಲ್, ಡಿಸಿಎಂ ಕಾರ್ಯದರ್ಶಿ, ಬಿಎಂಆರ್ಡಿಎ ರಾಜೇಂದ್ರ ಚೋಳನ್, ನಗರ ಸಂಚಾರ ಪೊಲೀಸ್ ಆಯುಕ್ತ ಅನುಚೇತ್ ಉಪಸ್ಥಿತರಿದ್ದರು.

## ಮೊದಲ ಪುಟದಿಂದ

### ಚಾಲಕ ಸಾವು

ಪಡೆಯುತ್ತಿದ್ದಾರೆ.ಆಲಮಟ್ಟಿ ಯಿಂದ ಮೈಸೂರಿಗೆ ದಾಳಿಂಬೆ ತುಂಬಿ ತೆರಳುತ್ತಿದ್ದ ಲಾರಿ ಟೋಲ್‌ನಲ್ಲಿ ಅತಿವೇಗವಾಗಿ ಬಂದು, ಮೊದಲು ಟೋಲ್‌ನಲ್ಲಿ ಹಣ ಪಾವತಿಸುತ್ತಿದ್ದ ಬೊಲೆರೊಗೆ ಡಿಕ್ಕಿ ಹೊಡೆದು, ನಂತರ ಟೋಲ್ ರೂಮ್ ಪಕ್ಕದ ಡಿವೈಡರ್‌ಗೆ ಗುದ್ದಿದೆ. ಲಾರಿ ಡಿಕ್ಕಿ ಹೊಡೆತದ ರಭಸಕ್ಕೆ ಬೊಲೆರೊ ಪಲ್ಟಿ ಹೊಡೆದಿದ್ದು, ಇದರೊಳಗಿದ್ದ ಪ್ರಯಾಣಿಕರಿಗೆ ಗಾಯಗಳಾಗಿವೆ. ಸಿಸಿ ಟಿವಿಯಲ್ಲಿ ಘಟನೆಯ ವಿಡಿಯೋ ಸೆರೆಯಾಗಿದೆ. ಘಟನೆ ಸಂಬಂಧ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಎಫ್‌ಐಆರ್ ರದ್ದು

ತನ್ನ ವಿರುದ್ಧದ ಎಫ್‌ಐಆರ್ ರದ್ದುಕೋರಿ ಕೃಷ್ಣಯ್ಯ ಶೆಟ್ಟಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ. ಅಲ್ಲದೆ, ಸಂಗ್ರಹವಾಗಿದ್ದ ದಿನಸಿ ಸಾಮಗ್ರಿಗಳನ್ನು ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಹಂಚಿಕೆ ಮಾಡಿಲ್ಲ. ಈ ಹಿನ್ನೆಲೆಯಲ್ಲಿ ಅವರ ವಿರುದ್ಧ ಐಪಿಸಿ ಸೆಕ್ಷನ್ 17ಇ (ಲಂಚಗುಳಿತನ) ಅಡಿ ಪ್ರಕರಣ ಮುಂದುವರೆಸುವುದಕ್ಕೆ ಅವಕಾಶವಿಲ್ಲ ಎಂದು ತಿಳಿಸಿದೆ.ಈ ಪ್ರಕರಣದಲ್ಲಿ ಅರ್ಜಿದಾರ ಕೃಷ್ಣಯ್ಯ ಶೆಟ್ಟಿ ತನ್ನ ಮನೆಯಲ್ಲಿ ದಿನಸಿ ಸಾಮಗ್ರಿಗಳನ್ನು ಸಂಗ್ರಹ ಮಾಡಿದ್ದಾರೆ. ಆದರೆ, ಅದನ್ನು ಮತದಾರರಿಗೆ ಹಂಚಿಕೆ ಮಾಡಿಲ್ಲ. ಆದ್ದರಿಂದ ಐಪಿಸಿ 171ಬಿ(ಮತದಾರರಿಗೆ ಲಂಚ ನೀಡುವುದು) ಅಡಿಯ ಆರೋಪಕ್ಕೆ ಲಂಚಗುಳಿತನದ ಆಧಾರದಲ್ಲಿ ಅಪರಾಧಿಯಾಗುವುದಿಲ್ಲ ಎಂದು ಪೀಠ ಹೇಳಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕೃಷ್ಣಯ್ಯ ಶೆಟ್ಟಿ ಗಾಂಧಿನಗರ ವಿಧಾನಸಭಾ ಕ್ಷೇತ್ರದ ಸಂಭಾವ್ಯ ಅಭ್ಯರ್ಥಿಯಾಗಿದ್ದರು. ಈ ಹಿನ್ನೆಲೆಯಲ್ಲಿ ಮತದಾರರಿಗೆ ಹಂಚುವುದಕ್ಕಾಗಿ ಮನೆಯಲ್ಲಿ ದಿನಸಿ ಸಾಮಗ್ರಿಗಳನ್ನು ದಾಸ್ತಾನು ಮಾಡಿದ್ದರು ಎಂಬ ಆರೋಪ ಕೇಳಿಬಂದಿತ್ತು. ಹೀಗಾಗಿ 2023ರ ಏಪ್ರಿಲ್ 1ರಂದು ಅವರ ಮನೆಯ ಮೇಲೆ ದಾಳಿ ನಡೆಸಿದ್ದ ಚುನಾವಣಾಧಿಕಾರಿಗಳು, ಪ್ರಕರಣ ದಾಖಲಿಸಿಕೊಂಡಿದ್ದರು. ಇದನ್ನು ಪ್ರಶ್ನಿಸಿ ಶೆಟ್ಟಿ ಹೈಕೋರ್ಟ್ ಮೆಟ್ಟಿಲೇರಿದ್ದರು. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಪೊಲೀಸರು ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಇದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ ಎಂದು ವಾದ ಮಂಡಿಸಿದ್ದರು. ಇದಕ್ಕೆ ಆಕ್ಷೇಪಿಸಿದ್ದ ಸರ್ಕಾರಿ ವಕೀಲರು, ವಿಜೇಶ್ ಪಿಳ್ಳೈ ಪ್ರಕರಣದಲ್ಲಿ ಮಾಹಿತಿದಾರರು ಅಥವಾ ಪೊಲೀಸರು ಪ್ರಕರಣ ದಾಖಲಿಸಿಕೊಳ್ಳುವುದಕ್ಕೆ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಮನವಿ ಸಲಿಸಬಹುದು ಎಂಬುದಾಗಿ ಹೈಕೋರ್ಟ್ ತೀರ್ಪು ನೀಡಿದೆ. ಪ್ರಕರಣ ದಾಖಲಿಸುವ ಪ್ರಕ್ರಿಯೆಯಲ್ಲಿ ಯಾವುದೇ ತಪ್ಪಾಗಿಲ್ಲ. ಹೀಗಾಗಿ ಅರ್ಜಿ ವಜಾಗೊಳಿಸಬೇಕು ಎಂದು ಕೋರಿದ್ದರು.

## ಪ್ರದರ್ಶನ: ಸಂಚಾರದಲ್ಲಿ ಬದಲಾವಣೆ

ಬೆಂಗಳೂರು ಪೂರ್ವ ದಿಕ್ಕಿನಿಂದ ಡೊಮೆಸ್ಟಿಕ್ ಪಾರ್ಕಿಂಗ್ ಕಡೆ ಬರುವವರು ಕೆ.ಆರ್. ಪುರಂ - ಹೆಣ್ಣೂರು ಕ್ರಾಸ್ - ಕೊತ್ತನೂರು - ಗುಬ್ಬಿ ಕ್ರಾಸ್ - ಕಣ್ಣೂರು - ಬಾಗಲೂರು. - ಬಾಗಲೂರು ಲೇಔಟ್ - ರಜಾಕ್ ಪಾಳ್ಯ - ವಿದ್ಯಾನಗರ ಕ್ರಾಸ್ -ಹುಣಸಮಾರನಹಳ್ಳಿ ಮೂಲಕ ಬರಬಹುದಾಗಿದೆ.

ಬೆಂಗಳೂರು ಪಶ್ಚಿಮ ದಿಕ್ಕಿನಿಂದ ಏರ್ ಡಿಸ್‌ಪ್ಲೇ ಪ್ರದೇಶ ಪಾರ್ಕಿಂಗ್ ಕಡೆ ಬರುವವರು ಗೊರಗುಂಟಿಪಾಳ್ಯ - ಬಿ.ಇ.ಎಲ್ ವೃತ್ತ - ಗಂಗಮ್ಮ ವೃತ್ತ - ಎಂ.ಎಸ್ ಪಾಳ್ಯ ಸರ್ಕಲ್- ಉನ್ನಿಕೃಷ್ಣನ್ ರಸ್ತೆ - ಮದರ್ ಡೈರಿ ಜಂಕ್ಷನ್ - ಉನ್ನಿ ಕೃಷ್ಣನ್ ಜಂಕ್ಷನ್ - ಎಡ ತಿರುವು - ದೊಡ್ಡಬಳ್ಳಾಪುರ ರಸ್ತೆ ನಾಗೇನಹಳ್ಳಿ ಗೇಟ್ - ಬಲ ತಿರುವು - ಹಾರೋಹಳ್ಳಿ - ಗಂಟಗಾನಹಳ್ಳಿ ಸರ್ಕಲ್ ಬಲ ತಿರುವು ಪಡೆದು ಬರಬಹುದಾಗಿದೆ.

ಬೆಂಗಳೂರು ಪಶ್ಚಿಮ ದಿಕ್ಕಿನಿಂದ ಡೊಮೆಸ್ಟಿಕ್ ಪಾರ್ಕಿಂಗ್ ಕಡೆಗೆ ಬರುವವರು ಗೊರಗುಂಟೆಪಾಳ್ಯ ದ. ಬಿ.ಇ.ಎಲ್ ವೃತ್ತ - ಗಂಗಮ್ಮ ವೃತ್ತ - ಎಂ.ಎಸ್ ಪಾಳ್ಯ ಸರ್ಕಲ್- ಉನ್ನಿಕೃಷ್ಣನ್ ರಸ್ತೆ -ಮದರ್ ಡೈರಿ ಜಂಕ್ಷನ್ - ಉನ್ನಿಕೃಷ್ಣನ್ ಜಂಕ್ಷನ್ - ಎಡ ತಿರುವು - ದೊಡ್ಡಬಳ್ಳಾಪುರ ರಸ್ತೆ -ರಾಜಾನುಕುಂಟೆ - ಬಲ ತಿರುವು -ಅದ್ದಿಗಾನಹಳ್ಳಿ -ತಿಮ್ಮಸಂದ್ರ - ಎಂ.ವಿ.ಐ.ಟಿ ಕ್ರಾಸ್ - ವಿದ್ಯಾನಗರ ಕ್ರಾಸ್ - ಯು ತಿರುವು - ಹುಣಸಮಾರನಹಳ್ಳಿ ಮೂಲಕ ಬರಬೇಕು ಎಂದು ಪ್ರಕಟಣೆ ತಿಳಿಸಿದೆ.

4 ಬೆಂಗಳೂರು ದಕ್ಷಿಣ ದಿಕ್ಕಿನಿಂದ ಏರ್ ಶೋ ಪಾರ್ಕಿಂಗ್ ಕಡೆಗೆ ಬರುವವರು ಮೈಸೂರು ರಸ್ತೆ-ನಾಯಂಡನಹಳ್ಳಿ-ಚಂದ್ರಾ ಲೇಔಟ್- ಗೊರಗುಂಟೆಪಾಳ್ಯ-ಬಿ.ಇ.ಎಲ್ ವೃತ್ತ- ಗಂಗಮ್ಮ ವೃತ್ತ -ಎಂ.ಎಸ್ ಪಾಳ್ಯ ಸರ್ಕಲ್-ಮದರ್ ಡೈರಿ ಜಂಕ್ಷನ್ -ಉನ್ನಿ ಕೃಷ್ಣನ್ ಜಂಕ್ಷನ್ - ದೊಡ್ಡಬಳ್ಳಾಪುರ ಮುಖ್ಯ ರಸ್ತೆ -ನಾಗೇನಹಳ್ಳಿ ಗೇಟ್ -ಬಲ ತಿರುವು -ಹಾರೋಹಳ್ಳಿ ಗಂಟಗಾನಹಳ್ಳಿ ಸರ್ಕಲ್ ಮೂಲಕ ಬರಬೇಕು ಎಂದು ತಿಳಿಸಲಾಗಿದೆ.

ಬೆಂಗಳೂರು ದಕ್ಷಿಣ ದಿಕ್ಕಿನಿಂದ ಡೊಮೆಸ್ಟಿಕ್ ಪಾರ್ಕಿಂಗ್ ಕಡೆಗೆ ಬರುವವರು ಮೈಸೂರು ರಸ್ತೆ-ನಾಯಂಡನಹಳ್ಳಿ -ಚಂದ್ರಾ ಲೇಔಟ್- ಗೊರಗುಂಟೆಪಾಳ್ಯ -ಬಿ.ಇ.ಎಲ್ ವೃತ್ತ - ಗಂಗಮ್ಮ ವೃತ್ತ -ಎಂ.ಎಸ್ ಪಾಳ್ಯ ಸರ್ಕಲ್- ಮದರ್ ಡೈರಿ-ಉನ್ನಿ ಕೃಷ್ಣನ್ ಜಂಕ್ಷನ್ - ಎಡ ತಿರುವು-ದೊಡ್ಡಬಳ್ಳಾಪುರ ರಸ್ತೆ ರಾಜಾನುಕುಂಟೆ- ಬಲ ತಿರುವು- ಅದ್ದಿಗಾನಹಳ್ಳಿ -ಎಂ.ವಿ.ಐ.ಟಿ ಕ್ರಾಸ್- ವಿದ್ಯಾನಗರ ಕ್ರಾಸ್-ಯು ತಿರುವು ಪಡೆದು - ಹುಣಸಮಾರನಹಳ್ಳಿ ಮೂಲಕ ಬರಬೇಕು.

# ನಂಗಲಿ ಗ್ರಾಮ ಪ್ರದೇಶವನ್ನು ಪಟ್ಟಣ ಪಂಚಾಯಿತಿ ಮಾಡಿ: ಪ್ರಭಾಕರ ಗುಪ್ತ

**ಮುಳಬಾಗಿಲು:** ನಂಗಲಿ ಗ್ರಾಮ ಪ್ರದೇಶವನ್ನು ಪಟ್ಟಣ ಪಂಚಾಯಿತಿ ಮಾಡಿ ಗಡಿ ಪ್ರದೇಶದಲ್ಲಿ ಒಂದು ಮಹಾದ್ವಾರವನ್ನು ಕಟ್ಟಿಸಿ ಹೊಯ್ಸಳರ ಹೆಬ್ಬಾಗಿಲು ಎಂದು ನಾಮಕರಣ ಮಾಡಬೇಕು ಎಂದು ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಬಿ ಆರ್ ಪ್ರಭಾಕರ ಗುಪ್ತ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ತಾಲೂಕಿನ ಗಡಿ ಭಾಗದ ನಂಗಲಿ ಗ್ರಾಮದ ಶ್ರೀ ವರಸಿದ್ಧಿ ವಿನಾಯಕ ಪ್ರೌಢಶಾಲಾ ಆವರಣದಲ್ಲಿ ಏರ್ಪಡಿಸಿದ್ದ ತಾಲೂಕು ಮಟ್ಟದ 8ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಕೌಂಡಿಣ್ಯ ನದಿ ಹರಿದು ಬರುವ ಜಾಗದಲ್ಲಿ ಈ ನಂಗಲಿ ಗ್ರಾಮ ಇದೆ. ಈ ಭಾಗದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿರುವುದು ಬಹಳ ಸಂತೋಷವಾಗಿದೆ. ನಾನು ಕನ್ನಡ ಬಾವುಟವನ್ನು ಹಿಡಿದು ಶಾಲಾ-ಕಾಲೇಜುಗಳಲ್ಲಿ ಓಡಾಡಿ ಕನ್ನಡ ನೆಲ, ಜಲ, ನುಡಿ, ಸಂಸ್ಕೃತಿಯ ಬಗ್ಗೆ ಅರಿವು ಮೂಡಿಸುವಲ್ಲಿ ಅಳಿಲು ಸೇವೆಯನ್ನು ಮಾಡಿರುತ್ತೇನೆ.ನನ್ನನ್ನು ಸರ್ವಾಧ್ಯಕ್ಷರಾಗಿ ಮಾಡಿರುವುದು ಬಹಳ ಸಂತೋಷದಾಯಕವಾಗಿದೆ ಎಂದು ಹೇಳಿದರು.

ಇಲ್ಲಿನ ಜನ ಭಾಷಾ ಸಂಬಂಧಗಳ ಜೊತೆಗೆ ಪ್ರೀತಿಯಿಂದ ಬದುಕುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ನಮ್ಮ ಈ ಭಾಗದ ಜನ ಹಲವಾರು ಭಾಷೆಗಳನ್ನು ಮಾತನಾಡುತ್ತಾರೆ. ಆದರೆ ಕನ್ನಡ ಭಾಷೆಯನ್ನು ತನ್ನ ಹೃದಯ ಭಾಷೆಯಂತೆ ಪ್ರೀತಿಸುತ್ತಾರೆ. ಇಲ್ಲಿನ ಸಮೀಪ ಇರುವ ಟೋಲ್ ಗೇಟ್ ಹತ್ತಿರ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಕುಡಿಯುವ ನೀರಿನ ಬಾವಿಯು ಇರುತ್ತದೆ ಇದು ಇಂದು ಹಾಳು ಬಿದ್ದಿದೆ ಇದನ್ನು ಪುನಶ್ಚೇತನ ಗೊಳಿಸಬೇಕು ಹಾಗೂ ನಂಗಲಿ ಗ್ರಾಮದಲ್ಲಿ ಕನ್ನಡ ಭವನವನ್ನು ನಿರ್ಮಾಣ ಮಾಡಿಸಿ ಕೊಡಬೇಕೆಂದು ಒತ್ತಾಯಿಸಿದರು.

ಶಾಸಕ ಸಮೃದ್ಧಿ ವಿ. ಮಂಜುನಾಥ್ ಮಾತನಾಡಿ, ಈ ಗಡಿಭಾಗದ ತಾಲೂಕಿನಲ್ಲಿ ಕನ್ನಡ ಶಾಲೆಗಳನ್ನು ಉಳಿಸುವಂತಹ ಕೆಲಸ ಆಗಬೇಕು ಈಗಾಗಲೇ ತಾಲೂಕಿನಲ್ಲಿ 86 ಸರ್ಕಾರಿ ಶಾಲೆಗಳು ಮುಚ್ಚುವ ಸ್ಥಿತಿಗೆ ಬಂದಿದೆ ಯಾವುದೇ ಕಾರಣಕ್ಕೆ ನಾನು ಕನ್ನಡ ಶಾಲೆಗಳನ್ನು ಮುಚ್ಚುವುದಕ್ಕೆ ಬಿಡುವುದಿಲ್ಲ ಕನ್ನಡ ಮತ್ತು ಕನ್ನಡ ಶಾಲೆಗಳು ಉಳಿಯಬೇಕಾದರೆ ಅದು ಶಿಕ್ಷಕರಿಂದ ಮಾತ್ರ ಸಾಧ್ಯವಾಗುತ್ತದೆ, ಆಹ್ವಾನ ಪತ್ರಿಕೆಯಲ್ಲಿ ಎರಡು ನೂರಕ್ಕಿಂತ ಹೆಚ್ಚು ಹೆಸರುಗಳಿವೆ. ಕನ್ನಡದ ಬಗ್ಗೆ ಅಭಿಮಾನ ಇರುವ ಹೆಸರುಗಳು ಮಾತ್ರ ಪತ್ರಿಕೆಯಲ್ಲಿ ನಮೂದಿಸಿ ಸುಮ್ಮನೆ ಈ ರೀತಿ ಹೆಸರುಗಳನ್ನು ಆಹ್ವಾನ ಪತ್ರಿಕೆಯಲ್ಲಿ ಹಾಕುವುದು ಸಮಂಜಸಬಲ್ಲ ಎಂದರು.



ಬೆಳಗಾವಿ ಅಧಿವೇಶನದಲ್ಲಿ ಈಗಾಗಲೇ ನಾನು ಈ ನಂಗಲಿ ಗ್ರಾಮಕ್ಕೆ ಸಂಬಂಧಪಟ್ಟಂತೆ ವಿಚಾರಗಳನ್ನು ಪ್ರಸ್ತಾಪಿಸಿರುತ್ತೇನೆ ಇಲ್ಲಿ ಕೆಲವರ ದೌರ್ಜನ್ಯ ಮತ್ತು ಒತ್ತಡದಿಂದ ನಂಗಲಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಪ್ರೌಢಶಾಲೆಯನ್ನು ತೆರೆಯಲು ಸಾಧ್ಯವಾಗುತ್ತಿಲ್ಲ ಆದರೂ ನಾನು ಇಲ್ಲಿ ಪ್ರೌಢಶಾಲೆಯನ್ನು ತೆರೆಯುವ ಕೆಲಸವನ್ನು ಮಾಡುತ್ತೇನೆ ಎಂದರು.

ಶಿಕ್ಷಕರಲ್ಲಿ ಗುಂಪುಗಾರಿಕೆ ಬೇಡ ಎಂದು ಬಹಳಷ್ಟು ಸಲ ನಾನು ವಿನಂತಿಸಿದ್ದರು ಹಿಂದಿನ ಚುನಾವಣೆಯಲ್ಲಿ ಗುಂಪುಗಾರಿಕೆ ಮಾಡಿಕೊಂಡು ರಾಜಕೀಯವನ್ನು ಬೆರೆಸಿಕೊಂಡು ಕೆಲಸ ನಿರ್ವಹಿಸುತ್ತಿದ್ದಾರೆ ಇದು ಆಗಬಾರದು ಶಿಕ್ಷಕರಲ್ಲಿ ಗುಂಪುಗಾರಿಕೆ ಹೆಚ್ಚಾಗಿ ಕನ್ನಡ ಶಾಲೆಗಳು ಮುಚ್ಚುವ ಸ್ಥಿತಿಗೆ ತಲುಪಿವೆ ಇದು ಬಹಳ ನೋವಿನ ಸಂಗತಿಯಾಗಿದೆ, ಇಲ್ಲಿ ರಾಜಕೀಯಕ್ಕೆ ಕೊಡುವಷ್ಟು ಹೊತ್ತು ಸಾಹಿತ್ಯಕ್ಕೆ ನೀಡುವುದಿಲ್ಲ ಕನ್ನಡಕ್ಕೆ ಗೌರವ ನೀಡದಿರುವುದು ದುರಂತವಾಗಿದೆ ಈಗಾಗಲೇ ನಂಗಲಿ ಗ್ರಾಮವನ್ನು ಪಟ್ಟಣ ಪಂಚಾಯಿತಿ ಮಾಡಲು ಸರ್ಕಾರ ಒಪ್ಪಿಗೆ ನೀಡಿದೆ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ಚಂದ್ರಶೇಖರ್ ನಂಗಲಿ ಮಾತನಾಡಿ, ಕನ್ನಡ ಮತ್ತು ಕರ್ನಾಟಕ ಎಂದರೆ ಎತ್ತರದ ನಾಡು ಇಲ್ಲಿನ ಜನ ಎತ್ತರದ ಮನಸ್ಸನ್ನು ಮತ್ತು ಗುಣವನ್ನು ಹೊಂದಿದ್ದಾರೆ ಎಂಬ ಪಂಪ ಕವಿ ಹೇಳಿರುವ ಮಾತನ್ನು ನೆನಪಿಸಿದರು ಉತ್ತಮವಾಗಿದೆ ನಮ್ಮಲ್ಲಿ ಹಿಂದಿ ಭಾಷೆ ಏರಿಕೆ ಮಾಡುತ್ತಿರುವುದು ಬಹಳ ದುರಂತದ ವಿಷಯವಾಗಿದೆ ಕೇವಲ ನಮ್ಮ ಕರ್ನಾಟಕದಲ್ಲಿ ದ್ವಿಭಾಷೆ ಮಾತ್ರ ಜಾರಿಯಲ್ಲಾಗಬೇಕು ಪಕ್ಕದಲ್ಲಿರುವ ತಮಿಳುನಾಡಿನಲ್ಲಿ ಕೇವಲ ತಮಿಳು ಮತ್ತು ಇಂಗ್ಲೀಷ್ ಮಾತ್ರ ಜಾರಿಯಲ್ಲಿದೆ ನಮ್ಮ ರಾಜ್ಯದಲ್ಲೂ ದ್ವಿಭಾಷಾ ನೀತಿ ಜಾರಿ ಆಗಬೇಕೆಂದು ಒತ್ತಾಯಿಸಿದರು.

ಕೌಂಡಿಣ್ಯ ನದಿಯ ಉದ್ದಕ್ಕೆ ಕಾಸಿನ ಸರಗಳಂತೆ ಕೆರೆಗಳನ್ನು ನಿರ್ಮಾಣ ಮಾಡಿರುವುದು ನಮ್ಮ ಹೆಮ್ಮೆಯ ಸಂಗತಿಯಾಗಿದೆ ಈ ನದಿಯು ಮೂರು ರಾಜ್ಯಗಳಲ್ಲಿ ಹರಿಯುತ್ತದೆ ಇತ್ತೀಚಿಗೆ ಹಲವಾರು ಕೆರೆಗಳು ಮಾಯವಾಗಿವೆ ಹಾಗೂ ಕಾಲುವೆಗಳು ನಾಶವಾಗಿವೆ ಇದು ನಮ್ಮ ದುರಂತವಾಗಿದೆ ಇದಕ್ಕೆ ಪ್ರಮುಖ ಕಾರಣ ಇಲ್ಲಿ ಅತಿ ಹೆಚ್ಚು ಕಾನೂನು ಬಾಹಿರವಾಗಿ ಮರಳನ್ನು ತೆಗೆಯುತ್ತಿರುವದರಿಂದ ಇಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ನಿಕಟಪೂರ್ವ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಮಂಜು ಕನ್ನಿಕಾ ಬರೆದಿರುವ ಕೃತಿಗಳಾದ ಶಿವನ ಒಡ್ಡೋಲಗದಲ್ಲಿ ಶ್ರೇಯಾಂಕ ಮತ್ತು ಪುನರ್ಜನ್ಮದ ಗುಹೆಯಲ್ಲಿ ಪುಟಾಣಿ ಮಕ್ಕಳು ಎಂಬ ಕೃತಿಗಳನ್ನು ಬಿಡುಗಡೆಗೊಳಿಸಲಾಯಿತು .

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಎನ್ ವಿ ಗೋಪಾಲಗೌಡ ಆಶಯ ನುಡಿಗಳನ್ನು ನುಡಿದರು ಹಾಗೂ ತಾಲೂಕು ಮಾಜಿ ತಾಪಂ ಅಧ್ಯಕ್ಷ ಶ್ರೀನಿವಾಸ್ ರೆಡ್ಡಿ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಕನ್ನಡ ಉಪನ್ಯಾಸಕ ಜೆ.ಜೆ ನಾಗರಾಜ್ ರವರ ಅಧ್ಯಕ್ಷತೆಯಲ್ಲಿ ಕವಿಗೋಷ್ಠಿಯನ್ನು ಏರ್ಪಡಿಸಲಾಗಿತ್ತು ಹಲವಾರು ಕವಿಗಳು ಭಾಗವಹಿಸಿದ್ದರು. ಸಮ್ಮೇಳನ ಅಧ್ಯಕ್ಷರ ಮೆರವಣಿಗೆ ಮತ್ತು ತೇರನ್ನು ನಂಗಲಿಯ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು.

ತಹಸೀಲ್ದಾರ್ ವಿ ಗೀತಾ ತಾಲೂಕು ರೋಟರಿ ಅಧ್ಯಕ್ಷ ಎನ್ ಆರ್ ಸತ್ಯಣ್ಣ, ತಾಪಂ ಇಓ ಸರ್ವೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ರಾಮಚಂದ್ರ, ಗೊಲ್ಲಳ್ಳಿ ಪ್ರಭಾಕರ್ ಗೊಲ್ಲಹಳ್ಳಿ ಪ್ರಭಾಕರ್, ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ನಂಗಲಿ ವಿಶ್ವನಾಥ ರೆಡ್ಡಿ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಚ್ ವೆಂಕಟಗಿರಿಯಪ್ಪ, ಉಪಾಧ್ಯಕ್ಷ ಭಾಸ್ಕರ್ ರೆಡ್ಡಿ ,ಜಿಲ್ಲಾ ಉಪಾಧ್ಯಕ್ಷ ಓಬಳ ರೆಡ್ಡಿ, ತಾಲೂಕು ದಲಿತ ಸಂಘರ್ಷ ಸಮಿತಿ ಅಧ್ಯಕ್ಷ ಮೆಕಾನಿಕ್ ಶ್ರೀನಿವಾಸ್ ತಾಲೂಕು ಕನ್ನಡಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಶಂಕರ್ ಕೇಸರಿ, ವಕೀಲ ಶೇಷಾದ್ರಿ, ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ನಿಕಟ ಪೂರ್ವ ಪದಾಧಿಕಾರಿಗಳು ಇದ್ದರು.

# ತಂದೆ-ತಾಯಿಯನ್ನು ಪ್ರೀತಿಯಿಂದ ಕಾಣಿರಿ

**ಶಿಡ್ಲಘಟ್ಟ:** ನಮಗೆ ಜನ್ಮ ನೀಡಿದ ತಂದೆ-ತಾಯಿಗೆ ಮೂರೊತ್ತು ಊಟ ಹಾಕಿ, ಬಟ್ಟೆ ಕೊಟ್ಟು ಅವರನ್ನು ಹಾರೈಕೆ ಮಾಡದೇ, ಸಾಕದೇ, ಯಾವ ದೇವಾಲಯಕ್ಕೆ ಹೋಗಿ ಪೂಜೆ ಮಾಡಿದರು ಏನೂ ಉಪಯೋಗವಾಗದು ಎಂದು ಶ್ರೀಕ್ಷೇತ್ರ ಗೊಲ್ಲಗಿರಿ ಮಹಾ ಸಂಸ್ಥಾನದ ಶ್ರೀಕೃಷ್ಣಯಾದವಾನಂದ ಮಹಾಸ್ವಾಮಿ ತಿಳಿಸಿದ್ದಾರೆ.

ತಾಲ್ಲೂಕಿನ ಚಿಕ್ಕದಾಸೇನಹಳ್ಳಿಯ ಶ್ರೀಲಕ್ಷ್ಮಿ ನರಸಿಂಹಸ್ವಾಮಿ ದೇಗುಲದ ಜೀರ್ಣೋದ್ಧಾರ, ವಿಮಾನಗೋಪುರ ಕುಂಭಾಭಿಷೇಕ, ಮಹಾ ಗಣಪತಿ, ನವ ಗ್ರಹಗಳು ಹಾಗೂ ನಾಗರ ವಿಗ್ರಹಗಳ ಶಿಲಾಬಿಂಬ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಆಶೀರ್ವಚನ ನೀಡಿ ಅವರು ಮಾತನಾಡಿದರು.

ಹೆತ್ತವರಿಗಿಂತಲೂ ಮಿಗಿಲಾದ ದೇವರಿಲ್ಲ, ಆಡಂಬರದ ಬದುಕು ಬೇಡ. ಎಲ್ಲರೊಂದಿಗೆ ಬೆರೆತು ಸೌಹಾರ್ದತೆಯ ಬದುಕನ್ನು ನಡೆಸಿದರೆ ಮಾತ್ರ ನಮ್ಮೆಲ್ಲರ ಜೀವನದಲ್ಲಿ ಸುಖ ಶಾಂತಿ ನೆಲೆಸುತ್ತದೆ ಈ ಬದುಕು ಸಾರ್ಥಕ ವಾಗುತ್ತದೆ ಎಂದು ಹೇಳಿದರು.

ಭಗವಂತನಿಗೆ ಕೈ ಮುಗಿಯಬೇಕು, ಪೂಜೆ ಸಲ್ಲಿಸಿ ನೈವೇಧ್ಯ ಅರ್ಪಿಸಬೇಕು ಅದಕ್ಕೂ ಮುಖ್ಯವಾಗಿ ಮನೆಯಲ್ಲಿ ತಂದೆ ತಾಯಿಗೆ ಗೌರವ ನೀಡಿ ಅವರನ್ನು ಆರೈಕೆ ಮಾಡಿದರೆ ಮಾತ್ರವೇ ಭಗವಂತನಿಗೆ ಸಲ್ಲಿಸಿದ ಪೂಜೆ ಫಲ ನಮಗೆ ಸಿಗುತ್ತದೆ ಎಂದರು.

ಶಾಸಕರಾದ ಬಿ.ಎನ್. ರವಿಕುಮಾರ್



ಮಾತನಾಡಿ, ಗ್ರಾಮಸ್ಥರ ಈ ಸಾಮರಸ್ಯ ಇತರರಿಗೂ ಮಾದರಿಯಾಗಲಿ ತಮ್ಮ ದಿನ ನಿತ್ಯದ ಕೆಲಸ ಕಾರ್ಯಗಳ ಒತ್ತಡದ ನಡುವೆ ಧಾರ್ಮಿಕ ಪೂಜೆ ಪುನಸ್ಕಾರಗಳಲ್ಲಿ ಭಾಗವಹಿಸುವುದರಿಂದ ಒತ್ತಡ ಕಡಿಮೆ ಆಗಲಿದ್ದು ಮಾನಸಿಕ ನೆಮ್ಮದಿ ಸಿಗಲಿದೆ ಎಂದು ಹೇಳಿದರು.

ಗ್ರಾಮದಲ್ಲಿ ಎಲ್ಲರೂ ಒಗ್ಗಟ್ಟಾಗಿ ಶ್ರೀಲಕ್ಷ್ಮಿನರಸಿಂಹ ಸ್ವಾಮಿ ದೇಗುಲ ನಿರ್ಮಿಸಿದ್ದು, ನಿತ್ಯ ಪೂಜೆ ಪುನಸ್ಕಾರಗಳನ್ನು ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.

ಈ ವೇಳೆ ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ ಮಾಡಿ ಮಂಗಳ ವಾಧ್ಯಘೋಷದೊಂದಿಗೆ ಗೋಮಾತೆ ಪೂಜೆ ಹಾಗು ಗಂಗಾ ಪೂಜೆ ನೆರವೇರಿಸಲಾಯಿತು. ನಾನಾ ಪೂಜೆ ಪುನಸ್ಕಾರ ಹೋಮ ಹವನಗಳನ್ನು ನೆರವೇರಿಸಿ ಮಹಾ ಮಂಗಳಾರತಿ ಮಾಡಿ ತೀರ್ಥಪ್ರಸಾದ ವಿನಿಯೋಗಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯರಾದ ಡಿ.ಟಿ. ಶ್ರೀನಿವಾಸ್, ಎಂ.ನಾಗರಾಜ್ ಯಾದವ್, ಮಾಜಿ ಶಾಸಕಿ ಪೂರ್ಣಿಮಾ, ಮಾಜಿ ಸಂದದರಾದ ಎಸ್.ಮುನಿಸ್ವಾಮಿ, ಮಾಜಿ ಶಾಸಕ ಎಂ.ರಾಜಣ್ಣ, ಬಿಜೆಪಿ ಮುಖಂಡ ಸೀಕಲ್ ಆನಂದಗೌಡ, ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ದೇವಾಲಯ ಅಭಿವೃದ್ಧಿ ಸಮಿತಿ ಸದಸ್ಯರಾದ ಬೇಕರಿ ಗೌಡ , ಭಕ್ತಾದಿಗಳು, ಗ್ರಾಮಸ್ಥರು ಹಾಗು ಸುತ್ತಮುತ್ತಲಿನ ಗ್ರಾಮಗಳವರು ಪಾಲ್ಗೊಂಡಿದ್ದರು.

# ಅದ್ದೂರಿ ರಾಮಸ್ವಾಮಿಯ ಬ್ರಹ್ಮ ರಥೋತ್ಸವ

**ಚೇಳೂರು:** ಪಟ್ಟಣದ ಪ್ರಸಿದ್ಧ ಐತಿಹಾಸಿಕ ದೇವಾಲಯ ಕೋದಂಡ ರಾಮಸ್ವಾಮಿಯ ಬ್ರಹ್ಮ ರಥೋತ್ಸವವು ಮಾಘ ಮಾಸದ ಷಷ್ಠಿಯ ಮಾರನೆ ದಿನವಾದ ಮಂಗಳವಾರ ಸಂಭ್ರಮದಿಂದ ನಡೆಯಿತು.

ಶತಮಾನಗಳ ಇತಿಹಾಸ ಹೊಂದಿರುವ ಕೋದಂಡ ರಾಮಸ್ವಾಮಿ ರಥೋತ್ಸವ ಸಲುವಾಗಿ ದೇವಸ್ಥಾನದಲ್ಲಿ ವಿವಿಧ ಪೂಜಾ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು. ಮೂಲ ದೇವರಿಗೆ ಪಂಚಾಮೃತ ಅಭಿಷೇಕ, ಹೋಮ, ವೇದ, ಉಪ ನಿಷತ್ತುಗಳ ಮಂತ್ರಗಳ ಘೋಷಣೆ ಮೊಳಗಿದವು.

ಪ್ರತಿ ವರ್ಷದಂತೆ ಈ ಬಾರಿಯೂ ಇಂದು ನಡೆದ ರಥೋತ್ಸವಕ್ಕೆ ಹೂವುಗಳಿಂದ ಅಲಂಕಾರಗೊಳಿಸಿದ್ದ ಬೃಹತ್ ರಥದಲ್ಲಿ ಸೀತಾರಾಮ. ಸಮೇತ ಲಕ್ಷ್ಮಣ, ಆಂಜನೇಯ, ಉತ್ಸವ ಮೂರ್ತಿಗಳು ಇಟ್ಟಿದ್ದರು.

ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮತ್ತು ಬಾಲಕೃಷ್ಣ ಸ್ವಾಮಿಜೀ. ಗೋವಿಂದ ನಾಮ ಸ್ಮರಣೆದೊಂದಿಗೆ ರಥವನ್ನು ಎಳೆಯುವ ಮೂಲಕ ಚಾಲನೆ ನೀಡಿದರು.

ರಥಕ್ಕೆ ದವನ, ಹೂವು .ಬಾಳೆಹಣ್ಣು. ಎಸೆದು ಭಕ್ತಾದಿಗಳು ಹರಕೆ ತೀರಿಸಿಕೊಂಡರು. ತಮಟೆ. ಮಂಗಳ ವಾದ್ಯಗಳೊಂದಿಗೆ ಡೋಳ್ಳು ಕುಣಿತ ಜಾನಪದ ಕಲಾ ತಂಡಗಳು ಎಂ.ಜಿ.ಸರಕಲ್ ನಲ್ಲಿ ಅಯ್ಯಪ್ಪ ಸ್ವಾಮಿ ಭಜನ ಮಂಡಳಿಯಿಂದ ಭಜನೆ ಮತ್ತು ಅನ್ನಸಂತರ್ಪನೆ ರಥೋತ್ಸವಕ್ಕೆ ಮೆರಗು ನೀಡಿದವು.

ದೇವಾಲಯದ ಮಂಭಾಗದಿಂದ ಹೊರಟ



ರಥೋತ್ಸವ ಪಟ್ಟಣದ ಪ್ರಮುಖ ರಥ ಬೀದಿಗಳಲ್ಲಿ ಸಂಚರಿಸಿತು.

ಶ್ರೀ ಆಂಜನೇಯ ಸೇವಾ ಸಮಿತಿಯವರು ಶ್ರೀರಾಮ ದೇವಾಲಯದ ಮುಂದೆ ಏರ್ಪಾಡಿಸಿದ್ದ ಅನ್ನದಾಸೋಹಕ್ಕೆ ತಹಸೀಲ್ದಾರ್ ಶ್ರೀನಿವಾಸಲು ನಾಯುಡು ಚಾಲನೆ ನೀಡಿದರು. ಶಿರಸ್ತೇದಾರ್ ಎಸ್.ಎಲ್.ಸತೀಶ್.ಪಿ.ಎಸ್ಐ.ಹರೀಷ್ ಭಾಗಿಯಾಗಿದ್ದರು.ಮಾರುತಿ ಸೇವಾ ಸಮಿತಿಯವರು ಕೋಸಂಬರಿ. ಮಜ್ಜಿಗೆ ನೀರಿನ ಪ್ಯಾಕೆಟ್, ಪ್ರಸಾದ. ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಿದ್ದರು.

ಬಗೆಬಗೆಯ ತಿಂಡಿ ತಿನಿಸುಗಳು ಆಟಿಕೆ ವಸ್ತುಗಳು, ಗೃಹೋಪಯೋಗಿ ವಸ್ತುಗಳು ನೂರಾರು ಅಂಗಡಿಗಳಲ್ಲಿ ವ್ಯಾಪಾರ ಜೋರಾಗಿ ನಡೆಯಿತು.

ಈ ಸಂದರ್ಭದಲ್ಲಿ ರಥೋತ್ಸವದಲ್ಲಿ ಚೇಳೂರು ತಹಸೀಲ್ದಾರ್ ಶ್ರೀನಿವಾಸಲುನಾಯುಡು. ಪಶು ಇಲಾಖೆಯ ಸಹಾಯಕ ನೀರ್ದೇಶಕ ಕುಲಕರ್ಣಿ ಶಿರಸ್ತೇದಾರ್ ಎಸ್.ಎಲ್ ಸತೀಶ್. ರಾಜಸ್ವ ನೀರೀಕ್ಷಕ ಎಂ.ಎನ್.ಈಶ್ವರ್. ಪಿ.ಡಿಓ ಕೆ.ವೆಂಕಟಾಚಲಪತಿ ಹನುಮಂತ ಮತ್ತು ಕೊದಂಡರಾಮಸ್ವಾಮಿ ರಥೋತ್ಸವದ ರೂವಾರಿ ಪಿ.ವಿ.ರಾಮಾಂಜನೇಯರೆಡ್ಡಿ ನೇತೃತ್ವದಲ್ಲಿ ಕೈಂಕರ್ಯಗಳು ಸಡಗರ ಸಂಭ್ರಮದಿಂದ ನಡೆಯಿತು. ಸಂಘ ಸಂಸ್ಥೆಯವರು, ರಾಜಕೀಯ ಮುಖಂಡರು, ಚುನಾಯಿತ ಜನ ಪ್ರತಿನಿದಿಗಳು ದಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ರಥೋತ್ಸವ ಕಾರ್ಯಕ್ರಮಗಳನ್ನು ಯಶಸ್ವಿ ಗೊಳಿಸಿದರು ರಥ ಎಳೆಯುವಾಗ ಚಕ್ರಗಳ ಪಕ್ಕದಲ್ಲೇ ಇದ್ದ ಚೇಳೂರು ಪಿ.ಎಸ್ ಐ ಹರೀಷ್ ನೇತೃತ್ವದ ಪೋಲಿಸರು ತುಂಬಾ ಮುಂಜಾಗ್ರತೆಯಿಂದ ಯಾವುದೇ ಸಮಸ್ಯೆ ಬರದೀರಾ ಬಾರೀ ಬಂದೋಬಸ್ತು ಮಾಡಿದ್ದನ್ನು ಜನರಿಂದ ಮೆಚ್ಚುಗೆ ವ್ಯಕ್ತವಾಯಿತು

# ರೈತರಲ್ಲಿ ಕರ ಪತ್ರದ ಮುಖಾಂತರ ಜಾಗೃತಿ ಮೂಡಿಸಲು ಮನವಿ

**ಮುಳಬಾಗಿಲು:** ರಾಷ್ಟ್ರೀಯ ರಾಜ್ಯ ಹಾಗೂ ಗ್ರಾಮೀಣ ರಸ್ತೆಗಳಲ್ಲಿ ಹುರಳಿ, ರಾಗಿ, ಒಕ್ಕಣಿ ಮಾಡುವುದರಿಂದ ಆಗುವ ಅನಾಹುತಗಳ ಬಗ್ಗೆ ರೈತರಲ್ಲಿ ಕರ ಪತ್ರದ ಮುಖಾಂತರ ಜಾಗೃತಿ ಮೂಡಿಸಿ, ಆಗುವ ಅನಾಹುತಗಳನ್ನು ತಪ್ಪಿಸಬೇಕೆಂದು ರೈತ ಸಂಘದಿಂದ ಲೋಕೋಪಯೋಗಿ ಇಲಾಖೆ ಮುಂದೆ ಹುರಳಿ ಸಮೇತ ಹೋರಾಟ ಮಾಡಿ, ಮನವಿ ನೀಡಿ, ಒತ್ತಾಯಿಸಲಾಯಿತು.

ಕೋಟ್ಯಾಂತರ ರೂಪಾಯಿ ಅನುದಾನಗಳಲ್ಲಿ ಅಭಿವೃದ್ಧಿ ಪಡಿಸಿರುವ ರಸ್ತೆಗಳಲ್ಲಿ ಮಾಡುತ್ತಿರುವ ಹುರಳಿ, ರಾಗಿ, ಒಕ್ಕಣಿಯಿಂದ ಆಗುತ್ತಿರುವ ಅನಾಹುತಗಳಿಗೆ ಜವಾಬ್ದಾರಿ ಯಾರು?. ಕೃಷಿ ಅಧಿಕಾರಿಗಳ ಬೇಜವಾಬ್ದಾರಿಯೇ ಇಲ್ಲವೆ, ಕಣ್ಮರೆಯಾಗಿರುವ ಹಳ್ಳಿಗಳಲ್ಲಿನ ಕಣಗಳ ನಿರ್ಮಾಣ ಮಾಡಲು ವಿಫಲವಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನಿರ್ಲಕ್ಷ್ಯವೇ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ತಾಲ್ಲೂಕು ಆಡಳಿತವನ್ನು ಪ್ರಶ್ನೆ ಮಾಡಿದರು.

ಗ್ರಾಮೀಣ ಪ್ರದೇಶದಲ್ಲಿ ಕೂಲಿ ಕಾರ್ಮಿಕರ ಅಭಾವ ಕೃಷಿ ಇಲಾಖೆಯ ಅಧಿಕಾರಿಗಳ ಬೇಜವಾಬ್ದಾರಿಯಿಂದ ಸಮಯಕ್ಕೆ ಸಿಗದ ಯಂತ್ರೋಪಕರಣಗಳು ದುಬಾರಿ ಖಾಸಗಿ



ಯಂತ್ರೋಪಕರಣಗಳ ವೆಚ್ಚ ಭರಿಸಲಾಗದೆ, ಗ್ರಾಮೀಣ ಪ್ರದೇಶದ ಬಡ ರೈತ ಕೂಲಿಕಾರ್ಮಿಕರು 3 ತಿಂಗಳು ಕಷ್ಟಾಪಟ್ಟು ಬೆಳೆದ ರಾಗಿ, ಭತ್ತ, ಹುರಳಿಕಾಳನ್ನು ಬೇರ್ಪಡಿಸಿಕೊಳ್ಳಲು ಅನ್ಯ ಮಾರ್ಗವಿಲ್ಲದೆ, ರಸ್ತೆಗಳಲ್ಲಿ ಓಡಾಡುವ ವಾಹನಗಳನ್ನೇ ಅವಲಂಬಿಸಿಕೊಂಡು ಒಕ್ಕಣಿ ಮಾಡಲು ಮುಂದಾಗಿದ್ದು, ಆಗುವ ಅನಾಹುತಗಳ ಬಗ್ಗೆ ರೈತರಿಗೆ ಮನವರಿಕೆ ಮಾಡಿಕೊಡುವ ಅಧಿಕಾರಿಗಳೇ ಇಲ್ಲದಂತಾಗಿದೆ ಎಂದು ಆಕ್ರೋಷ ವ್ಯಕ್ತಪಡಿಸಿದರು.

ಪೂರ್ವಜರ ಕಾಲದಲ್ಲಿ ಬೆಳೆದ ಬೆಳೆಯನ್ನು ಗ್ರಾಮೀಣ ಪ್ರದೇಶಗಳಲ್ಲಿ ರೈತರು ಒಗ್ಗಟ್ಟಾಗಿ ಕಣಗಳನ್ನು ಸಿದ್ದಪಡಿಸಿಕೊಂಡು ಸಗಣಿಯಿಂದ ಸಾರಿಸಿ ಸಡಗರ ಸಂಭ್ರಮದಿಂದ ಬೆವರು ಸುರಿಸಿ ಬೆಳೆದ ಬೆಳೆಯನ್ನು ಒಕ್ಕಣಿ ಮಾಡುವ ಮುಖಾಂತರ ರಾಶಿ ಮಾಡಿ, ಪೂಜೆ ಮಾಡಿ ಮನೆ ತುಂಬಿಸಿಕೊಳ್ಳುವ ಸಂಪ್ರದಾಯ ಇಂದು ಕಣ್ಮರೆಯಾಗಿರುವುದಕ್ಕೆ ವಿಫಲವಾಗಿರುವ ಅಧಿಕಾರಿಗಳ ವೈಫಲ್ಯ ಎಂದು ಆರೋಪಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಪಾರುಕ್‌ಪಾಷ ಮಾತನಾಡಿ ಪಂಚಾಯಿತಿವತಿಯಿಂದ ಸರ್ಕಾರದ ಜಾಗವನ್ನು ಗುರುತಿಸಿ ಪ್ರತಿ ಹಳ್ಳಿಯಲ್ಲೂ ನರೇಗದಲ್ಲಿ ಕಣ ನಿರ್ಮಾಣ ಮಾಡಿ ರೈತರಿಗೆ ಅನುಕೂಲಮಾಡಿ ರಸ್ತೆಗಳಲ್ಲಿ ಒಕ್ಕಣಿ ಮಾಡುವುದರಿಂದ ಅಪಘಾತಗಳು ಹೆಚ್ಚಾಗುವ ಜೊತೆಗೆ ಆ ವಾಹನಗಳಿಂದ ಸುರಿಯುವ ಡೀಸಲ್, ಆಯಿಲ್, ರಾಗಿ ಮತ್ತು ಹುರಳಿಯಲ್ಲಿ ಮಿಶ್ರಣವಾಗಿ ನಾನಾ ರೋಗಗಳಿಗೆ ಕಾರಣವಾಗುತ್ತದೆ ಎಂಬುದನ್ನು ಮನವರಿಕೆ ಮಾಡುವ ಜೊತೆಗೆ ಬಾರಿ ವಾಹನಗಳು ಓಡಾಡುವಾಗ ಹುಲ್ಲು ಸೈಲೆನ್ಸರ್‌ಗೆ ಸಿಲುಕಿಕೊಂಡು ಬೆಂಕಿ ಹಚ್ಚಿಕೊಂಡು ಅನಾಹುತಗಳು ಸಂಭವಿಸುತ್ತವೆ ಎಂಬುದನ್ನು ರೈತರಿಗೆ ಮನವರಿಕೆ ಮಾಡಿಕೊಳ್ಳಲು ವಿಫಲವಾಗಿರುವ ಕಾರಣ ರೈತರು ರಸ್ತೆಯಲ್ಲೇ ಒಕ್ಕಣಿ ಮಾಡುತ್ತಿದ್ದಾರೆಂದರು. ಸಂಬಂಧಪಟ್ಟ ಪಂಚಾಯಿತಿ ಅಧಿಕಾರಿಗಳಿಗೆ ತಾಲ್ಲೂಕು ಆಡಳಿತಕ್ಕೆ ಪತ್ರ ಬರೆದು ರಾಷ್ಟ್ರೀಯ, ರಾಜ್ಯ ಗ್ರಾಮೀಣ ರಸ್ತೆಗಳಲ್ಲಿ ಒಕ್ಕಣಿ ಮಾಡದಂತೆ ರೈತರಿಗೆ ಕರಪತ್ರದ ಮುಖಾಂತರ ಜಾಗೃತಿ ಮೂಡಿಸಿ ಮುಂದೆ ಆಗುವ ಅನಾಹುತಗಳನ್ನು ಹಾಗೂ ಹದಗೆಡುವ ಆರೋಗ್ಯವನ್ನು ರಕ್ಷಣೆ ಮಾಡಬೇಕೆಂದು ಮನವಿ ಮೂಲಕ ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಲೋಕೋಪಯೋಗಿ ಅಧಿಕಾರಿಗಳು ರಸ್ತೆಗಳಲ್ಲಿ ಒಕ್ಕಣಿ ಬಗ್ಗೆ ಸಂಬಂಧಪಟ್ಟ ಇಲಾಖೆಯ ಸಭೆ ಕರೆದು ಸಮಸ್ಯೆ ಬಗೆ ಹರಿಸುವ ಜೊತೆಗೆ ರೈತರಲ್ಲಿ ಜಾಗೃತಿ ಮೂಡಿಸುವ ಭರವಸೆಯನ್ನು ನೀಡಿದರು. ಹೋರಾಟದಲ್ಲಿ ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ, ರಾಜೇಶ್, ಭಾಸ್ಕರ್, ಸುನಿಲ್‌ಕುಮಾರ್, ಶ್ರೀನಿವಾಸ್, ಜುಬೇರ್‌ಪಾಷ, ವಿಜಯ್‌ಪಾಲ್, ಸುಪ್ರಿಂ ಚಲ, ಪದ್ಮಘಟ್ಟ ಧರ್ಮ, ನಾಗೇಶ್, ಹೆಬ್ಬಣಿ ಆನಂದರೆಡ್ಡಿ, ಕೇಶವ, ವೇಣು, ಯಾರಂಘಟ್ಟ ಗಿರೀಶ್, ಮುಂತಾದವರು ಇದ್ದರು.

# ಕೈಕೊಟ್ಟ ಫಸಲು: ರೈತ ಕಂಗಾಲು

**ಶಿಡ್ಲಘಟ್ಟ:** ತಾಲ್ಲೂಕಿನ ಆನೂರಿನ ದೇವರಾಜ್ ಎಂಬ ರೈತ 2 ಎಕರೆ ಜಮೀನಿನಲ್ಲಿ ಹೂಕೋಸಿನ ನಾರು ನಾಟಿ ಮಾಡಿದ್ದು 65 ದಿನಗಳಾಗಿವೆ ಗಡ್ಡೆ ಕಟ್ಟುವ ಹಂತದಲ್ಲಿ ಹೂಕೋಸು ಫಸಲು ಬಿಡದೆ ಕೈಕೊಟ್ಟಿದ್ದು ರೈತ ಕಂಗಾಲಾಗಿ ಕೆಂಗೆಟ್ಟಿದ್ದಾನೆ.

ಆದರೀಗ ಹೂಕೋಸು ಫಸಲು ಬಿಡಬೇಕಾದ ಸಮಯದಲ್ಲಿ ಗಡ್ಡೆ ಕಟ್ಟದೆ ಕೈಕೊಟ್ಟಿದೆ,ಇದಕ್ಕೆ ಕಳಪೆ ಬಿತ್ತನೆಬೀಜ ಕಾರಣ ಎಂದು ರೈತ ದೇವರಾಜ್ ದೂರಿದ್ದಾರೆ.

ಹೊಸಕೋಟೆ ತಾಲ್ಲೂಕು ಅತ್ತಿಬೆಲೆಯ "ಮಾರುತಿ ಆಗ್ರೋ ಸೀಡ್ಸ್‌ನಿಂದ ಬಿತ್ತನೆ ಬೀಜ ಖರೀದಿಸಿ 25 ಸಾವಿರ ನಾರು ನಾಟಿ ಮಾಡಿ ಗೊಬ್ಬರ, ಔಷಧ ಸಿಂಪಡಣೆ ಎಲ್ಲವೂ ಸೇರಿ ಲಕ್ಷಾಂತರ ರೂ. ಖರ್ಚು ಮಾಡಲಾಗಿತ್ತು ಆದರೆ, ಫಸಲು ಗಡ್ಡೆ ಕಟ್ಟಿಲ್ಲ ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕಿ ಮಂಜುಳಾ ಜಮೀನಿಗೆ ಭೇಟಿ ನೀಡಿದ್ದು ಪರಿಶೀಲಿಸಿ, ಬೆಳೆಯ ಮಾದರಿಯನ್ನು ಸಂಗ್ರಹಿಸಿ ಕೊಂಡೊಯ್ದಿದ್ದಾರೆ.



ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಮಂಜುಳಾ ಮಾತನಾಡಿ ಮೇಲ್ನೋಟಕ್ಕೆ ಇದು ಬಿತ್ತನೆ ಬೀಜದ ಲೋಪವೋ, ಔಷಧ, ರಸಗೊಬ್ಬರದ ಲೋಪವೋ ಎಂಬುದು ಸ್ಪಷ್ಟವಾಗುತ್ತಿಲ್ಲ ಹಾಗಾಗಿ ತಳಿ ಸಂಶೋಧನಾ ಇಲಾಖೆಗೆ ಪತ್ರ ಬರೆಯುತ್ತೇನೆ. ಹಿರಿಯ ಅಧಿಕಾರಿ, ತಜ್ಞರ ತಂಡ ಭೇಟಿ ನೀಡಿ ಪರಿಶೀಲಿಸಿ ನಿಖರವಾಗಿ ಸಮಸ್ಯೆ ಏನೆಂದು ಸ್ಪಷ್ಟಪಡಿಸಲಿದ್ದು, ನಂತರ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

# ರಾಜ್ಯಮಟ್ಟದ ಸ್ಪರ್ಧೆ: ಬಿಜಿಎಸ್ ಕಾಲೇಜಿಗೆ ಪ್ರಥಮ ಸ್ಥಾನ



**ಶಿಡ್ಲಘಟ್ಟ:** ಧಾರವಾಡದಲ್ಲಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಚರ್ಚಾ ಸ್ಪರ್ಧೆ ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ತಾಲ್ಲೂಕಿನ ಹನುಮಂತಪುರ ಗೇಟ್‌ನ ಬಿಜಿಎಸ್ ಕಾಲೇಜು ವಿದ್ಯಾರ್ಥಿನಿ ಆರ್. ಚಾತುರ್ಯ ಪ್ರಥಮ ಸ್ಥಾನ ಪಡೆದುಕೊಂಡಿದ್ದಾಳೆ.

ರಾಜ್ಯ ಸಹಕಾರ ಮಹಾಮಂಡಳ, ಧಾರವಾಡದ ಕರ್ನಾಟಕ ವಿಶ್ವ ವಿದ್ಯಾಲಯ ಹಾಗೂ ವಿದ್ಯಾರ್ಥಿ ಕಲ್ಯಾಣ ವಿಭಾಗದ ಆಶ್ರಯದಲ್ಲಿ ಧಾರವಾಡದ ಸುವರ್ಣ ಶತಮಾನೋತ್ಸವ ಭವನದಲ್ಲಿ ಪದವಿಪೂರ್ವ ವಿಭಾಗದ ರಾಜ್ಯಮಟ್ಟದ ಚರ್ಚಾ ಸ್ಪರ್ಧೆ ಏರ್ಪಡಿಸಲಾಗಿತ್ತು. ಗ್ರಾಮೀಣಾಭಿವೃದ್ಧಿಯಲ್ಲಿ ಸಹಕಾರ ಸಂಘಗಳು ಮಾತ್ರವೇ ಪರಿಣಾಮಕಾರಿ ಪಾತ್ರ ವಹಿಸಬಲ್ಲವು ಎಂಬ ವಿಷಯದ ಮೇಲೆ ನಗರದ ನಗರ್ತಪೇಟೆಯ ರಾಘವೇಂದ್ರ, ಪೂರ್ಣಿಮಾ ಅವರ ಪುತ್ರಿ ಚಾತುರ್ಯ ಪ್ರಬಂಧ ಮಂಡಿಸಿ ಪ್ರಥಮ ಬಹುಮಾನ ಪಡೆದಿದ್ದಾರೆ. ಚಾತುರ್ಯಳ ಈ ಸಾಧನೆಗೆ ಕಾಲೇಜು ಆಡಳಿತ ಮಂಡಳಿ, ಸಂಘ ಸಂಸ್ಥೆಗಳಿಂದ ಅಭಿನಂದನೆ ಸಲ್ಲಿಸಿದ್ದಾರೆ.

# ಅಂಬೇಡ್ಕರ್‌ಗೆ ಅಗೌರವ: ಬೃಹತ್ ಕಾಲ್ನಡಿಗೆ ಜಾಥಾ

**ಶಿಡ್ಲಘಟ್ಟ:** ನಗರದ ಜಾಂಭವ ಯುವ ಸೇನಾ ವತಿಯಿಂದ ಒಳ ಮೀಸಲಾತಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ರವರು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರಿಗೆ ತೋರಿಸಿರುವ ಅಗೌರವದ ವಿರುದ್ಧ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.

ನಗರದ ಇಂದಿರಾ ಕ್ಯಾಂಟೀನ್ ನಿಂದ ಟಿ.ಬಿ ರಸ್ತೆ ಮೂಲಕ ಬೃಹತ್ ಕಾಲ್ನಡಿಗೆ ಜಾಥದ ಮೂಲಕ ತಾಲ್ಲೂಕು ಕಚೇರಿ ಆವರಣಕ್ಕೆ ತೆರಳಿ ಆವರಣದ ಮುಂದೆ ಅಮಿತ್ ಶಾ ಭಾವಚಿತ್ರ ಹಿಡಿದು ಅಮಿತ್ ಶಾ ರವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನೆ ಮಾಡಿದರು.

ನಂತರ ಜಾಂಭವ ಯುವ ಸೇನಾ ವತಿಯಿಂದ ಒಳ ಮೀಸಲಾತಿ ಹಾಗೂ ಕೇಂದ್ರ ಸಚಿವ ಅಮಿತ್ ಶಾ ವಿರುದ್ಧ ಸರ್ಕಾರಕ್ಕೆ ತಹಸೀಲ್ದಾರ್ ಬಿ.ಎನ್ ಸ್ವಾಮಿ ರವರ ಮೂಲಕ ಮನವಿ ಪತ್ರವನ್ನು ಸಲ್ಲಿಸಲಾಯಿತು. ಈ ವೇಳೆ ತಾಲ್ಲೂಕು ಜಾಂಭವ ಯುವ ಸೇನಾ ಪದಾಧಿಕಾರಿಗಳಿಂದ ನೂತನ ಕಚೇರಿಯನ್ನು ರಾಜ್ಯಾಧ್ಯಕ್ಷ ಡಾ.ರಮೇಶ್ ಚಕ್ರವರ್ತಿ ಹಾಗೂ ತಾಲ್ಲೂಕು ಅಧ್ಯಕ್ಷ ಮಳ್ಳೂರು ಎಂ.ಸಂದೀಪ್ ಕುಮಾರ್ ರವರು




ಟೇಪ್ ಕತ್ತರಿಸುವ ಮೂಲಕ ಉದ್ಘಾಟನೆ ಮಾಡಿದರು.

ರಾಜ್ಯಾಧ್ಯಕ್ಷ ಡಾ.ರಮೇಶ್ ಚಕ್ರವರ್ತಿ ಮಾತನಾಡಿ, ಭಾರತ ದೇಶವೇ ತಲೆತಗ್ಗಿಸುವಂತಹ ವಿಚಾರ ಕೇಂದ್ರ ಸರ್ಕಾರದಲ್ಲಿ ಗೃಹ ಸಚಿವರಾದ ಅಮಿತ್ ಶಾ ಅವರು ಡಾ.ಬಿ.ಆರ್ ಅಂಬೇಡ್ಕರ್ ಅವರ ಹೆಸರಿಗೆ ಕಳಂಕ ತರುವಂತ ವಿಚಾರವನ್ನು ಇಡೀ ಭಾರತ ದೇಶವೇ ಖಂಡಿಸಿ ಉಗ್ರವಾದ ಪ್ರತಿಭಟನೆಗಳು ಮಾಡಿಕೊಂಡು ಬರುತ್ತಿದ್ದರು ಅವರು ಯಾವುದೇ ರೀತಿಯ ಬಹಿರಂಗವಾಗಿ ಕ್ಷಮಾರ್ಪಣೆ ಯಾಚಿಸಿಲ್ಲ. ಎಷ್ಟೇ ಮನವಿಗಳನ್ನು ಕೊಟ್ಟರು ಸಹಾ ಅವರು ಸ್ಪಂದಿಸದೆ ಇರುವುದರಿಂದ ಜಾಂಭವ ಯುವ ಸೇನಾ ಸಂಘಟನೆ ವತಿಯಿಂದ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಾಂಭವ ಯುವ ಸೇನಾ ಜಿಲ್ಲಾಧ್ಯಕ್ಷ ಶ್ರೀನಿವಾಸ್,ಜಿಲ್ಲಾ ಉಪಾಧ್ಯಕ್ಷ ಮಳ್ಳೂರು ದ್ಯಾವಪ್ಪ, ಗೌರವ ಅಧ್ಯಕ್ಷ ಕಂಬದಹಳ್ಳಿ ದೇವರಾಜ್, ಪ್ರಧಾನ ಕಾರ್ಯದರ್ಶಿ ಮಳ್ಳೂರು ಗಂಗಾಧರ್, ಕಾರ್ಯದರ್ಶಿ ಕಾಚಹಳ್ಳಿ ಮುನಿಯಪ್ಪ , ಮಾನವ ಹಕ್ಕುಗಳ ರಾಜ್ಯ ಉಪಾಧ್ಯಕ್ಷ ಮಳ್ಳೂರು ಅಶೋಕ್, ಜಾಂಭವ ಯುವ ಸೇನಾ ಕಲಾಮಂಡಳಿ ಅಧ್ಯಕ್ಷ ಶಿವಣ್ಣ,ತಾಲ್ಲೂಕು ಅಧ್ಯಕ್ಷ ಮಳ್ಳೂರು ಎಂ.ಸಂದೀಪ್ ಕುಮಾರ್,ಕಟ್ಟಡ ಕಾರ್ಮಿಕ ಅಧ್ಯಕ್ಷ ನರೇಂದ್ರ, ಉಪಾಧ್ಯಕ್ಷ ಶ್ರೀನಿವಾಸ್ ಗೌರವಾಧ್ಯಕ್ಷ ಶ್ರೀರಾಮ್, ಖಜಾಂಚಿ ಗಂಗನಹಳ್ಳಿ ನರಸಿಂಹಪ್ಪ, ಕಾರ್ಯದರ್ಶಿ ಶಶಿ, ಪ್ರಧಾನ ಕಾರ್ಯದರ್ಶಿ ಅಪ್ಪೇ ಗೌಡನಹಳ್ಳಿ ದೇವರಾಜ್, ಚೀಮನಹಳ್ಳಿ ವೆಂಕಟಸ್ವಾಮಿ, ಪ್ರವೀಣ್, ಮಹೇಶ್, ದೇವನಹಳ್ಳಿ ತಾಲ್ಲೂಕು ಅಧ್ಯಕ್ಷ ಮುನಿರಾಜು, ಖಜಾಂಚಿ ವೆಂಕಟರಮಣಪ್ಪ, ಗಂಗನಹಳ್ಳಿ ದ್ಯಾವಪ್ಪ, ಎನ್.ಪ್ರಕಾಶ್, ಭೀಮಕಣದ ಶ್ರೀನಿವಾಸ್ ಮುಂತಾದವರು ಪಾಲ್ಗೊಂಡಿದ್ದರು.

# 26ಕೋಟಿ ವೆಚ್ಚದ ರಸ್ತೆ ಕಾಮಗಾರಿಗೆ ಗೃಹಸಚಿವ ಚಾಲನೆ

**ಕೊರಟಗೆರೆ:** ಸಿಎಂ ಸಿದ್ದರಾಮಯ್ಯ ಕರ್ನಾಟಕ ಸರಕಾರದ 17ನೇ ಬಜೆಟ್ ಮಂಡನೆ ಮಾಡ್ತಾರೇ. ಬಜೇಟ್‌ನಲ್ಲಿ ಗ್ರಾಮೀಣ ಭಾಗದ ಅಭಿವೃದ್ದಿಗೆ ಹೆಚ್ಚಿನ ಅನುದಾನ ನೀಡುವಂತೆ ಸಿಎಂಗೆ ನಾನು ಮನವಿ ಮಾಡಿದ್ದೇನೆ. ಗ್ಯಾರಂಟಿ ಯೋಜನೆಯ ಜೊತೆ ಗ್ರಾಮೀಣ ಭಾಗದ ಅಭಿವೃದ್ದಿಯು ಆಗಲಿದೆ.ಟೀಕೆ ಮಾಡೋರಿಗೆ ಅಭಿವೃದ್ದಿಯ ಉತ್ತರವನ್ನೇ ನೀಡೋಣ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು.

ಕೊರಟಗೆರೆ ತಾಲೂಕು ಚನ್ನರಾಯನ ದುರ್ಗ ಹೋಬಳಿ ಜೆಟ್ಟಿ ಅಗ್ರಹಾರಗ್ರಾಪಂ ವ್ಯಾಪ್ತಿಯ ಜಂಪೇನಹಳ್ಳಿ ಕ್ರಾಸಿನ ಬಳಿ ಪಿಡ್ಲ್ಯೂಡಿ ಇಲಾಖೆಯಿಂದ ಬುಧವಾರ ಏರ್ಪಡಿಸಲಾಗಿದ್ದ 26ಕೋಟಿ ವೆಚ್ಚದ ವಿವಿಧರಸ್ತೆಅಭಿವೃದ್ದಿ ಕಾಮಗಾರಿಗಳಿಗೆ ಗುದ್ದಲಿಪೂಜೆ ನೇರವೆರಿಸಿ ಮಾತನಾಡಿದರು.

ಬಜೇಟ್‌ನಲ್ಲಿ ತುಮಕೂರು ಜಿಲ್ಲೆ ಮತ್ತು ಕೊರಟಗೆರೆ ಕ್ಷೇತ್ರದ ನೀರಾವರಿ ಯೋಜನೆಗೆ ಹೆಚ್ಚಿನಅನುಧಾನಸೀಗಲಿದೆ. ಕೊರಟಗೆರೆ ಪಪಂಯನ್ನು ಪುರಸಭೆಯನ್ನಾಗಿ ಮಾಡಲು ಈಗಾಗಲೇ ಸರಕಾರಚಿಂತನೆ ನಡೆಸುತ್ತಿದೆ.ಜಂಪೇನಹಳ್ಳಿ ಕ್ರಾಸ್‌ನಲ್ಲಿಕುಡಿಯುವ ನೀರು, ಹೈಮಾಸ್ಕ್ ಲೈಟ್ ವ್ಯವಸ್ಥೆ ಮಾಡಿಸುತ್ತೇನೆ. ಸರಕಾರದಲ್ಲಿದುಡ್ಡಿಲ್ಲಅಭಿವೃದ್ದಿ ಕೆಲಸಗಳು ಆಗ್ತಿಲ್ಲ ಎಂಬ ತಪ್ಪು ಸಂದೇಶ ನೀಡ್ತಿದ್ದಾರೇ. 5ಗ್ಯಾರಂಟಿಯ ಬಗ್ಗೆ ಟೀಕೆ ಮಾಡಿದೋರು ಈಗ ಅದರ ಲಾಭ ಪಡೆಯುತ್ತಿಲ್ಲವೇಎಂದರು.



ನಾನು ಕೊರಟಗೆರೆಕ್ಷೇತ್ರಕ್ಕೆ ಬಂದ ನಂತರ 5ನೇ ಸಲ ಮುಖ್ಯರಸ್ತೆ ಅಭಿವೃದ್ದಿ ಮಾಡ್ತಿದ್ದೀನಿ. ಗುಣಮಟ್ಟದಕಾಮಗಾರಿ ನಡೆಯದೇ ಪಿಡ್ಲ್ಯೂಡಿರಸ್ತೆಯು ದುಸ್ಥಿತಿಗೆ ತಲುಪಿದೆ.5ವರ್ಷ ಗುತ್ತಿಗೆದಾರನೇ ರಸ್ತೆಯ ನಿರ್ವಹಣೆ ಮಾಡ್ಬೇಕು.ಇಲ್ಲವಾದ್ರೇ ನಾನು ಸುಮ್ಮನೇ ಇರೋದಿಲ್ಲ ಎಚ್ಚರಿಕೆಇರಲಿ ನಿಮಗೇ. ಜಂಪೇನಹಳ್ಳಿಯಿಂದ ಶ್ರೀನಿವಾಸಪುರದ ವರೇಗೆ ಈಗ 6ಕೋಟಿ ಅನುಧಾನ ನೀಡಿದ್ದೇನೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿತುಮಕೂರುಜಿಲ್ಲಾದಿಕಾರಿ ಶುಭಕಲ್ಯಾಣ್, ಎಸ್ಪಿ ಅಶೋಕ್, ಕೊರಟಗೆರೆ ತಹಶೀಲ್ದಾರ್ ಮಂಜುನಾಥ. ಕೆ, ಪಿಡ್ಲ್ಯೂಡಿ ಎಇಇ ಸ್ವಾಮಿ, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷಅರಕೆರೆಶಂಕರ್, ಗ್ರಾಪಂಅಧ್ಯಕ್ಷ ಪುಷ್ಪರವಿಕುಮಾರ್, ಮಾಜಿಗ್ರಾಪಂಅಧ್ಯಕ್ಷೆ ಲಕ್ಷ್ಮೀ, ಮುಖಂಡರಾದ ಮಹಾಲಿಂಗಪ್ಪ, ಟೈಗರ್‌ನಾಗ್, ಪ್ರಸನ್ನಕುಮಾರ್, ಮಂಜುನಾಥ, ಕಿರಣ್, ರಂಗರಾಜು ಸೇರಿದಂತೆಇತರರುಇದ್ದರು.

**ನನ್ನ ಪಕ್ಷದ ಗ್ಯಾರಂಟಿ ಯೋಜನೆಯ ಪ್ರಣಾಳಿಕೆ ಬರೆದೋನು ನಾನೇ. ಪ್ರತಿ ವರ್ಷ ಗ್ಯಾರಂಟಿ ಯೋಜನೆಗೆ 58 ಸಾವಿರ ಕೋಟಿ ಖರ್ಚಾಗುತ್ತಿದೆ. ಕಳೆದ 2ವರ್ಷದಿಂದ ಗ್ಯಾರಂಟಿ ಯೋಜನೆಯ ಹಣ ಬಡವರಿಗೆ ತಲುಪುತ್ತಿದೆ. ಗ್ಯಾರಂಟಿಯ ಹಣ ಕೂಡಿಟ್ಟು ಮಗಳಿಗೆ ಲ್ಯಾಪ್‌ಟಾಪ್ ಕೊಡಿಸಿದ್ದಾರೇ. ವಿರೋಧ ಪಕ್ಷದವರಿಗೆ ಟೀಕೆ ಮಾಡಲು ಬೇರೆ ಕಾರಣ ಇಲ್ಲದೇ ಅಭಿವೃದ್ದಿಯ ವಿಚಾರ ಮಾತನಾಡ್ತಾರೇ ಅಷ್ಟೆ.**

**ಡಾ.ಜಿ.ಪರಮೇಶ್ವರ** । ಗೃಹ ಸಚಿವ

26ಕೋಟಿ ವೆಚ್ಚದಕಾಮಗಾರಿಗೆ ಚಾಲನೆ.. ಕೋಳಾಲದಿಂದತಿಮ್ಮಸಂದ್ರಕ್ಕೆ 11ಕೋಟಿ, ಜಂಪೇನಹಳ್ಳಿಯಿಂದ ಶ್ರೀನಿವಾಸಪುರಕ್ಕೆ 6ಕೋಟಿ ಮತ್ತು ಮಧುಗಿರಿಯಿಂದ ಹಿಂದುಪುರಕ್ಕೆ 8ಕೋಟಿ ವೆಚ್ಚದರಸ್ತೆ ಸೇರಿ ಪಿಡ್ಲ್ಯೂಡಿಇಲಾಖೆಯಿಂದಒಟ್ಟು 26ಕೋಟಿ ವೆಚ್ಚದ ವಿವಿಧಕಾಮಗಾರಿಗೆಗೃಹಸಚಿವ ಡಾ.ಜಿ.ಪರಮೇಶ್ವರಗುದ್ದಲಿಪೂಜೆ ನೇರವೆರಿಸಿ ರಸ್ತೆಕಾಮಗಾರಿಯಗುಣಮಟ್ಟ ಇರಬೇಕುಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

# ಹಣಕಾಸು ಆಯೋಗದ ಅಧ್ಯಕ್ಷ, ಸದಸ್ಯರ ಭೇಟಿ



**ಚಾಮರಾಜನಗರ:** ಐದನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ. ಸಿ. ನಾರಾಯಣಸ್ವಾಮಿ ಹಾಗೂ ಆಯೋಗದ ಸದಸ್ಯರು ಜಿಲ್ಲೆಗೆ ಭೇಟಿ ನೀಡಿ ಜಿಲ್ಲೆಯ ಪಂಚಾಯತ್ ರಾಜ್ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷರಾದ ಡಾ. ಸಿ. ನಾರಾಯಣಸ್ವಾಮಿ, ಸದಸ್ಯರಾದ ಮೊಹಮದ್ ಸನಾವುಲ್ಲಾ, ಆರ್.ಎಸ್. ಪೋಂಡೆ, ಸಮಾಲೋಚಕರಾದ ಎಂ.ಕೆ. ಕೆಂಪೇಗೌಡ, ಸಿ.ಜಿ. ಸುಪ್ರಸನ್ನ, ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳಾದ ಕೆ. ಯಾಲಕ್ಕಿಗೌಡ, ವಿಶೇಷ ಕರ್ತವ್ಯ ಅಧಿಕಾರಿ ವಹಬ್ ಖಾನ್ ಅವರು ಸಭೆ ನಡೆಸಿದರು.

ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಣಕಾಸು ಆಯೋಗ ಕಳುಹಿಸಿರುವ ಪ್ರಶ್ನಾವಳಿ ಕುರಿತ ಮಾಹಿತಿಯನ್ನು ಸಭೆಯಲ್ಲಿ ಪರಿಶೀಲಿಸಲಾಯಿತು. ಪಂಚಾಯಿತಿ ಸಂಸ್ಥೆಗಳ ಸಾಂಸ್ಥಿಕ ರಚನೆ, ಕಾರ್ಯಾಚರಣೆ, ಹುದ್ದೆಗಳು, ಆಯವ್ಯಯ, ವೆಚ್ಚಗಳ ವಿವರ ರಾಜ್ಯ ಮತ್ತು ಕೇಂದ್ರ ಹಣಕಾಸು ಆಯೋಗದ ಅನುದಾನ, ಹಂಚಿಕೆ, ಬಿಡುಗಡೆ, ಮಾಡಲಾದ ವೆಚ್ಚ ಕುರಿತ ವಿವರವನ್ನು ಪಡೆಯಲಾಯಿತು.

ಆಡಳಿತ ಸುಧಾರಣೆ, ಮಾಹಿತಿ ತಂತ್ರಜ್ಞಾನ, ರಾಜ್ಯ ಹಣಕಾಸು ಆಯೋಗದ ಪರಿಶೀಲನಾ ಅಂಶಗಳಿಗೆ ಪೂರಕವಾದ ಸಲಹೆಗಳನ್ನು ಪಡೆಯಲಾಯಿತು.

ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ತೆರಿಗೆ ಪಾವತಿ ಖಾತಾ ಪ್ರತಿ ದಾಖಲೆಗಳನ್ನು ತ್ವರಿತವಾಗಿ ನೀಡುವಿಕೆ, ನೀರು ಸರಬರಾಜು, ಒಳಚರಂಡಿ, ಬೀದಿ ದೀಪಗಳು, ಘನತ್ಯಾಜ್ಯ ನಿರ್ವಹಣೆ, ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ಚರ್ಚಿಸಿ ಮಾಹಿತಿ ಮತ್ತು ಅಭಿಪ್ರಾಯಗಳನ್ನು ಪಡೆಯಲಾಯಿತು.

ಸಭೆಯಲ್ಲಿ ಮಾತನಾಡಿದ ಹಣಕಾಸು ಆಯೋಗದ ಅಧ್ಯಕ್ಷರಾದ ಡಾ. ಸಿ. ನಾರಾಯಣಸ್ವಾಮಿ ಹಾಗೂ ಇತರೆ ಸದಸ್ಯರು ಆಸ್ತಿತೆರಿಗೆ, ಉದ್ದಿಮೆ ಪರವಾನಗಿ, ಬಾಡಿಗೆ ಆದಾಯ, ಬಳಕೆದಾರರ ಶುಲ್ಕ, ಇನ್ನಿತರ ಸಂಗ್ರಹ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಿ ಸ್ವಂತ ಸಂಪನ್ಮೂಲ ಕ್ರೋಢೀಕರಣಕ್ಕೆ ನಗರ ಸ್ಥಳೀಯ ಸಂಸ್ಥೆಗಳು, ಪಂಚಾಯತ್ ರಾಜ್ ಸಂಸ್ಥೆಗಳು ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಸಭೆಯಲ್ಲಿ ಭಾಗವಹಿಸಿದ್ದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಮೂಲ ಸೌಕರ್ಯ ಒದಗಿಸಲು ಹೆಚ್ಚು ಅನುದಾನ ನೀಡುವುದು ಸೇರಿದಂತೆ ಇತರೆ ಅಭಿಪ್ರಾಯಗಳನ್ನು ಆಯೋಗದ ಮುಂದೆ ಮಂಡಿಸಿದರು. ಅಧಿಕಾರಿಗಳೂ ಸಹ ಸಂಸ್ಥೆಗಳಿಗೆ ಅಗತ್ಯವಿರುವ ಹೆಚ್ಚಿನ ಅನುದಾನ ಹಾಗೂ ನೆರವಿನ ಬಗ್ಗೆ ಪ್ರಸ್ತಾಪಿಸಿ ಆಯೋಗದ ಮುಂದೆ ಅಭಿಪ್ರಾಯಗಳನ್ನು ಮಂಡಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಮುಖ್ಯ ಯೋಜನಾಧಿಕಾರಿ ದೀಪ, ಚಾಮರಾಜನಗರ ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಉಪಾಧ್ಯಕ್ಷ ಮಮತ, ಕೊಳ್ಳೇಗಾಲ ನಗರಸಭೆ ಅಧ್ಯಕ್ಷ ಸಿ.ಎನ್. ರೇಖಾ, ಉಪಾಧ್ಯಕ್ಷ ಎ.ಪಿ. ಶಂಕರ್, ಯಳಂದೂರು ಪಟ್ಟಣ ಪಂಚಾಯಿತಿ ಅಧ್ಯಕ್ಷ ಎಸ್. ಲಕ್ಷ್ಮೀ, ಉಪಾಧ್ಯಕ್ಷ ಶಾಂತಮ್ಮ, ಹನೂರು ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಮುಮ್ತಾಜ್ ಭಾನು, ಉಪಾಧ್ಯಕ್ಷರಾದ ಆನಂದ್ ಕುಮಾರ್. ಆರ್, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ವಿವಿಧ ಇಲಾಖೆಗಳ ಅಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಭೆಯಲ್ಲಿ ಉಪಸ್ಥಿತರಿದ್ದರು.

# ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಲ್ಲಿ ಅನಗತ್ಯ ವಿಳಂಬ

**ಬೆಂಗಳೂರು:** ಕಳೆದ 1000 ದಿನಗಳಿಂದ ಹೋರಾಟ ನಡೆಸುತ್ತಿದ್ದರೂ, ಅನೇಕ ಬಾರಿ ಸನ್ಮಾನ್ಯ ಮುಖ್ಯಮಂತ್ರಿಗಳು, ಮಂತ್ರಿಗಳು ಹಾಗೂ ಜನಪ್ರತಿನಿಧಿಗಳು ಮನವಿ ಮಾಡಿದರೂ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವ ನಿಟ್ಟಿನಲ್ಲಿ ಕೇಂದ್ರ ಸರಕಾರ ಯಾವುದೇ ಸಕಾರಾತ್ಮಕ ಪ್ರತಿಕ್ರಿಯೆ ನೀಡುತ್ತಿಲ್ಲ. ಅಲ್ಲದೇ, NHM ಹಾಗೂ ಪಿಎಂ – ಅಭಿಮ್ ಯೋಜನೆಯ ಅಡಿಯಲ್ಲಿ ಆರೋಗ್ಯ ಸೌಕರ್ಯಗಳನ್ನು ಹೆಚ್ಚಿಸಿಕೊಳ್ಳುವಂತೆ ಪತ್ರ ಬರೆಯುವ ಮೂಲಕ ಕೇಂದ್ರ ಸರಕಾರದ ಬಿಜೆಪಿ ನಾಯಕರು ರಾಜಕೀಯ ಮಾಡುತ್ತಿದ್ದಾರೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ಹೇಳಿದರು.

ಬೆಂಗಳೂರು ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠೀಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗಕ್ಕೆ ನಿರಂತರವಾಗಿ ಅನ್ಯಾಯವೆಸಗುತ್ತಿರುವ ಬಿಜೆಪಿ ಕೇಂದ್ರ ನಾಯಕರ ವಿರುದ್ದ ವಾಗ್ದಾಳಿ ನಡೆಸಿದರು.

ರಾಯಚೂರಿನ ಮೇಲೆ ಕೇಂದ್ರ ಸರಕಾರದಿಂದ ಸಾಮಾಜಿಕವಾಗಿ, ರಾಜಕೀಯವಾಗಿ ಹಾಗೂ ಆರ್ಥಿಕವಾಗಿ ಗಧಾಪ್ರಹಾರ ನಡೆಸಲಾಗುತ್ತಿದೆ. ಸಂವಿಧಾನದ ಆಶಯದಂತೆ ನಮ್ಮ ಒಕ್ಕೂಟ ವ್ಯವಸ್ಥೆಯಲ್ಲಿ ಪ್ರತಿ ರಾಜ್ಯಕ್ಕೂ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯ ಒದಗಿಸುವುದು ಕೇಂದ್ರ ಸರಕಾರದ ಆದ್ಯ ಕರ್ತವ್ಯ. ಮೋದಿ ಸರಕಾರ ಅಧಿಕಾರಕ್ಕೆ ಬಂದ ನಂತರ ಒಕ್ಕೂಟ ವ್ಯವಸ್ಥೆಯೇ ತಲೆಕೆಳಗಾಗಿದೆ. ಕೇಂದ್ರ ಸರಕಾರ ರಾಜ್ಯಗಳ ಮನವಿಗಳಿಗೆ ಸರಿಯಾಗಿ ಸ್ಪಂದಿಸದೇ ಸಂವಿಧಾನದ ಆಶಯಗಳ ವಿರುದ್ದ ಕೆಲಸ ಮಾಡುತ್ತಿದೆ.

2003 ರಲ್ಲಿ ಜಾರಿಯಾದ ಕಒಖಖಜ ಪ್ರಧಾನ ಮಂತ್ರಿ ಸ್ವಸ್ಥ ಸುರಕ್ಷಾ ಯೋಜನೆ, ಆರೋಗ್ಯ ಕ್ಷೇತ್ರದಲ್ಲಿ ಪ್ರಾದೇಶಿಕ ಅಸಮತೋಲನೆ ನಿವಾರಿಸುವ ನಿಟ್ಟಿನಲ್ಲಿ ಜಾರಿಯಾದ ಯೋಜನೆ. ದೇಶದ ವಿವಿಧ ಭಾಗಗಳಲ್ಲಿ ಏಮ್ಸ್ ಆಸ್ಪತ್ರೆಗಳನ್ನು ಪ್ರಾರಂಭಿಸುವುದು ಈ ಯೋಜನೆಯ ಪ್ರಮುಖ ಉದ್ದೇಶಗಳಲ್ಲಿ ಒಂದು. ಈ ಯೋಜನೆಯ ಅಡಿಯಲ್ಲಿ ಈಗಾಗಲೇ ದೇಶದ 22 ರಾಜ್ಯಗಳಲ್ಲಿ ಕೇಂದ್ರ ಸರಕಾರ ಏಮ್ಸ್‌ಗಳನ್ನು ಮಂಜೂರುಗೊಳಿಸಿದೆ.

ಇದೇ ಯೋಜನೆ ಅಡಿಯಲ್ಲಿ ನಮ್ಮ ರಾಜ್ಯದ ರಾಯಚೂರಿಗೆ ಏಮ್ಸ್ ಮಂಜೂರುಗೊಳಿಸುವಂತೆ ಹಲವಾರು ಬಾರಿ ಮುಖ್ಯಮಂತ್ರಿಗಳು, ಮಂತ್ರಿಗಳು, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು ಮನವಿಗಳನ್ನು ಸಲ್ಲಿಸಿವೆ. ಹತ್ತಕ್ಕೂ ಹೆಚ್ಚು ಬಾರಿ ನಮ್ಮ ಸರಕಾರ ಕೇಂದ್ರ ಸರಕಾರಕ್ಕೆ ವಿವಿಧ ಹಂತಗಳಲ್ಲಿ ಮನವಿ ಸಲ್ಲಿಸಿದೆ. 22 ಆಗಸ್ಟ್ 2023 ರಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರ ಹಾಗೂ ನನ್ನ ನೇತೃತ್ವದ ನಿಯೋಗ ಕೇಂದ್ರ ಆರೋಗ್ಯ ಸಚಿವರನ್ನೂ ಭೇಟಿ ಮಾಡಿ ಮನವಿ ಸಲ್ಲಿಸಿದ್ದೆವು. ಆ ನಂತರ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ಸಂಧರ್ಭದಲ್ಲಿ ಹಾಗೂ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೂ ಪತ್ರ ಬರೆದು ಮನವಿ ಸಲ್ಲಿಸಿದ್ದರು. ಆದರೂ, ಕರ್ನಾಟಕ ರಾಜ್ಯ ಅದರಲ್ಲೂ ಹಿಂದುಳಿದ ಜಿಲ್ಲೆಯಾಗಿರುವ ಭಾರತೀಯ ಸಂವಿಧಾನ ಆರ್ಟಿಕಲ್ 371 ಜೆ ಅಡಿಯಲ್ಲಿ ವಿ ಶೇಷ ಸ್ಥಾನಮಾನ ಹೊಂದಿರುವ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವ ಪ್ರಸ್ತಾವನೆಗೆ ಕೇಂದ್ರ ವಿತ್ತ ಮಂತ್ರಾಲಯ ಒಪ್ಪಿಗೆಯನ್ನು ನೀಡಲು ಹಿಂಜರಿದಿದೆ.



ಈ ವಿಷಯವನ್ನ ಖುದ್ದು ಬಿಜೆಪಿ ರಾಷ್ಟೀಯ ಅಧ್ಯಕ್ಷರು ಹಾಗೂ ಕೇಂದ್ರ ಆರೋಗ್ಯ ಸಚಿವರಾಗಿರುವ ಜಗತ್ ಪ್ರಕಾಶ್ ನಡ್ಡಾ ಅವರು 14 ನೇ ಜನವರಿ 2025 ರಂದು ಸಿಎಂ ಸಿದ್ದರಾಮಯ್ಯನವರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ. ಹಾಗೆಯೇ, ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಯ ಬಗ್ಗೆ ಯಾವುದೇ ಸ್ಪಷ್ಟ ನಿರ್ಧಾರವನ್ನು ತಿಳಿಸದೇ, NHM ಅಡಿಯಲ್ಲಿ ನೀಡಲಾಗುತ್ತಿರುವ ಅನುದಾನದದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಆರೋಗ್ಯ ಚಿಕಿತ್ಸಾ ಸೌಲಭ್ಯಗಳನ್ನು ಹೆಚ್ಚಿಸಿಕೊಳ್ಳುವಂತೆ ಸಲಹೆ ನೀಡಿದ್ದಾರೆ .

ಕೇಂದ್ರ ಸರಕಾರದ ಹಲವಾರು ಕಾರ್ಯಕ್ರಮಗಳನ್ನು ಈ ಯೋಜನೆಯ ಅಡಿಯಲ್ಲಿ ಅನುಷ್ಠಾನಗೊಳಿಸಬೇಕಾಗಿದೆ. ಅಲ್ಲದೇ, ಕೇವಲ ಇಷ್ಟೇ ಅನುದಾನದಲ್ಲಿ ನಾವು ರಾಜ್ಯದ ಆರೋಗ್ಯ ಕ್ಷೇತ್ರವನ್ನು ಬಲಪಡಿಸುವುದರ ಜೊತೆಯಲ್ಲೇ ಐಮ್ಸ್‌ನಂತಹ ಸಂಸ್ಥೆಯನ್ನು ರಾಯಚೂರಿನಲ್ಲಿ ಸ್ಥಾಪಿಸಲು ಸಾಧ್ಯವೇ? ಎಂದು ಪ್ರಶ್ನಿಸಿದರು.

ಕಒಖಖಜ ಅಡಿಯಲ್ಲಿ ಇತರ ರಾಜ್ಯಗಳಿಗೆ ಈಗಾಗಲೇ 22 ಏಮ್ಸ್‌ಗಳನ್ನು ಮಂಜೂರು ಮಾಡಿರುವ ಕೇಂದ್ರ ಸರಕಾರ, ಓಊಒ ಮತ್ತು PM-ABHIM ಯೋಜನೆಗಳ ಅಡಿಯಲ್ಲಿ ಪರ್ಯಾಯ ಆರೋಗ್ಯ ಚಿಕಿತ್ಸಾ ಕಾರ್ಯಕ್ರಮಗಳನ್ನು ಯೋಜಿಸುವಂತೆ ಕರ್ನಾಟಕ ರಾಜ್ಯವನ್ನು ಕೇಳುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಕರ್ನಾಟಕದ ಬಗ್ಗೆ ಈ ಮಲತಾಯಿ ವರ್ತನೆ ಏಕೆ ಏಮ್ಸ್ ಕೇವಲ ಆಸ್ಪತ್ರೆಯಲ್ಲ – ಇದು ಪ್ರಮುಖ ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆಯಾಗಿದೆ ಮತ್ತು ರಾಯಚೂರು ಏಮ್ಸ್ ಪಡೆಯಲು ಎಲ್ಲಾ ರೀತಿಯಲ್ಲೂ ಅರ್ಹವಾಗಿದೆ.

ಕನ್ನಡಿಗರ ಕಡೆಗಿನ ಈ ತಾರತಮ್ಯ ಸರಿಯಲ್ಲ. ಇತರೆ ರಾಜ್ಯಗಳಲ್ಲಿ ಮಂಜೂರು ಮಾಡಿರುವ ರೀತಿಯಲ್ಲಿಯೇ ರಾಜ್ಯದ ರಾಯಚೂರಿಗೂ ಏಮ್ಸ್ ಮಂಜೂರುಗೊಳಿಸುವಂತೆ ಆಗ್ರಹಿಸಿದರು .

ಅದರಲ್ಲೂ ಕೇಂದ್ರ ಸರಕಾರದ ಮಂತ್ರಿಗಳಾಗಿರುವ ನಮ್ಮ ರಾಜ್ಯದ ಮುಖಂಡರುಗಳು ಕೇವಲ ರಾಜಕೀಯ ಮಾಡಲು ಹೆಚ್ಚಿನ ಗಮನ ನೀಡುತ್ತಿದ್ದಾರೆಯೇ ಹೊರತು, ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಹಿಂದುಳಿದ ಜಿಲ್ಲೆಯಾದ ರಾಯಚೂರಿಗೆ ಏಮ್ಸ್ ತರುವಂತಹ ಯಾವುದೇ ಜವಾಬ್ದಾರಿ ಇವರಿಗೆ ಇಷ್ಟವಿಲ್ಲ. ಕಲ್ಯಾಣ ಕರ್ನಾಟಕ ಭಾಗದ ಐದು ಲೋಕಸಭಾ ಸ್ಥಾನಗಳನ್ನು ಕಳೆದುಕೊಂಡಿರುವ ಬಿಜೆಪಿ, ಅಲ್ಲಿನ ಜನರ ಮೇಲೆ ಸೇಡು ತೀರಿಸಿಕೊಳ್ಳುವಂತೆ ಭಾಸವಾಗುತ್ತಿದೆ. ಕೇಂದ್ರ ಸರಕಾರ ಶೀಘ್ರ ಏಮ್ಸ್ ಮಂಜೂರು ಮಾಡದೇ ಇದ್ದಲ್ಲಿ ಕರ್ನಾಟಕ ರಾಜ್ಯದ ಜನರು ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷರಾದ ರಮೇಶ್ ಬಾಬು, ದೀಪಕ್ ತಿಮಯ್ಯ, ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪೂರ್ಣವಾಗಿ ಬಳಕೆಯಾಗದ ಕೆಎಸ್‌ಪಿ ಆ್ಯಪ್!

**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ.**

**ಚಾಮರಾಜನಗರ:** ರಾಜ್ಯ ಪೊಲೀಸ್ ಇಲಾಖೆ ಮಾಡಿದ ಕೆಎಸ್‌ಪಿ ಆ್ಯಪ್ ಬಗ್ಗೆ ಸಮರ್ಪಕವಾಗಿ ಮಾಹಿತಿ ಇರದ ಹಿನ್ನಲೆಯಲ್ಲಿ ದೂರಿನ ಪ್ರಕರಣಗಳು ತಾಂತ್ರಿಕವಾಗಿ ಬಳಸದೆ ಇರೋದರಿಂದ ಇದ್ದು ಇಲ್ಲದಂತಾಗಿದೆ .

ಇಲಾಖಾ ಆ್ಯಪ್‌ನಲ್ಲಿ ವಿವಿದ ದೂರುಗಳನ್ನ ವಿವಿದ ಜಿಲ್ಲೆಗಳಲ್ಲಿ ಸಾರ್ವಜನಿಕರೂ ಸೇರಿದಂತೆ ದಾಖಲು ಮಾಡಲು ಅವಕಾಶವಿದೆ..

ಆದರೆ ದೂರು ದಾಖಲು ಮಾಡಿದರೆ ಮಾಹಿತಿದಾರನ ಗೌಪ್ಯತೆ ಸೋರಿಕೆಯಾದರೆ ಕಷ್ಟ ಎಂದು ಆ್ಯಪ್ ಬಳಸಿಕೊಳ್ಳಲು ಹಿಂದೇಟು ಹಾಕುತ್ತಿದ್ದಾರೆ. ಇಲಾಖೆ ಇದರ ಬಗ್ಗೆ ಅರಿವು ಮೂಡಿಸಬೇಕು ಆದರೆ ಅರಿವು ಮೂಡಿಸಿದರೆ ಪ್ರಕರಣ ಸಂಖ್ಯೆ ಹೆಚ್ಚಾಗುತ್ತದೆ ಎಂದು ಅರಿವೂ ಮೂಡಿಸದೆ ನಿರ್ಲಕ್ಷ್ಯ ತೋರಿದ್ದಾರೆ.

ಚಾಮರಾಜನಗರದಲ್ಲಿ ಇತ್ತೀಚಗೆ ನಿಯಮ ಉಲ್ಲಂಘನೆ ಸಂಬಂದ ಪೊಲೀಸರು ಪೋಟೊ ತೆಗೆದು ಇಲಾಖ ಗ್ರೂಪ್ ಗೆ ವಾಟ್ಸಾಪ್ ಮಾಡಲಾಗುತ್ತದೆ.. ಆದರೆ ಕೆಲವರು ಕೆಲವನ್ನ ಡಿಲಿಟ್ ಮಾಡುವ ತೆಗೆಯದೆ ಇರೊ ಸನ್ನಿವೇಶವೂ ಉಂಟು. ಇನ್ನ ಮೆಲಾದಿಕಾರಿಗಳು ದಂಡ ಹಾಕುವ ವಿವೇಚನೆ ಇರೋದ್ರಿಂದ ಕೆಲವಕ್ಕೆ ವಿನಾಯಿತಿ ಕೂಡ ನೀಡಬಹುದು.

ಆ್ಯಪ್ ಬಗ್ಗೆ ಇಲಾಖೆಯೆ ಅರಿವು ಮೂಡಿಸಿ ಅದರಲ್ಲೆ ಅಪ್ಲೋಡ್ ಮಾಡಿದರೆ ದಂಡ ಪಾವತಿ ಬಗ್ಗೆ ನಿಖರ ದಾಖಲೆ ಕೂಡ ಸಿಗಲಿದೆ. ಈ ಬಗ್ಗೆ ಚಾಮರಾಜನಗರ ಪೊಲೀಸ್ ಅದೀಕ್ಷಕರು ಇದರ ಬಗ್ಗೆ ಅರಿವು ಮೂಡಿಸಿ ಪ್ರಕರಣ ದಾಖಲು ಮಾಡಲು ಸೂಚಿಸುವ ಅಗತ್ಯವಿದೆ.

ರಾಜ್ಯದ ಪೊಲೀಸ್ ಮಹಾನಿರ್ದೇಶಕರು ರಾಜ್ಯದ ಎಸ್ಪಿಗಳಲ್ಲಿ ಕ್ಯಾಮಾರಾದರಿತ ದಂಡವಿಲ್ಲದ ಕಡೆ ಇಂತ ಆ್ಯಪ್ ಬಳಸಿಕೊಂಡರೆ ಮತ್ತಷ್ಟು ಸದುಪಯೋಗವಾಗಿ ವಾಹನ ಸವಾರರು ಪೊಲೀಸರ ನಡುವೆ ಸಂಘರ್ಷ ತಪ್ಪಿಸಲು ಅನುಕೂಲಕರವಾಗಲಿದೆ.

ವಾಹನ ಸವಾರ: ಪೊಟೊ ತೆಗೆದು ಅಪ್ಲೋಡ್ ಮಾಡುತ್ತಿರುವ ಬಗ್ಗೆ ಗಮನಿಸಿದ್ದೇವೆ...ಆದರೆ ನಾವು ವಾಹನ ಮಾರಾಟ ಮಾಡಿ ವರ್ಷಗಳಾಗಿದೆ ಆದರೆ ಅವರು ವರ್ಗಾವಣೆ ಮಾಡಿಕೊಳ್ಳದ ಹಿನ್ನಲೆಯಲ್ಲಿ ನಾವೆ ದಂಡ ಪಾವತಿಸಬೇಕಾದ ಅನಿವಾರ್ಯತೆ ಕೂಡ ನಮಗೆ ಎದುರಾಗಿದೆ. ಅಂತಹ ವಾಹನ ಸಿಕ್ಕಾಗಿ ಜಪ್ತಿ ಮಾಡಿ ಯಾರು ಖರೀದಿ ಮಾಡಿರುತ್ತಾರೊ ಅವರಿಗೆ ವರ್ಗ ಹಾಗೂ ದಂಡ ಹಾಕುವ ಪ್ರಕ್ರಿಯೆ ಮಾಡಿದರೆ ಮತ್ತಷ್ಟು ಅನುಕೂಲವಾಗಲಿದೆ ಎನ್ನುತ್ತಾರೆ ದಂಡ ಪಾವತಿಸಿದ ಬೈಕ್ ಸವಾರ.

# ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ

**ಬೆಂಗಳೂರು:** ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನ ಜನತೆಗೆ ಅತೀ ಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತು ಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರವರೆಗೆ ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳ ವನ್ನು ಹಮ್ಮಿಕೊಳ್ಳಲಾಗಿದೆ.

ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ನಾಡಿನ ಪ್ರಕಾಶಕರು/ ಮಾರಾಟಗರಾರು ನಿಗದಿತ ಅರ್ಜಿ ನಮೂನೆಯನ್ನು ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರಿಂದ ಅಥವಾ ವಿಧಾನ ಸಭೆ ಸಚಿವಾಲಯದ ವೆಬ್ ಸೈಟ್ ತಿತಿತಿ.ಇಟಚಿ.ಇಚಿಡಿ.ಟುಫಿ.ಿಟ ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.

ಮೇಳದಲ್ಲಿ ಭಾಗವಹಿಸುವ ಪ್ರಕಾಶಕರು/ ಮಾರಾಟಗಾರರು ಮಳಿಗೆಯೊಂದಕ್ಕೆ 1,000 ರೂ.ಗಳ ಭದ್ರತಾ ಠೇವಣಿ ಡಿ.ಡಿ ಯನ್ನು ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸಬೇಕು. ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ ಫೆಬ್ರವರಿ 12ರ ಸಂಜೆ 5 ಗಂಟೆಯೊಳಗೆ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರಿಗೆ ಸಲ್ಲಿಸಬಹುದು ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳಾದ ಎಂ.ಕೆ. ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಸಿದ್ಧ ವಿರೂಪಾಕ್ಷೇಶ್ವರ ದೇವರ ರಥೋತ್ಸವ

**ಮುಳಬಾಗಿಲು:** ಪ್ರಸಿದ್ಧ ವಿರೂಪಾಕ್ಷೇಶ್ವರ ದೇವರ ರಥೋತ್ಸವ ಅತ್ಯಂತ ವೈಭವದಿಂದ ನೆರವೇರಿತು .

ಸಾಂಪ್ರದಾಯದಂತೆ ಹೂವಿನ ಅಲಂಕಾರ ಮಾಡಿದ ನಂತರ ಉತ್ಸವ ದೇವರನ್ನು ರಥದಲ್ಲಿಟ್ಟು ಮಹಾ ಮಂಗಳಾರತಿ ಮಾಡಿದ ನಂತರ ಶಾಸಕ ಸಮೃದ್ಧಿ ಮಂಜುನಾಥ್ ರಥೋತ್ಸವಕ್ಕೆ ಚಾಲನೆ ನೀಡಿದರು.

ವಿವಿಧ ಕಡೆಗಳಿಂದ ಆಗಮಿಸಿದ ಭಕ್ತಾದಿಗಳು ದೇವರ ದರ್ಶನ ಪಡೆದರು.

ಸೇವಾ ಕರ್ತರಿಂದ ಪ್ರಸಾದ ವಿನಿಯೋಗ ನಡೆಯಿತು ತಹಸಿಲ್ದಾರ್ ವಿ .ಗೀತಾ .ಇ ಓ. ಕೆ ಸರ್ವೇಶ್. ಆರ್ ಐ ಸುಬ್ರಮಣಿ. ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರಾದ ಆರ್ ಆರ್ ರಾಜೇಂದ್ರ ಗೌಡ. ಉಪಾಧ್ಯಕ್ಷ ಮಂಡಿಕಲ್ ಮಂಜುನಾಥ್. ದರ್ಕಾಸು ಸಮಿತಿ ಸದಸ್ಯರಾದ ಜಮುನಳ್ಳಿ ಕೃಷ್ಣ. ಗುಜ್ಜನಹಳ್ಳಿ ಮಂಜುನಾಥ್. ವಕೀಲ ಎಂಎಸ್ ಶ್ರೀನಿವಾಸ್ ರೆಡ್ಡಿ. ಕಲ್ಲುಪಲ್ಲಿ ಪ್ರಕಾಶ್. ಮಾರಪ್ಪ.ಸೇರಿದಂತೆ ಇತರರಿದ್ದರು



# ಡಯಾಬಿಟಿಕ್ ಕ್ಲಿನಿಕ್–ಜಿಲ್ಲಾಧಿಕಾರಿಗಳಿಂದ ನೂತನ ಸೇವೆಗೆ ಚಾಲನೆ

**ಚಾಮರಾಜನಗರ:** ಎಲ್ಲಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರತಿ ಬುಧವಾರ ಮಧುಮೇಹಿಗಳಿಗೆ ಆರೋಗ್ಯ ಸೌಲಭ್ಯ ಒದಗಿಸುವ ರಾಜ್ಯದಲ್ಲೇ ಮೊದಲು ಎನಿಸಿರುವ ಡಯಾಬಿಟಿಕ್ ಕ್ಲಿನಿಕ್‌ಗಳು ಚಾಮರಾಜನಗರ ಜಿಲ್ಲೆಯಲ್ಲಿ ಆರಂಭವಾಗಿದೆ.

ಪ್ರತೀ ಬುಧವಾರ ಜಿಲ್ಲೆಯ ಎಲ್ಲಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೆಳಿಗ್ಗೆ 7 ರಿಂದ 11 ಗಂಟೆಯವರೆಗೆ ಮಧುಮೇಹಿಗಳ ಆರೋಗ್ಯ ಕಾಳಜಿಗಾಗಿ ಡಯಾಬಿಟಿಕ್ ಕ್ಲಿನಿಕ್ ನಿರ್ವಹಣೆಯಾಗಲಿದೆ. ಈ ವಿನೂತನ ಆರೋಗ್ಯ ಸೇವೆಯನ್ನು ರಾಜ್ಯದಲ್ಲೇ ಚಾಮರಾಜನಗರ ಜಿಲ್ಲೆಯು ಮೊದಲಿಗೆ ಆರಂಭಿಸುವ ಮೂಲಕ ಗಮನಸೆಳೆದಿದೆ.

ಮಧುಮೇಹಿ ರೋಗಿಗಳಿಗೆ ತಪಾಸಣೆ, ಔಷದೋಪಾಚಾರ, ಡಯಾಬಿಟಿಕ್ ಚಾರ್ಟ್, ಪಥ್ಯ ಆಹಾರದ ವಿವರ ಸೇರಿದಂತೆ ಇತರೆ ಎಲ್ಲ ಸೇವೆ ಸಲಹೆಗಳನ್ನು ಡಯಾಬಿಟಿಕ್ ಕ್ಲಿನಿಕ್ ನಲ್ಲಿ ಒದಗಿಸಲಾಗುತ್ತಿದೆ. ಮಧುಮೇಹ ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆ ಅವಶ್ಯಕತೆಯಿದ್ದಲ್ಲಿ ನಿಯಮಾನುಸಾರ ಮೇಲ್ಮಟ್ಟದ ಆಸ್ಪತ್ರೆಗೆ ಶಿಫಾರಸು ಮಾಡಿ ಮುಂದಿನ ಆರೋಗ್ಯ ಸೇವೆಗೆ ಅನುಸರಣೆ ಮಾಡುವಂತೆಯೂ ಸುತ್ತೋಲೆ ಹೊರಡಿಸಲಾಗಿದೆ. ಡಯಾಬಿಟಿಕ್ ಕ್ಲಿನಿಕ್ ನಿರ್ವಹಣೆ ಹಾಗೂ ಸುಸೂತ್ರವಾಗಿ ನಡೆಸಲು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಮೇಲ್ವಿಚಾರಣೆ ಕಾರ್ಯವಹಿಸಲು ಸೂಚನೆ ನೀಡಲಾಗಿದೆ.

ಆರೋಗ್ಯ ಸೇವಾ ಕ್ಷೇತ್ರದ ಹೊಸ ವಿಶಿಷ್ಟ ಕಾರ್ಯಕ್ಕೆ ಮುಂದಾಗಿರುವ ನೂತನ ಡಯಾಬಿಟಿಕ್ ಕ್ಲಿನಿಕ್‌ಗೆ ಚಾಮರಾಜನಗರ ತಾಲೂಕಿನ ವೆಂಕಟಯ್ಯನಛತ್ರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಇಂದು ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು, ಈ ಕಾರ್ಯಕ್ರಮವನ್ನು ಇಡೀ ರಾಜ್ಯದಲ್ಲೇ ಚಾಮರಾಜನಗರ ಜಿಲ್ಲೆ ಮೊದಲು ಆರಂಭಿಸಿದೆ. ಇದು ವಿಶೇಷವಾಗಿ ಜಿಲ್ಲೆಯ ಗ್ರಾಮೀಣ ಬಡಜನರಿಗೆ ತುಂಬಾ ಉಪಯುಕ್ತವಾಗಿದೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮತ್ತು ಅವರ ತಂಡ ಜಿಲ್ಲೆಯಲ್ಲಿ ಇಂತಹ ಆರೋಗ್ಯ ಸೇವೆಗಳನ್ನು ಒದಗಿಸಲು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಡಯಾಬಿಟಿಕ್ ಕ್ಲಿನಿಕ್ ಸೌಲಭ್ಯ ಅನುಷ್ಠಾನಕ್ಕೆ ಮುಂದಾಗಿರುವ ಎಲ್ಲರನ್ನು ಅಭಿನಂದಿಸುವುದಾಗಿ ನುಡಿದರು.

ಸಾಮಾನ್ಯವಾಗಿ ಎಲ್ಲಾ ಆರೋಗ್ಯ ಕೇಂದ್ರಗಳು ಬೆಳ್ಳಿಗೆ 9 ಗಂಟೆಗೆ ಪ್ರಾರಂಭವಾಗುತ್ತವೆ. ಮಧುಮೇಹ ಇರುವವರು ತಪಾಸಣೆಗೆ 9 ಗಂಟೆಯವರೆಗೂ ಕಾಯಬೇಕಾಗಿತ್ತು. ಆದರೆ ಮಧುಮೇಹಿಗಳು ಆರೋಗ್ಯ ಪರೀಕ್ಷೆಗಾಗಿ ಕಾಯಲು ಕಷ್ಟವಾಗುತ್ತಿತ್ತು. ಹೀಗಾಗಿ ವಾರದಲ್ಲಿ ಒಂದು ದಿನ ಅಂದರೆ ಪ್ರತಿ ಬುಧವಾರ ಬೆಳ್ಳಿಗೆ 7 ರಿಂದ 11 ರವರೆಗೆ ಮಧುಮೇಹದವರಿಗಾಗಿಯೇ ಪ್ರಯೋಗಾಲಯವನ್ನು ತೆರೆದು ರಕ್ತಪರೀಕ್ಷೆ ಮಾಡುವ ಕಾರ್ಯಕ್ರಮವನ್ನು ಮಾಡಲಾಗುತ್ತದೆ. ರಾಜ್ಯದಲ್ಲಿಯೇ ಪ್ರಥಮವಾಗಿ ನಮ್ಮ ಜಿಲ್ಲೆಯಲ್ಲಿ ಇಂತಹ ಡಯಾಬಿಟಿಕ್ ಕ್ಲಿನಿಕ್ ಸೇವೆ ಒದಗಿಸಲು ಮುಂದಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಅವರು ಮಾತನಾಡಿ ಮಾರ್ಗಸೂಚಿ ಪ್ರಕಾರ ಜಿಲ್ಲೆಯಾದ್ಯಂತ ವೈದ್ಯರು ಆರೋಗ್ಯ ಸಿಬ್ಬಂದಿ ಡಯಾಬಿಟಿಕ್ ಕ್ಲಿನಿಕ್ ಅನ್ನು ಸಮರ್ಪಕವಾಗಿ ನಿರ್ವಹಿಸಲು ಎಲ್ಲ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.

ಗ್ರಾ.ಪಂ.ಅಧ್ಯಕ್ಷರಾದ ಲಾವಣ್ಯ ಮಹೇಶ್, ಉಪಾಧ್ಯಕ್ಷರಾದ ಕೃಷ್ಣಮೂರ್ತಿ, ಸದಸ್ಯರಾದ ಎ.ಎಂ. ಸೋಮಣ್ಣ, ಅಶೋಕ್, ಸ್ವಾಮಿ, ಶೈಲಜ, ಚಾಮುಲ್ ನಿರ್ದೇಶಕರಾದ ಹೆಚ್. ಎಸ್ ಬಸವರಾಜು, ಜಿಲ್ಲಾ ನೋಡಲ್ ಅಧಿಕಾರಿಗಳಾದ ಡಾ.ರಾಜೇಶ್ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಸುಂದರೇಶ್, ತಾಲೂಕು ಆರೋಗ್ಯಾಧಿಕಾರಿ ಡಾ.ಶ್ರೀನಿವಾಸ್, ವೆಂಕಟಯ್ಯನಛತ್ರದ ಪ್ರಾಥಮಿಕಆರೋಗ್ಯ ಕೇಂದ್ರದ ವೈಧ್ಯಾಧಿಕಾರಿ ಡಾ. ಗೋವಿಂದ ರಾಜು, ಗ್ರಾಮ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ಮಹೇಶ್, ಇನ್ನಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕಳಪೆ ಪೈಪ್ ಮತ್ತು ಲ್ಯಾಟರಲ್ ವಿತರಣೆ






**ಶಿಡ್ಲಘಟ್ಟ :** ಹನಿ ನೀರಾವರಿ ಪದ್ಧತಿಯಡಿ ಕೃಷಿ ಇಲಾಖೆಯಿಂದ ವಿತರಿಸಲಾದ ಪೈಪ್ ಮತ್ತು ಲ್ಯಾಟರಲ್‌ಗಳು ಕಳಪೆಯಾಗಿದ್ದು, ಈ ಬಗ್ಗೆ ಸಂಬಂಧಿಸಿದ ಕಂಪನಿ ಮತ್ತು ಅಧಿಕಾರಿಗಳಿಗೆ ವಿಷಯ ತಿಳಿಸಿದರೂ ಯಾವುದೇ ಪ್ರಯೋಜನವಿಲ್ಲದ ಕಾರಣ, ರೈತನು ತನ್ನ ಆಕ್ರೋಶ ವ್ಯಕ್ತಪಡಿಸುತ್ತಾ ಪೈಪುಗಳನ್ನು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಮುಂಭಾಗ ಬಿಸಾಡಿರುವ ಘಟನೆ ನಡೆದಿದೆ.

ತಾಲ್ಲೂಕಿನ ಅಪ್ಪೇಗೌಡನಹಳ್ಳಿಯ ರೈತ ಹಾಗೂ ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಕೆ. ಲಕ್ಷ್ಮಿನಾರಾಯಣರೆಡ್ಡಿ ಅವರ ಕೇಶವಪುರ ತೋಟದಲ್ಲಿ ಹನಿ ನೀರಾವರಿಗಾಗಿ ಕೃಷಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ಪ್ರೀಮಿಯರ್ ಕಂಪನಿಯ ಪೈಪ್ ಮತ್ತು ಲ್ಯಾಟರಲ್‌ಗಳನ್ನು ಪಡೆದುಕೊಂಡಿದ್ದರು. ಆದರೆ ಅವುಗಳು ಸಂಪೂರ್ಣ ಕಳಪೆಯಾಗಿದ್ದು, ಜಾಯಿಂಟ್ ಸರಿಯಾಗಿ ಹೊಂದಾಣಿಕೆಯಾಗದೆ,ನೀರು ಒತ್ತಡದಲ್ಲಿ ಪೈಪ್‌ಗಳಿಂದ ಹೊರಬಿದ್ದು ಬೆಳೆ ಒಣಗಲು ಕಾರಣವಾಗಿದೆ. ಈ ಕುರಿತು ಅವರು ಕೃಷಿ ಸಹಾಯಕ ನಿರ್ದೇಶಕ ರವಿ ಹಾಗೂ ಪೈಪ್ ಪೂರೈಕೆದಾರ ಕಂಪನಿಯ ಮುಖ್ಯಸ್ಥರಿಗೆ ದೂರು ನೀಡಿದಾಗ, ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ ಅಧಿಕಾರಿಗಳು ಪೈಪ್‌ಗಳು ಕಳಪೆಯಾಗಿರುವುದನ್ನು ಒಪ್ಪಿಕೊಂಡು ಅವುಗಳನ್ನು ಬದಲಿಸುವ ಭರವಸೆ ನೀಡಿದ್ದರು. ಹಲವು ದಿನಗಳು ಕಳೆದರೂ ಯಾವುದೇ ಕ್ರಮ ಕೈಗೊಳ್ಳದ ಕಾರಣ, ಲಕ್ಷ್ಮಿನಾರಾಯಣರೆಡ್ಡಿ ಅವರು ಕೃಷಿ ಇಲಾಖೆಯ ಕಚೇರಿ ಮುಂದೆ ತಮ್ಮ ಪೈಪುಗಳನ್ನು ಬಿಸಾಡಿ ಪ್ರತಿಭಟನೆ ನಡೆಸಿದರು.ಶಿಡ್ಲಘಟ್ಟ : ತಾಲ್ಲೂಕಿನ ಆನೂರಿನ ದೇವರಾಜ್ ಎಂಬ ರೈತ 2 ಎಕರೆ ಜಮೀನಿನಲ್ಲಿ ಹೂಕೋಸಿನ ನಾರು ನಾಟಿ ಮಾಡಿದ್ದು 65 ದಿನಗಳಾಗಿವೆ ಗಡ್ಡೆ ಕಟ್ಟುವ ಹಂತದಲ್ಲಿ ಹೂಕೋಸು ಫಸಲು ಬಿಡದೆ ಕೈಕೊಟ್ಟಿದ್ದು ರೈತ ಕಂಗಾಲಾಗಿ ಕೆಂಗೆಟ್ಟಿದ್ದಾನೆ. ಆದರೀಗ ಹೂಕೋಸು ಫಸಲು ಬಿಡಬೇಕಾದ ಸಮಯದಲ್ಲಿ ಗಡ್ಡೆ ಕಟ್ಟದೆ ಕೈಕೊಟ್ಟಿದೆ,ಇದಕ್ಕೆ ಕಳಪೆ ಬಿತ್ತನೆಬೀಜ ಕಾರಣ ಎಂದು ರೈತ ದೇವರಾಜ್ ದೂರಿದ್ದಾರೆ.

ಹೊಸಕೋಟೆ ತಾಲ್ಲೂಕು ಅತ್ತಿಬೆಲೆಯ "ಮಾರುತಿ ಆಗ್ರೋ ಸೀಡ್ಸ್‌ನಿಂದ ಬಿತ್ತನೆ ಬೀಜ ಖರೀದಿಸಿ 25 ಸಾವಿರ ನಾರು ನಾಟಿ ಮಾಡಿ ಗೊಬ್ಬರ, ಔಷಧ ಸಿಂಪಡಣೆ ಎಲ್ಲವೂ ಸೇರಿ ಲಕ್ಷಾಂತರ ರೂ. ಖರ್ಚು ಮಾಡಲಾಗಿತ್ತು ಆದರೆ, ಫಸಲು ಗಡ್ಡೆ ಕಟ್ಟಿಲ್ಲ ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕಿ ಮಂಜುಳಾ ಜಮೀನಿಗೆ ಭೇಟಿ ನೀಡಿದ್ದು ಪರಿಶೀಲಿಸಿ, ಬೆಳೆಯ ಮಾದರಿಯನ್ನು ಸಂಗ್ರಹಿಸಿ ಕೊಂಡೊಯ್ದಿದ್ದಾರೆ.

# ಶಿಕ್ಷಕ ವೀರಭದ್ರಸ್ವಾಮಿ ಅಮಾನತು ಖಂಡಿಸಿ ಪ್ರತಿಭಟನೆ



**ಚಾಮರಾಜನಗರ :** ಜಿಲ್ಲೆಯ ಯಳಂದೂರು ತಾಲ್ಲೂಕಿನ ತಾಲೂಕಿನ ಗುಂಬಳ್ಳಿ ಸರ್ಕಾರಿ ಪ್ರೌಢಶಾಲೆಯ ಸಹ ಶಿಕ್ಷಕ ವೀರಭದ್ರಸ್ವಾಮಿ ಅವರನ್ನು ಅಮಾನತು ಮಾಡಿರುವುದನ್ನು ಖಂಡಿಸಿ ಶಾಲಾ ವಿದ್ಯಾರ್ಥಿ ಗಳು. ಪೋಷಕರು, ಎಸ್‌ಡಿಎಂ ಸದಸ್ಯರು ಶಾಲಾ ಆವರಣ ದಲ್ಲಿ ಪ್ರತಿಭಟನೆ ನಡೆಸಿದರು. ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲ್ಲೂಕಿನ ಗುಂಬಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಜಮಾಯಿಸಿದ ವಿದ್ಯಾರ್ಥಿಗಳು,ಪೋಷಕರು ಪ್ರತಿಭಟನೆ ನಡೆಸಿ ಶಾಲೆಯ ಶಿಕ್ಷಕರಾದ ವೀರಭದ್ರಸ್ವಾಮಿ ಅವರು ಬಸ್ ಅನ್ನು ಪಕ್ಕಕ್ಕೆ ಹಾಕಲು ಚಾಲನೆ ಮಾಡಿರುವ ವೀಡಿಯೋ ಆಧರಿಸಿ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಅಮಾನತು ಆದೇಶ ಮಾಡಿದ್ದಾರೆ ಇದೂ ಸರಿಯಲ್ಲ ಎಂದು ಹೇಳಿದರು. ಶಿಕ್ಷಕ ವೀರಭದ್ರಸ್ವಾಮಿ ಅವರು ಉತ್ತಮ ಎಸ್‌ಡಿಎಂಸಿ ಶಿಕ್ಷಕರಾಗಿದ್ದು ಶಾಲೆಯಲ್ಲಿ ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ಶಾಲೆಯ ಅಭಿವೃದ್ಧಿಗೆ ಶ್ರಮಿಸಿದ್ದಾರೆ.ಶೈಕ್ಷಣಿಕ ಪ್ರವಾಸಕ್ಕೆ ತೆರಳಿದ್ದ ವೇಳೆ ಬಸ್ ಚಾಲಕರಿಗೆ ಅನಾರೋಗ್ಯ ಸಮಸ್ಯೆ ಕಾಣಿಸಿಕೊಂಡ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ರಕ್ಷಣೆಯ ಹಿತಾದೃಷ್ಟಿಯಿಂದ ಬಸ್ ನ್ನು ಚಾಲನೆ ಮಾಡಿ ಪಕ್ಕಕ್ಕೆ ನಿಲ್ಲಿಸಿದ್ದಾರೆ ಇದರಲ್ಲಿ ತಪ್ಪೇನಿದೆ ಎಂದು ಪ್ರತಿಭಟನಾಕಾರರು ಹೇಳಿದರು. ಕೂಡಲೇ ಶಿಕ್ಷಕ ವೀರಭದ್ರಸ್ವಾಮಿ ಅವರ ಅಮಾನತು ಆದೇಶವನ್ನು ಹಿಂಪಡೆಯಬೇಕು. ಜೊತೆಗೆ ಚಾಲಕನಿಗೆ ಅನಾರೋಗ್ಯ ಶಿಕ್ಷಕರಾಗಿ ಗುಂಬಳ್ಳಿ ಶಾಲೆಯಲ್ಲಿಯೇ ಕರ್ತವ್ಯ ನಿರ್ವಹಿಸಲು ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

# ವಾಹನಗಳಿಗೆ ಉಚಿತ ಪ್ರವೇಶಕ್ಕೆ ವ್ಯವಸ್ಥೆ

**ಶಿಡ್ಲಘಟ್ಟ :** ತಲಕಾಯಲಬೆಟ್ಟದಲ್ಲಿ ನಡೆಯುವ ಜಾತ್ರೆಗೆ ಆರ್.ಸಿ.ಜಿ.ಫೌಂಡೇಷನ್ ಸಂಸ್ಥೆ ರಾಸುಗಳಿಗೆ ಮತ್ತು ವಾಹನಗಳಿಗೆ ಟಿಕೆಟ್ ಇಲ್ಲದೆ ಉಚಿತವಾಗಿ ಜಾತ್ರೆಗೆ ಎಂಟ್ರಿ ವ್ಯವಸ್ಥೆಯನ್ನು ಕಲ್ಪಿಸಿದ್ದೇವೆ ಎಂದು ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ ತಿಳಿಸಿದರು.

ತಾಲ್ಲೂಕಿನ ತಲಕಾಯಲಬೆಟ್ಟದ ಪುರಾತನ ಶ್ರೀಭೂನಿಳಾ ಸಮೇತ ವೆಂಕಟರಮಣಸ್ವಾಮಿ ದೇವಾಲಯದಲ್ಲಿ ನಡೆದ ಮುಖಂಡರ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರ ಸಭೆಯಲ್ಲಿ ಅವರು ಮಾತನಾಡಿದರು.

ಜಾತ್ರೆಗೆ ಬರುವ ರಾಸುಗಳ ಮತ್ತು ವಾಹನಗಳ ಶುಲ್ಕ 2 ಲಕ್ಷ 35 ಸಾವಿರ ರೂ.ಗಳನ್ನು ಆರ್.ಸಿ.ಜಿ.ಫೌಂಡೇಷನ್ ವತಿಯಿಂದ ಭರಿಸಿದ್ದು ಸಂಪೂರ್ಣವಾಗಿ ಉಚಿತ ವ್ಯವಸ್ಥೆ ಕಲ್ಪಿಸಲಾಗಿದ್ದು ರೈತರು, ಚಾಲಕರು ಯಾವುದೇ ಶುಲ್ಕ ಪಾವತಿ ಮಾಡಬೇಕಾಗಿಲ್ಲ ಎಂದು ಹೇಳಿದರು.

ವಿವಿಧೆಡೆ ಒಟ್ಟಾಗಿ ಕರಪತ್ರ ಮತ್ತು ಪ್ರಚಾರ ಮಾಡುವ ಮೂಲಕ ಮುಖಂಡರು, ಕಾರ್ಯಕರ್ತರು ಜಾತ್ರೆಗೆ ಬರುವ ಜನರಲ್ಲಿ ತಿಳಿ ಹೇಳಬೇಕು ಮತ್ತು ಜಾತ್ರೆಯನ್ನು ಯಶ್ವಸಿಗೊಳಿಸಬೇಕೆಂದು ಅವರು ಮನವಿ ಮಾಡಿದರು. ನಟರಾಜ್ ಸ್ವಾಮಿ ಮಾತನಾಡಿ ಗ್ರಾಮಪಂಚಾಯತಿ ವತಿಯಿಂದ ರಾಸುಗಳಿಗೆ ಹಾಗು ಸಾರ್ವಜನಿಕರಿಗೆ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ ,ದೇವಾಲಯ ವತಿಯಿಂದ ರಾಸುಗಳನ್ನು ವ್ಯಾಪಾರ ವಹಿವಾಟು ಮಾಡಲು ವಾಹನಗಳ ನಿಲುಗಡೆಗೆ ಜಾಗವನ್ನು ಸ್ವಚ್ಛಗೊಳಿಸಲಾಗಿದೆ ಎಂದರು.

ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಆನಂದ್ ಗೌಡ ಮಾತನಾಡಿ



ಜಾತ್ರೆಗೆ ಬರಲು ನಾಲ್ಕು ದಾರಿಗಳಿದ್ದು ಆಂಧ್ರ ಪ್ರದೇಶದಿಂದಲೂ ಬರುವವರಿಗೆ ಉಚಿತ ಪ್ರವೇಶವೆಂದು ತಿಳಿಸಿದರು, ಸ್ಟಿಕರ್ ಮತ್ತು ಕರಪತ್ರ ಹಾಗೂ ವಾಹನಗಳಲ್ಲಿ ಬರುವವರಿಗೆ ಅರಿವು ಮೂಡಿಸುವ ಕೆಲಸ ಮಾಡಬೇಕೆಂದು ಬಿಜೆಪಿ ಯುವಕರು ಮುಖಂಡರು ಹಾಗು ಕಾರ್ಯಕರ್ತರಿಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಸೋಮಶೇಖರ್, ಕರಿಯಪ್ಪನಹಳ್ಳಿಯ ವೆಂಕಟರೆಡ್ಡಿ ಮಾಜಿ ದಿಶಾ ಸದಸ್ಯ ವೆಂಕಟೇಶ್, ತಾಲ್ಲೂಕು ಮಹಿಳಾ ಅಧ್ಯಕ್ಷೆ ಚಾತುರ್ಯ, ನಗರ ಘಟಕದ ಅಧ್ಯಕ್ಷ ನರೇಶ್,ಮುಖಂಡರಾದ ಶ್ರೀಧರ್, ಮದ್ದಿರೆಡ್ಡಿ, ವೆಂಕಟರಾಮರೆಡ್ಡಿ, ಭೈರಾರೆಡ್ಡಿ ಹಾಗು ಸುತ್ತಮುತ್ತಲಿನ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಜೀತದಾಳುಗಳಿಗೆ ಬಿಡುಗಡೆ ಪತ್ರ ವಿಳಂಬ ಖಂಡಿಸಿ ಪ್ರತಿಭಟನೆ




**ಚಾಮರಾಜನಗರ. :** ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ 53 ಮಂದಿ ಜೀತುದಾಳುಗಳಿಗೆ ಬಿಡುಗಡೆ ಪತ್ರ ನೀಡಲು ವಿಳಂಬ ಖಂಡಿಸಿ ರೂಟ್ಸ್ ಆಫ್ ಫ್ರೀಡಂ ಸಂಘಟನೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಪ್ರತಿಭಟನಾ ಕಾದರು. ಅಲ್ಲಿಂದ ಮೆರವಣಿಗೆ ಯಲ್ಲಿ ಪಚ್ಚಪ್ಪ ವೃತ್ತ ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಪ್ರತಿಭಟನೆ ನಡೆಸಿದರು.

ಸರ್ಕಾರ, ಗುಂಡ್ಲುಪೇಟೆ ತಾಲೂಕು ಆಡಳಿತದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ನಮ್ಮ ಸಂಘಟನೆಯಿಂದ 2014 ನೇ ಸಾಲಿನಲ್ಲಿ 50 ಮಂದಿ ಜೀತದಾಳುಗಳನ್ನು ಗುರುತಿಸಿ ಜಿಲ್ಲಾಧಿ ಕಾರಿಗೆ ಸಲ್ಲಿಸಲಾಗಿತ್ತು. 2015ನೇ ಸಾಲಿ ನಲ್ಲಿ ಜೀತದಾಳುಗಳ ತನಿಖೆ ಮಾಡಲು ತಹಸೀಲ್ದಾರ್ ಅಧ್ಯಕ್ಷ ತೆಯಲ್ಲಿ ತನಿಖಾ ತಂಡಗಳು ರಚನೆ ಮಾಡಿ ಫೆಬ್ರವರಿ ಮತ್ತು ಮಾರ್ಚ್ ತಿಂಗಳಲ್ಲಿ 50 ಮಂದಿ ಜೀತದಾಳಗಳನ್ನು 1 ರಿಂದ 9 ಅನುಬಂಧಗಳ ಮೂಲಕ ವಿಚಾರಣೆ ಮಾಡಿ ತಂಡದ ಅಭಿಪ್ರಾಯ ಮತ್ತು ನೋಡ ಅಧಿಕಾರಿಗಳ ಸಹಿಗಳೊಂದಿಗೆ ಜೀತದಾಳುಗಳೆಂದು ಪರಿಗಣಿಸಿ ವರದಿ ಮಾಡಲಾಗಿದೆ ಎಂದು ಪ್ರತಿಭಟನಾಕಾರರು ಹೇಳಿದರು

ಗ್ರಾಮ ಪಂಚಾಯತಿಗಳಿಂದ ತಾಪಂ ಇಒ ವರದಿ ಪಡೆದಿದ್ದು ಪಂಚಾಯಿತಿವಾರು ಪಟ್ಟಿಯಂತೆ ತಾಲೂಕಿನಲ್ಲಿ ಮೂರು ಹೋಬಳಿಗಳ 6 ಗ್ರಾಮ ಪಂಚಾಯತಿಗಳಿಂದ ಒಟ್ಟು 50 ಮಂದಿ ಜೀತದಾಳುಗಳಿಗೆ ಬಿಡುಗಡೆ ಪತ್ರಕ್ಕಾಗಿ ತಹಶೀಲ್ದಾರ್ ರವರಿಗೆ ವರದಿ ಸಲ್ಲಿಸಿರುತ್ತಾರೆ. ಈ ವರದಿ ಆಧರಿಸಿ ತಹಸೀಲ್ದಾರ್ ಅವರು 47 ಮಂದಿ ಜೀತದಾಳುಗಳ ಪಟ್ಟಿ ಸಮೇತ ಉಪವಿಭಾಗಾಧಿಕಾರಿಗೆ ವರದಿ ಸಲ್ಲಿಸಿದ್ದಾರೆ.

ಗುಂಡ್ಲುಪೇಟೆ ತಾಲ್ಲೂಕು ಕಛೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿಗಳು, ತಹಸೀಲ್ದಾರ್, ರೂಟ್ಸ್ ಫಾರ್ ಫ್ರೀಡಂ ಸಂಘಟನೆಯ ಡಾ.ಜೀವಿಕ ರತ್ನಮ್ಮ ಸಮ್ಮುಖದಲ್ಲಿ 52 ಮತ್ತು । ಪಾಲಿ ಜೀತದಾಳು ಒಟ್ಟು 53 ಮಂದಿ ಜೀತದಾಳುಗಳನ್ನು ಜೀತ ಪದ್ಧತಿ ರದ್ಧತಿ ಕಾಯ್ದೆ 1976 ರ ಅನ್ವಯ ಕೇಂದ್ರ ಸರ್ಕಾರದ ಮಾರ್ಗಸೂಚಿ 21 ಪ್ರಶ್ನಾವಳಿಗಳ ಮೂಲಕ ಎಲ್ಲಾ ಜೀತದಾಳುಗಳನ್ನು ವಿಚಾರಣೆ ಮತ್ತು ಹಿಡಿಯೋ ಚಿತ್ರೀಕರಣ ಮಾಡಿ ವರದಿ ಮಾಡಲಾಗಿದೆ. ಆದರೆ ಇದುವರೆಗೂ ಯಾವುದೇ ಕ್ರಮವಹಿಸದೆ ಜೀತದಾಳುಗಳಿಗೆ ಬಿಡುಗಡೆ ಪತ್ತಗಳು ಕೊಡದೆ ಅನ್ಯಾಯ ಮಾಡಲಾಗಿದೆ. ಆದ್ದರಿಂದ 53 ಜೀತದಾಳುಗಳಿಗೆ ಬಿಡುಗಡೆ ಪತ್ರ ನೀಡಿ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಗುರುಮಲ್ಲಪ್ಪ, ಚಿಕ್ಕರಂಗಶೆಟ್ಟಿ, ಕರಿಯಯ್ಯ, ವೆಂಕಟರಾಮು, ದೊಡ್ಡಯ್ಯ, ರಾಚಯ್ಯ, ದೇವಸುಂದರಿ, ಕಣ್ಣಮ್ಮ, ಗಂಗಮ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಬುದ್ಧಿ ಚುರುಕುಗೊಳಿಸುವ ಆಟ ಚೆಸ್

ಶಿಡ್ಲಘಟ್ಟ: ಚೆಸ್ ಏಕಾಗ್ರತೆ ಬಯಸುವ ಮತ್ತು ಬುದ್ಧಿ ಚುರುಕುಗೊಳಿಸುವ ಆಟ ಚೆಸ್ ಸಾಕಷ್ಟು ಚಲನೆ ಮತ್ತು ತಂತ್ರಗಳನ್ನು ಒಳಗೊಂಡಿದೆ ನೆನಪನ್ನು ತೀಕ್ಷ್ಣಗೊಳಿಸಲು ಮತ್ತು ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಹೆಚ್ಚಿನ ದಕ್ಷತೆ ತರಲು ಸಹಾಯ ಮಾಡುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಮ್ಮದ್ ರೋಷನ್ ಷಾ ಹೇಳಿದ್ದಾರೆ.

ನಗರದ ಕ್ರೆಸೆಂಟ್ ವಿದ್ಯಾಸಂಸ್ಥೆಯಲ್ಲಿ ಪಾಂಚಜನ್ಯ ಅಸೋಸಿಯೇಷನ್, ಚಾಣಕ್ಯ ಚೆಸ್ ಅಕಾಡೆಮಿ ಸಹಯೋಗದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಚೆಸ್ ಚಾಂಪಿಯನ್‌ಶಿಪ್ ಟೂರ್ನಮೆಂಟ್ ಉದ್ಘಾಟಿಸಿ ಅವರು ಮಾತನಾಡಿದರು.



ಚೆಸ್ ಆಟದಲ್ಲಿ ಭಾಗವಹಿಸುವುದರಿಂದ ಮಕ್ಕಳ ಬುದ್ಧಿಶಕ್ತಿ, ನೆನಪಿನ ಶಕ್ತಿ, ಸೃಜನಶೀಲತೆ ಬೆಳೆಯುತ್ತದೆ, ಚೆಸ್ ಚತುರರ ಆಟ ಚೆಸ್ ಆಡುವುದರಿಂದ ಮಕ್ಕಳ ಬುದ್ಧಿಶಕ್ತಿ, ನೆನಪಿನ ಶಕ್ತಿ, ಸೃಜನಶೀಲತೆ ಹೆಚ್ಚುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮೂಳೆತಜ್ಞ ಡಾ.ಅಜಿತ್, ನರರೋಗ ತಜ್ಞ ಡಾ.ಅಭಿಷೇಕ್, ಚೆಸ್ ಅಸೋಸಿಯೇಷನ್ ಜಿಲ್ಲಾ ಕಾರ್ಯದರ್ಶಿಗಳಾದ ಸುರೇಶ್‌ಬಾಬು, ಕ್ರೆಸೆಂಟ್ ವಿದ್ಯಾಸಂಸ್ಥೆ ಕಾರ್ಯದರ್ಶಿ ಮಹಮ್ಮದ್ ಅನ್ಸಾರಿ, ಡಾಲ್ಫಿನ್ ವಿದ್ಯಾಸಂಸ್ಥೆ ಅಧ್ಯಕ್ಷ ಎ.ನಾಗರಾಜ್,ಮುಸ್ತಾಕ್, ಟಿ.ಟಿ.ನರಸಿಂಹಪ್ಪ ಮುಂತಾದವರು ಹಾಜರಿದ್ದರು.

# ಅಕ್ರಮ ಗಣಿಗಾರಿಕೆ ನಿಲ್ಲುವಂತೆ ಆಗ್ರಹಿಸಿ ರೈತರಿಂದ ಪ್ರತಿಭಟನೆ



**ಚಾಮರಾಜನಗರ :** ಸರ್ಕಾರಿ ಗೋಮಾಳದಲ್ಲಿ ಅಕ್ರಮ ಗಣಿಗಾರಿಕೆ ನಿಲ್ಲಿಸುವಂತೆ ಜಿಲ್ಲಾಡಳಿತಕ್ಕೆ ಆಗ್ರಹಿಸಿ ರೈತರು ರಾಷ್ಟ್ರೀಯ ಹೆದ್ದಾರಿ ತಡೆದು ತಾಲ್ಲೂಕಿನ ಪಣ್ಯದಹುಂಡಿ ಬಳಿ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಪ್ರತಿಭಟನೆ ನಡೆಸಿದರು. ಚಾಮರಾಜನಗರ ತಾಲ್ಲೂಕಿನ ಪಣ್ಯದಹುಂಡಿ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 150ಎ ರಲ್ಲಿ ರಸ್ತೆ ತಡೆದ ರೈತರು ರಸ್ತೆಗಳಲ್ಲಿ ಅಧಿಕ ಭಾರ ತುಂಬಿಕೊಂಡು ಟಿಪ್ಪರ್‌ಗಳು ಸಾಗಾಣಿಕೆ ಮಾಡಲಾಗುತ್ತಿದೆ ಎಂದು ದೂರಿದರು. ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಬಸವಣ್ಣ ಮಾತನಾಡಿ, ಪಣ್ಯದಹುಂಡಿ, ಹಗ್ಗೋತಾರ, ಮುತ್ತಿಗೆ ಸೇರಿದಂತೆ ಇನ್ನಿತರ ಗ್ರಾಮಗಳಿಗೆ ಸೇರಿದ ಅಂದಾಜು 250 ಹೆಕ್ಟರ್ ಸರ್ಕಾರಿ ಗೋಮಾಳದಲ್ಲಿ ಗಣಿ ಮಾಲೀಕರು ಅತಿಕ್ರಮಣ ಮಾಡಿಕೊಂಡು ಅಕ್ರಮವಾಗಿ ಗಣಿಗಾರಿಕೆ ಮಾಡುತ್ತಿದ್ದರೂ ಜಿಲ್ಲಾಡಳಿತ ಕಣ್ಮುಚ್ಚಿಕುಳಿತಿದೆ ಎಂದು ದೂರಿದರು. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಧಿಕಾರಿಗಳಿಗೆ ಹಲವಾರು ಭಾರಿ ಮನವಿ ನೀಡಿದರೂ ಪ್ರಯೋಜನವಾಗಿಲ್ಲ ಎಂದು ತಿಳಿಸಿ, ಅಧಿಕ ಭಾರ ಹೊತ್ತ ಟಿಪ್ಪರ್‌ಗಳು ನಿರಂತರವಾಗಿ ಓಡಾಡುತ್ತಿರುವುದರಿಂದ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿದ್ದು, ಮನೆಗಳು ಸಹ ಬಿರುಕು ಬಿಟ್ಟದೆ. ಅಲ್ಲದೇ ಜನರು ಭಯದಿಂದಲೇ ಓಡಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಕ್ರಮವಹಿಸಬೇಕು. ಇಲ್ಲದಲ್ಲಿ ಫೆ 17 ರಂದು ಜಿಲ್ಲೆಗೆ ಬರಲು ಅವಕಾಶ ನೀಡುವುದಿಲ್ಲ. ಸಚಿವ ಸಂಪುಟ ಸಭೆಯನ್ನು ಸಹ ಧಿಕ್ಕರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸಂಘದ ಜಿಲ್ಲಾ ಕಾರ್ಯದರ್ಶಿ ಜಿಠಾರ ವಿಜಯ್ ಕುಮಾರ್ ಮಾತನಾಡಿ, ಹೈಕೋರ್ಟ್ ಆದೇಶವನ್ನು ಪಾಲಿಸಲು ಇಲ್ಲಿನ ಜಿಲ್ಲಾಡಳಿತ ಹಾಗೂ ಅಧಿಕಾರಿಗಳು ವಿಫಲವಾಗಿದ್ದಾರೆ. ಹಾಗಾಗಿ ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಬಂದು ನಮ್ಮ ಅಹವಾಲನ್ನು ಸ್ವೀಕಾರ ಮಾಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೇಲಾಜಿಯರ ಕುಮಾರ್, ಪದಾಧಿಕಾರಿಗಳಾದ ಮರಿಸ್ವಾಮಪ್ಪ, ಶಿವಲಿಂಗೇಗೌಡ, ಮಾದಪ್ಪ, ಚಿನ್ನಸ್ವಾಮಿ, ನಾಗರಾಜಮೂರ್ತಿ, ಗೋವಾಳವನ್ನು ಅತಿಕ್ರಮಣ ಮಾಡಿಕೊಂಡು ಗಣಿಗಾರಿಕೆ ಸ್ವಾಮಿ, ಸಂತೋಷ್, ಮಹೇಶ್, ಭಾಗಮ್ಮ, ರೂಪ, ಕವಿತ, ಸವಿತ, ಶಾರದಮ್, ಪಾರ್ವತಿ, ಪವಿತ್ರ ಸೇರಿದಂತೆ ಇತರರು ಭಾಗವಹಿಸಿದ್ದರು.

# ಜಾಂಭವ ಯುವ ಸೇನಾ ವತಿಯಿಂದ ಶಾ ವಿರುದ್ಧ ಪ್ರತಿಭಟನೆ

**ಶಿಡ್ಲಘಟ್ಟ :** ನಗರದ ಜಾಂಭವ ಯುವ ಸೇನಾ ವತಿಯಿಂದ ಒಳ ಮೀಸಲಾತಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ರವರು ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ರವರಿಗೆ ತೋರಿಸಿರುವ ಆಗೌರವದ ವಿರುದ್ಧ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.

ನಗರದ ಇಂದಿರಾ ಕ್ಯಾಂಟೀನ್ ನಿಂದ ಟಿ.ಬಿ ರಸ್ತೆ ಮೂಲಕ ಬೃಹತ್ ಕಾಲ್ನಡಿಗೆ ಜಾಥದ ಮೂಲಕ ತಾಲ್ಲೂಕು ಕಚೇರಿ ಆವರಣಕ್ಕೆ ತೆರಳಿ ಆವರಣದ ಮುಂದೆ ಅಮಿತ್ ಶಾ ಭಾವಚಿತ್ರ ಹಿಡಿದು ಅಮಿತ್ ಶಾ ರವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನೆ ಮಾಡಿದರು.

ನಂತರ ಜಾಂಭವ ಯುವ ಸೇನಾ ವತಿಯಿಂದ ಒಳ ಮೀಸಲಾತಿ ಹಾಗೂ ಕೇಂದ್ರ ಸಚಿವ ಅಮಿತ್ ಶಾ ವಿರುದ್ಧ ಸರ್ಕಾರಕ್ಕೆ ತಹಸೀಲ್ದಾರ್ ಬಿ.ಎನ್ ಸ್ವಾಮಿ ರವರ ಮೂಲಕ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಈ ವೇಳೆ ತಾಲ್ಲೂಕು ಜಾಂಭವ ಯುವ ಸೇನಾ ಪದಾಧಿಕಾರಿಗಳಿಂದ ನೂತನ ಕಚೇರಿಯನ್ನು ರಾಜ್ಯಾಧ್ಯಕ್ಷರಾದ ಡಾ.ರಮೇಶ್ ಚಕ್ರವರ್ತಿ ಹಾಗೂ ತಾಲ್ಲೂಕು ಅಧ್ಯಕ್ಷ ಮಳ್ಳೂರು ಎಂ.ಸಂದೀಪ್ ಕುಮಾರ್ ರವರು ಟೇಪ್ ಕತ್ತರಿಸುವ ಮೂಲಕ ಉದ್ಘಾಟನೆ ಮಾಡಿದರು.

ರಾಜ್ಯಾಧ್ಯಕ್ಷರಾದ ಡಾ.ರಮೇಶ್ ಚಕ್ರವರ್ತಿ ಮಾತನಾಡಿ, ಭಾರತ ದೇಶವೇ ತಲೆತಗ್ಗಿಸುವಂತಹ ವಿಚಾರ ಇದರ

ಕೇಂದ್ರ ಸರ್ಕಾರದಲ್ಲಿ ಗೃಹ ಸಚಿವರಾದ ಅಮಿತ್ ಶಾ ಅವರು ಡಾ.ಬಿ.ಆರ್ ಅಂಬೇಡ್ಕರ್ ಅವರ ಹೆಸರಿಗೆ ಕಳಂಕ ತರುವಂತ ವಿಚಾರವನ್ನು ಇಡೀ ಭಾರತ ದೇಶವೇ ಖಂಡಿಸಿ ಉಗ್ರವಾದ ಪ್ರತಿಭಟನೆಗಳು ಮಾಡಿಕೊಂಡು ಬರುತ್ತಿದ್ದರು ಅವರು ಯಾವುದೇ ರೀತಿಯ ಬಹಿರಂಗವಾಗಿ ಕ್ಷಮಾರ್ಪಣೆ ಯಾಚಿಸಿಲ್ಲ ಎಷ್ಟೇ ಮನವಿಗಳನ್ನು ಕೊಟ್ಟರು ಸಹಾ ಅವರು ಸ್ಪಂದಿಸದೆ ಇರುವುದರಿಂದ ಜಾಂಭವ ಯುವ ಸೇನಾ ಸಂಘಟನೆ ವತಿಯಿಂದ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಾಂಭವ ಯುವ ಸೇನಾ ಜಿಲ್ಲಾಧ್ಯಕ್ಷ ಶ್ರೀನಿವಾಸ್,ಜಿಲ್ಲಾ ಉಪಾಧ್ಯಕ್ಷ ಮಳ್ಳೂರು ದ್ಯಾವಪ್ಪ,ಗೌರವ ಅಧ್ಯಕ್ಷ ಕಂಬದಹಳ್ಳಿ ದೇವರಾಜ್,ಪ್ರಧಾನ ಕಾರ್ಯದರ್ಶಿ ಮಳ್ಳೂರು ಗಂಗಾಧರ್,ಕಾರ್ಯದರ್ಶಿ ಕಾಚಹಳ್ಳಿ ಮುನಿಯಪ್ಪ , ಮಾನವ ಹಕ್ಕುಗಳ ರಾಜ್ಯ ಉಪಾಧ್ಯಕ್ಷ ಮಳ್ಳೂರು ಅಶೋಕ್,ಜಾಂಭವ ಯುವ ಸೇನಾ ಕಲಾಮಂಡಳಿ ಅಧ್ಯಕ್ಷ ಶಿವಣ್ಣ,ತಾಲ್ಲೂಕು ಅಧ್ಯಕ್ಷ ಮಳ್ಳೂರು ಎಂ.ಸಂದೀಪ್ ಕುಮಾರ್,ಕಟ್ಟಡ ಕಾರ್ಮಿಕ ಅಧ್ಯಕ್ಷ ನರೇಂದ್ರ,ಉಪಾಧ್ಯಕ್ಷ ಶ್ರೀನಿವಾಸ್ ಗೌರವಾಧ್ಯಕ್ಷ ಶ್ರೀರಾಮ್, ಖಜಾಂಚಿ ಗಂಗನಹಳ್ಳಿ ನರಸಿಂಹಪ್ಪ, ಕಾರ್ಯದರ್ಶಿ ಶಶಿ,ಪ್ರಧಾನ ಕಾರ್ಯದರ್ಶಿ ಅಪ್ಪೇ ಗೌಡನಹಳ್ಳಿ ದೇವರಾಜ್, ಚೀಮನಹಳ್ಳಿ ವೆಂಕಟಸ್ವಾಮಿ,ಪ್ರವೀಣ್, ಮಹೇಶ್,,ದೇವನಹಳ್ಳಿ ತಾಲ್ಲೂಕು ಅಧ್ಯಕ್ಷ ಮುನಿರಾಜು,ಖಜಾಂಚಿ ವೆಂಕಟರಮಣಪ್ಪ,ಗಂಗನಹಳ್ಳಿ ದ್ಯಾವಪ್ಪ,ಎನ್.ಪ್ರಕಾಶ್, ಭೀಮಕಣದ ಶ್ರೀನಿವಾಸ್ ಮುಂತಾದವರು ಪಾಲ್ಗೊಂಡಿದ್ದರು.

# ನಿಲ್ಲುತ್ತಿಲ್ಲ ಉದಿತ್ ಹಾವಳಿ



ಗಾಯಕ ಉದಿತ್ ನಾರಾಯಣ್ ಅವರು ಇತ್ತೀಚೆಗೆ ಸಾಕಷ್ಟು ಸುದ್ದಿಯಲ್ಲಿ ಇದ್ದಾರೆ. ಅವರು ಕಾನ್ಸರ್ಟ್ ವೇಳೆ ಮಹಿಳಾ ಅಭಿಮಾನಿಯ ತುಟಿಗೆ ಚುಂಬಿಸಿದ ವಿಡಿಯೋ ವೈರಲ್ ಆಗಿತ್ತು. ಇದು ಭಾರೀ ಆಕ್ರೋಶಕ್ಕೆ ಕಾರಣ ಆಗಿತ್ತು. ಅವರನ್ನು ಸೋಶಿಯಲ್ ಮೀಡಿಯಾದಲ್ಲಿ ಸಾಕಷ್ಟು ಟೀಕೆ ಮಾಡಲಾಯಿತು. ತಮ್ಮನ್ನು ತಾವು ಸಮರ್ಥಿಸಿಕೊಳ್ಳುವಾಗ 'ಈ ರೀತಿಯ ಘಟನೆಗಳು ನಡೆಯುತ್ತವೆ' ಎಂದು ಅವರು ಹೇಳಿದ್ದರು. ಈಗ ಅವರ ಮತ್ತೊಂದು ವಿಡಿಯೋ ವೈರಲ್ ಆಗಿದೆ.

ಉದಿತ್ ನಾರಾಯಣ್ ಅವರು ಸಾಕಷ್ಟು ಕಾನ್ಸರ್ಟ್‌ಗಳನ್ನು ನೀಡುತ್ತಾರೆ. ಆದರೆ, ಈ ವಿಚಾರದಲ್ಲಿ ಅವರು ಸುದ್ದಿ ಆಗಿದ್ದು ಕಡಿಮೆ. ಈಗ ಅವರು ಅಭಿಮಾನಿಗಳಿಗೆ ಕಿಸ್ ಮಾಡುತ್ತಾ ಸುದ್ದಿ ಆಗುತ್ತಿದ್ದಾರೆ. ಈ ಮೊದಲು ವೈರಲ್ ಆದ ವಿಡಿಯೋದ ಸದ್ದು ತಣ್ಣಗಾಗುವ ಮೊದಲೇ ಅವರ ಮತ್ತೊಂದು ವಿಡಿಯೋ ವೈರಲ್ ಆಗಿದ್ದು, ಟೀಕೆಗೆ ಗುರಿಯಾಗಿದ್ದಾರೆ. ಉದಿತ್ ನಾರಾಯಣ್ ಅವರು ವೇದಿಕೆ ಮೇಲೆ ಹಾಡುತ್ತಿದ್ದರು. ಆಗ ಮಹಿಳಾ ಅಭಿಮಾನಿಗಳು ಸೆಲ್ಫಿ ತೆಗೆದುಕೊಳ್ಳುವ ಪ್ರಯತ್ನ ಮಾಡಿದ್ದಾರೆ. ಈ ಸಮಯವನ್ನು ಬಳಸಿಕೊಂಡ ಉದಿತ್ ಅವರು, ಓರ್ವ ಅಭಿಮಾನಿಯ ಕೆನ್ನೆಗೆ ಮುತ್ತಿಟ್ಟರು. ಮತ್ತೋರ್ವ ಫ್ಯಾನ್‌ಗೆ ತುಟಿಗೆ ಕಿಸ್ ಮಾಡಿದ್ದಾರೆ. 'ಉದಿತ್ ನಾರಾಯಣ್ ಅವರ ಮತ್ತೊಂದು ವಿಡಿಯೋ' ಎಂದು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳಲಾಗಿದೆ. ಸದ್ಯ ಉದಿತ್ ನಾರಾಯಣ್ ಅವರನ್ನು ಅನೇಕರು ಟೀಕೆ ಮಾಡಿದ್ದಾರೆ. ಇನ್ನೂ ಕೆಲವರು ಅವರನ್ನು 'ರಸಿಕರ ರಾಜ' ಎಂದು ಕರೆದಿದ್ದಾರೆ. ಇನ್ನೂ ಕೆಲವರು ಈ ರೀತಿಯ ವರ್ತನೆಗೆ ಕಡಿವಾಣ ಹಾಕಬೇಕು ಎಂದಿದ್ದಾರೆ. ಕೆಲವರು ಮೀಮ್‌ಗಳನ್ನು ಮಾಡಿದ್ದು, 'ಗಾಡ್‌ಫಾದರ್ ಆಫ್ ಇಮ್ರಾನ್ ಹಷ್ಮಿ' ಎಂದೆಲ್ಲ ಬರೆದುಕೊಂಡಿದ್ದಾರೆ.

**ಉದಿತ್ ನಾರಾಯಣ್ ಸ್ಪಷ್ಟನೆ ಏನು?**

ಈ ಮೊದಲು ವೈರಲ್ ಆದ ವಿಡಿಯೋ ಬಗ್ಗೆ ಉದಿತ್ ಮಾತನಾಡಿದ್ದರು. 'ನಾವು ಆ ರೀತಿಯ ಜನ, ಡೀಸೆಂಟ್ ವ್ಯಕ್ತಿತ್ವದ ವ್ಯಕ್ತಿಗಳು. ಒಬ್ಬೊಬ್ಬರು ಒಂದೊಂದು ರೀತಿಯಲ್ಲಿ ಪ್ರೀತಿ ವ್ಯಕ್ತಪಡಿಸುತ್ತಾರೆ. ಅಭಿಮಾನಿ ವ್ಯಕ್ತಪಡಿಸಿದ ಪ್ರೀತಿಗೆ ನಾನು ಪ್ರತಿಕ್ರಿಯಿಸಿದ್ದೇನೇ ವಿನಃ, ಉದ್ದೇಶಪೂರ್ವಕಾಗಿ ಮಾಡಿದ್ದಲ್ಲ. ಇಂಥ ತಿತಿವಿಷಯಗಳಿಗೆ ಯಾರೂ ಹೆಚ್ಚು ಗಮನ ಹರಿಸಬಾರದು' ಎಂದಿದ್ದರು. ಅವರು ಈ ಮೊದಲು ಶ್ರೇಯಾ ಘೋಷಾಲ್ ಅವರಿಗೆ ಕಿಸ್ ಮಾಡಿದ್ದ ವಿಡಿಯೋ ವೈರಲ್ ಆಗಿತ್ತು. ಉದಿತ್ ಅವರು ಹಿಂದಿ ಮಾತ್ರವಲ್ಲದೆ ಕನ್ನಡ ಸೇರಿದಂತೆ ಸುಮಾರು 12 ಭಾಷೆಗಳಲ್ಲಿ ಹಾಡಿದ್ದಾರೆ

# ದಿಢೀರ್ ನಿವೃತ್ತಿ ಘೋಷಿಸಿದ ಮಾರ್ಕಸ್



ಆಸ್ಟ್ರೇಲಿಯಾ ತಂಡದ ಸ್ಟಾರ್ ಆಲ್‌ರೌಂಡರ್ ಮಾರ್ಕಸ್ ಸ್ಟೊಯಿನಿಸ್ ಏಕದಿನ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ ದಿನಗಳು ಮಾತ್ರ ಉಳಿದಿರುವಾಗ ಸ್ಟೊಯಿನಿಸ್ ಅಚ್ಚರಿಯ ನಿರ್ಧಾರ ಪ್ರಕಟಿಸಿದ್ದಾರೆ. ಹೀಗಾಗಿ ಮುಂಬರುವ ಟೂರ್ನಿಗೆ ಆಸ್ಟ್ರೇಲಿಯಾ ಕ್ರಿಕೆಟ್ ಬೋರ್ಡ್ ಬದಲಿ ಆಲ್‌ರೌಂಡರ್‌ನನ್ನು ಆಯ್ಕೆ ಮಾಡಬೇಕಾಗುತ್ತದೆ. ಇದಕ್ಕೂ ಮುನ್ನ ಚಾಂಪಿಯನ್ಸ್ ಟ್ರೋಫಿಗಾಗಿ ಆಯ್ಕೆ ಮಾಡಲಾದ 15 ಸದಸ್ಯರ ಆಸ್ಟ್ರೇಲಿಯಾ ತಂಡದಲ್ಲಿ ಮಾರ್ಕಸ್ ಸ್ಟೊಯಿನಿಸ್ ಕಾಣಿಸಿಕೊಂಡಿದ್ದರು. ಆದರೀಗ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್ ಕೆರಿಯರ್ ಅಂತ್ಯಗೊಳಿಸುತ್ತಿರುವುದಾಗಿ ಸ್ಟೊಯಿನಿಸ್ ತಿಳಿಸಿದ್ದಾರೆ. 35 ವರ್ಷದ ಮಾರ್ಕಸ್ ಸ್ಟೊಯಿನಿಸ್ ಏಕದಿನ ಕ್ರಿಕೆಟ್‌ಗೆ ಗುಡ್ ಬೈ ಹೇಳಿದ್ದು, ಇದಾಗ್ಯೂ ಅವರು ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಮುಂದುವರೆಯುವುದಾಗಿ ತಿಳಿಸಿದ್ದಾರೆ. ಅಲ್ಲದೆ ಮುಂಬರುವ ದಿನಗಳಲ್ಲಿ ಫ್ರಾಂಚೈಸಿ ಲೀಗ್‌ನತ್ತ ಹೆಚ್ಚಿನ ಗಮನ ಕೇಂದ್ರೀಕರಿಸಲು ನಿರ್ಧರಿಸಿದ್ದಾರೆ. ಮಾರ್ಕಸ್ ಸ್ಟೊಯಿನಿಸ್ ಆಸ್ಟ್ರೇಲಿಯಾ ಪರ 71 ಏಕದಿನ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 64 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿರುವ ಅವರು 1 ಶತಕ ಹಾಗೂ 6 ಅರ್ಧಶತಕಗಳೊಂದಿಗೆ ಒಟ್ಟು 1495 ರನ್ ಕಲೆಹಾಕಿದ್ದಾರೆ. ಹಾಗೆಯೇ 64 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿ 48 ವಿಕೆಟ್‌ಗಳನ್ನು ಸಹ ಕಬಳಿಸಿದ್ದಾರೆ. 2015 ರಿಂದ ಶುರುವಾದ ಏಕದಿನ ಕ್ರಿಕೆಟ್ ಬದುಕಿಗೆ 10 ವರ್ಷಗಳ ಬಳಿಕ ಮಾರ್ಕಸ್ ಸ್ಟೊಯಿನಿಸ್ ಅಂತ್ಯವಾಡಿದ್ದು, ಟಿ20 ತಂಡದಲ್ಲಿ ಮುಂದುವರೆಯುವ ವಿಶ್ವಾಸದಲ್ಲಿದ್ದಾರೆ.

# 'ಅಸೂಯೆಗೆ ನನ್ನಲ್ಲಿ ಜಾಗವಿಲ್ಲ'



ನಟಿ ಸಮಂತಾ ಅವರು ಹೊಸ ಸಿನಿಮಾಗಳನ್ನು ಘೋಷಿಸುತ್ತಿಲ್ಲ. ಇದರ ಜೊತೆಗೆ ಅನಾರೋಗ್ಯ ಸಮಸ್ಯೆ. ಹೀಗೆ ವಿಚ್ಛೇದನದ ಬಳಿಕ ಸಮಂತಾ ಅವರು ಎದುರಿಸಿದ ಸಮಸ್ಯೆಗಳು ಒಂದೆರಡಲ್ಲ. ಈ ಮಧ್ಯೆ ನಾಗ ಚೈತನ್ಯ ಅವರ ಹೊಸ ಸಿನಿಮಾಗಳು ರಿಲೀಸ್ ಆಗುತ್ತಿವೆ. ಅವರು ಎರಡನೇ ಮದುವೆ ಕೂಡ ಆಗಿದ್ದಾರೆ. ಈ ವಿಚಾರದಲ್ಲಿ ಸಮಂತಾಗೆ ಅಸೂಯೆ ಇದೆಯೇ? ಈ ಬಗ್ಗೆ ಅವರು ಮೌನ ಮುರಿದಿದ್ದಾರೆ. ಸಂದರ್ಶನ ಒಂದರಲ್ಲಿ ಈ ಬಗ್ಗೆ ಹೇಳಿಕೊಂಡಿದ್ದು, 'ಅಸೂಯೆಗೆ ನನ್ನಲ್ಲಿ ಜಾಗವಿಲ್ಲ' ಎಂದಿದ್ದಾರೆ. ಸಮಂತಾ ಹಾಗೂ ನಾಗ ಚೈತನ್ಯ ಪ್ರೀತಿಸಿ ಮದುವೆ ಆದರು. ಆದರೆ, ನಾಲ್ಕು ವರ್ಷಕ್ಕೆ ಇವರ ಸಂಸಾರ ಕೊನೆ ಆಯಿತು. 2021ರಲ್ಲಿ ಇಬ್ಬರೂ ಬೇರೆ ಆದರು. ಈಗ ನಾಗ ಚೈತನ್ಯ ಅವರು ನಟಿ ಶೋಭಿತಾ ಧುಲಿಪಾಲ್ ಅವರನ್ನು ವಿವಾಹ ಆಗಿದ್ದಾರೆ. 'ಜಿಕ್ಯೂ'ಗೆ ನೀಡಿದ ಸಂದರ್ಶನದಲ್ಲಿ ಸಮಂತಾಗೆ ಈ ಬಗ್ಗೆ ಪ್ರಶ್ನೆ ಎದುರಾಗಿದೆ. 'ನಿಮ್ಮ ಎಕ್ಸ್ (ಮಾಜಿ ಪತಿ) ಜೀವನದಲ್ಲಿ ಎಲ್ಲವನ್ನೂ ಮರೆತು ಮುಂದೆ ಹೋಗಿದ್ದಾರೆ. ಮತ್ತೊಂದು ಸಂಬಂಧದಲ್ಲಿ ಇದ್ದಾರೆ. ಈ ಬಗ್ಗೆ ನಿಮಗೆ ಅಸೂಯೆ ಇದೆಯೇ' ಎಂದು ಕೇಳಲಾಗಿದೆ. ಇದಕ್ಕೆ ಸಮಂತಾ ನೇರ ಮಾತುಗಳಲ್ಲಿ ಉತ್ತರ ನೀಡಿದ್ದಾರೆ. 'ನನ್ನ ಹೃದಯದಲ್ಲಿ ಅಸೂಯೆಗೆ ಜಾಗವೇ ಇಲ್ಲ' ಎಂದು ಸಮಂತಾ ಹೇಳಿಕೊಂಡಿದ್ದಾರೆ. 'ನನ್ನ ಜೀವನದಲ್ಲಿ ನಾನು ಸಾಕಷ್ಟು ಕಷ್ಟಗಳನ್ನು ನೋಡಿದ್ದೇನೆ. ಆದಾಗ್ಯೂ ಒಳ್ಳೆಯದು ಮಾಡಬೇಕು ಎಂಬುದು ನನ್ನ ಉದ್ದೇಶ. ನಾನು ಅಸೂಯೆಯಿಂದ ಸಂಪೂರ್ಣವಾಗಿ ದೂರವೇ ಇದ್ದೇನೆ. ಅದು ನನ್ನ ಅಂತರಂಗದ ಭಾಗವಾಗಿರಲು ನನಗೆ ಇಷ್ಟ ಇಲ್ಲ. ಏನೇ ಕೆಡುಕಾದರೂ ಅದಕ್ಕೆ ಅಸೂಯೆ ಮೂಲ ಕಾರಣ ಎಂದು ನಾನು ಭಾವಿಸುತ್ತೇನೆ. ಉಳಿದಂತೆ ಎಲ್ಲವೂ ಚೆನ್ನಾಗಿದೆ. ಅಸೂಯೆಯಷ್ಟು ಅನಾರೋಗ್ಯಕರವಾದ ವಿಚಾರಕ್ಕೆ ನನ್ನಲ್ಲಿ ಜಾಗವಿಲ್ಲ' ಎಂದು ಹೇಳಿದರು.



# ಚಾಂಪಿಯನ್ಸ್ ಟ್ರೋಫಿ 2025: 12 ಅಂಪೈರ್‌ಗಳು, 3 ರೆಫರಿಗಳ ಪಟ್ಟಿ ಪ್ರಕಟ

**ನವದೆಹಲಿ:** ಪಾಕಿಸ್ತಾನ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್‌ನಲ್ಲಿ ಫೆಬ್ರವರಿ 19ರಿಂದ ಮಾರ್ಚ್ 9ರವರೆಗೆ ನಡೆಯಲಿರುವ 2025ರ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್‌ಗೆ 12 ಅಂಪೈರ್‌ಗಳು ಮತ್ತು ಮೂವರು ಮ್ಯಾಚ್ ರೆಫರಿಗಳ ಪಟ್ಟಿಯನ್ನು ಅಂತಾರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ (ಐಸಿಸಿ) ಬುಧವಾರ ಪ್ರಕಟಿಸಿದೆ.

ಪಾಕಿಸ್ತಾನದ ಕರಾಚಿ, ಲಾಹೋರ್ ಮತ್ತು ರಾವಲ್ಪಿಂಡಿ ಹಾಗೂ ಯುಎಇಯ ದುಬೈನಲ್ಲಿ ಪಂದ್ಯಾವಳಿ ನಡೆಯಲಿದೆ. 12 ಅಂಪೈರ್‌ಗಳ ವಿಶೇಷ ಸಮಿತಿಯು ಎಂಟು ತಂಡಗಳು ಆಡಲಿರುವ ಪಂದ್ಯಾವಳಿಗೆ ಅಂಪೈರ್ ಆಗಿ ಕಾರ್ಯನಿರ್ವಹಿಸಲಿದ್ದು, ಇವರ ಪೈಕಿ ಆರು ಜನ 2017ರ ಆವೃತ್ತಿಯಲ್ಲಿಯೂ ಅಂಪೈರ್ ಆಗಿ ಕಾರ್ಯನಿರ್ವಹಿಸಿದ್ದರು ಎಂದು ಐಸಿಸಿ ಹೇಳಿಕೆಯಲ್ಲಿ ತಿಳಿಸಿದೆ. 2017ರಲ್ಲಿ ಯುನೈಟೆಡ್ ಕಿಂಗ್‌ಡಮ್‌ನಲ್ಲಿ ನಡೆದ ಹಿಂದಿನ ಚಾಂಪಿಯನ್ಸ್ ಟ್ರೋಫಿಯ ಫೈನಲ್‌ನಲ್ಲಿ ಅಂಪೈರಿಂಗ್ ಮಾಡಿದ್ದ ರಿಚರ್ಡ್ ಕೆಟಲ್ ಬರೋ ಕೂಡ ಪಟ್ಟಿಯಲ್ಲಿ ಸೇರಿದ್ದಾರೆ. ಇವರು 108 ಪುರುಷರ ಏಕದಿನ ಪಂದ್ಯಗಳಲ್ಲಿ ಅಂಪೈರ್ ಆಗಿ ಕೆಲಸ ಮಾಡಿದ್ದಾರೆ. ಕ್ರಿಸ್ ಗಫಾನಿ, ಕುಮಾರ್ ಧರ್ಮಸೇನಾ, ರಿಚರ್ಡ್ ಇಲ್ಲಿಂಗ್ ವರ್ತ್, ಪಾಲ್ ರೀಫೆಲ್ ಮತ್ತು ರಾಡ್ ಟಕರ್ ಕೂಡ ಅಂಪೈರ್‌ಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ರಾಡ್ ಟಕರ್ 2017ರ ಪಾಕಿಸ್ತಾನ ಗೆದ್ದುಕೊಂಡಿದ್ದ ಪಂದ್ಯಾವಳಿಯಲ್ಲಿಯೂ ಅಂಪೈರ್ ಆಗಿದ್ದರು.

ಧರ್ಮಸೇನಾ ಈಗಾಗಲೇ 132 ಪಂದ್ಯಗಳಲ್ಲಿ ಅಂಪೈರ್ ಆಗಿ ಕೆಲಸ ಮಾಡಿದ್ದು, ಇದು ಏಕದಿನ ಪಂದ್ಯಗಳಲ್ಲಿ ಶ್ರೀಲಂಕಾದ ಅಂಪೈರ್ ಒಬ್ಬರು ಅತ್ಯಧಿಕ ಸಂಖ್ಯೆಯ ಪಂದ್ಯಗಳಿಗೆ ಅಂಪೈರಿಂಗ್ ಮಾಡಿರುವ ದಾಖಲೆಯಾಗಿದೆ.

ಅಹಮದಾಬಾದ್‌ನಲ್ಲಿ ನಡೆದ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ 2023ರ ಪುರುಷರ ಏಕದಿನ ವಿಶ್ವಕಪ್ ಫೈನಲ್‌ನಲ್ಲಿ ಒಟ್ಟಿಗೆ ಅಂಪೈರಿಂಗ್ ಮಾಡಿದ್ದ ಕೆಟಲ್ ಬರೋ ಮತ್ತು ಇಲ್ಲಿಂಗ್ ವರ್ತ್ ಅವರೊಂದಿಗೆ ಮೈಕೆಲ್ ಗೌಫ್, ಆಡ್ರಿಯನ್ ಹೋಲ್ಡ್ ಸ್ಟಾಕ್, ಅಹ್ಸಾನ್ ರಾಜಾ, ಶರ್ಫುದ್ದೀನ್ ಇಬ್ನೆ ಶಾಹಿದ್, ಅಲೆಕ್ಸ್ ವಾರ್ಫ್ ಮತ್ತು ಜೋಯಲ್ ವಿಲ್ಸನ್ ಕೂಡ ಅಂಪೈರ್‌ಗಳ ಪಟ್ಟಿಯಲ್ಲಿ ಸೇರಿದ್ದಾರೆ.

ಡೇವಿಡ್ ಬೂನ್, ರಂಜನ್ ಮದುಗಲೆ ಮತ್ತು ಆಂಡ್ರ್ಯೂ ಪೈಕ್ರಾಫ್ಟ್ 2025ರ ಚಾಂಪಿಯನ್ಸ್ ಟ್ರೋಫಿಯ ಮ್ಯಾಚ್ ರೆಫರಿಗಳ ಸಮಿತಿಯ ನೇತೃತ್ವ ವಹಿಸಲಿದ್ದಾರೆ. ಭಾರತ ಮತ್ತು ಪಾಕಿಸ್ತಾನ ನಡುವಿನ 2017 ರ ಚಾಂಪಿಯನ್ಸ್ ಟ್ರೋಫಿ ಫೈನಲ್‌ನಲ್ಲಿ ಬೂನ್ ರೆಫರಿ ಆಗಿ ಕಾರ್ಯನಿರ್ವಹಿಸಿದ್ದರೆ, ಮದುಗಲೆ ಭಾರತ ಮತ್ತು ಇಂಗ್ಲೆಂಡ್ ನಡುವಿನ 2013ರ ಫೈನಲ್‌ನಲ್ಲಿ ರೆಫರಿ ಆಗಿದ್ದರು.

**ಅಂಪೈರ್‌ಗಳು:** ಕುಮಾರ್ ಧರ್ಮಸೇನಾ, ಕ್ರಿಸ್ ಗಫಾನಿ, ಮೈಕೆಲ್ ಗೌಫ್, ಆಡ್ರಿಯನ್ ಹೋಲ್ಡ್ ಸ್ಟಾಕ್, ರಿಚರ್ಡ್ ಇಲ್ಲಿಂಗ್ ವರ್ತ್, ರಿಚರ್ಡ್ ಕೆಟಲ್ ಬರೋ, ಅಹ್ಸಾನ್ ರಾಜಾ, ಪಾಲ್ ರೀಫೆಲ್, ಶರ್ಫುದ್ದೀನ್ ಇಬ್ನೆ ಶಾಹಿದ್, ರಾಡ್ನಿ ಟಕರ್, ಅಲೆಕ್ಸ್ ವಾರ್ಫ್, ಜೋಯಲ್ ವಿಲ್ಸನ್.

**ಮ್ಯಾಚ್ ರೆಫರಿಗಳು:** ಡೇವಿಡ್ ಬೂನ್, ರಂಜನ್ ಮದುಗಲೆ, ಆಂಡ್ರ್ಯೂ ಪೈಕ್ರಾಫ್ಟ್.

# ಮದುವೆ ಆಹ್ವಾನ ಪತ್ರಿಕೆ ನೋಡಿ ನನಗೆ ಭಯವಾಗಿತ್ತು: ಡಾಲಿ

ಫೆ. 15 ಮತ್ತು 16ರಂದು ಮೈಸೂರಿನ ವಸ್ತು ಪ್ರದರ್ಶನ ಮೈದಾನದಲ್ಲಿ ಡಾಲಿ ಧನಂಜಯ ಮತ್ತು ಪ್ರಸೂತಿ ತಜ್ಞೆ ಡಾ. ಧನ್ಯತಾ ಅವರ ವಿವಾಹ ನಡೆಯಲಿದೆ. ಈ ಕುರಿತು ಧನ್ಯತಾ ಜೊತೆ ಸುದ್ದಿಗೋಷ್ಠಿ ನಡೆಸಿದ ಧನಂಜಯ ಆಡಿದ ಮಾತುಗಳು ಇಲ್ಲಿವೆ:

ಅಭಿಮಾನಿಗಳಿಲ್ಲದೆ ಯಾವುದೇ ಕಾರ್ಯಕ್ರಮ ಇಲ್ಲ. ಎಲ್ಲಾ ಅಭಿಮಾನಿಗಳು ಮದುವೆಗೆ ಬರಬೇಕು. ಮುಹೂರ್ತಕ್ಕಾದರೂ ಸರಿ, ಮದುವೆಗಾದರೂ ಸರಿ. ಅಭಿಮಾನಿಗಳಿಗೆ ಅಂತಲೇ ವಿದ್ಯಾಪತಿ ದ್ವಾರ ಅಂತ ಒಂದು ವಿಭಾಗ ಮಾಡಿದ್ದೇವೆ. ಆ ದ್ವಾರದಲ್ಲಿ ವೇದಿಕೆವರೆಗೂ ಬಂದು ಹತ್ತಿರದಿಂದ ನೋಡಿ ಶುಭ ಹಾರೈಸಬಹುದು. ಅಭಿಮಾನಿಗಳ ವಿಭಾಗಕ್ಕೆ ಒಂದು ಹೆಸರಿಡಬೇಕಿತ್ತು. ಅದಕ್ಕೆ ಆ ದ್ವಾರಕ್ಕೆ ನನ್ನ ನಿರ್ಮಾಣದ 'ವಿದ್ಯಾಪತಿ' ಸಿನಿಮಾದ ಹೆಸರು ಇಟ್ಟಿದ್ದೇವೆ. ನನಗೆ ಸರಳ ಮದುವೆ ಆಗುವ ಆಸೆ ಇತ್ತು. ಆದರೆ ಕುಟುಂಬ, ಬಂಧು ಬಳಗದ ಸಂಭ್ರಮ ಮುಖ್ಯ ಅನ್ನಿಸಿತು. ಬದುಕಲ್ಲಿ ಖುಷಿ ಕೊಡೋದು ಒಳ್ಳೆ ನೆನಪುಗಳು ಮಾತ್ರ. ನೆನಪುಗಳನ್ನು ರಚಿಸಲು ಮುಂದಾಗಿದ್ದೇನೆ. ಎಲ್ಲರ ಜೊತೆಯಲ್ಲಿ ಸಂಭ್ರಮಿಸುತ್ತಿದ್ದೇನೆ.



ದೊಡ್ಡ ದೊಡ್ಡ ಮದುವೆ ಆಹ್ವಾನ ಪತ್ರಿಕೆ ನೋಡಿ ಭಯವಾಗಿತ್ತು. ಅದಕ್ಕೆ ಸರಳವಾಗಿ ನನ್ನ ವೈಯಕ್ತಿಕ ಪತ್ರ ಅನ್ನುವಂತೆ ಮದುವೆ ಆಮಂತ್ರಣ ವಿನ್ಯಾಸ ಮಾಡಿಸಿದೆ. ಆ ಖರ್ಚುಗಳನ್ನು ಮದುವೆ ಭೋಜನ ಇತ್ಯಾದಿ ಖರ್ಚುಗಳಿಗೆ ಬಳಸುತ್ತೇನೆ. ಎಷ್ಟು ಜನ ಬಂದರೂ ಅವರಿಗೆ ಭೋಜನ ಹಾಕಲು ವ್ಯವಸ್ಥೆ ಆಗುತ್ತಿದೆ.

ಧನ್ಯತಾ ವಿದ್ಯಾರ್ಥಿ ದೆಸೆಯಲ್ಲಿರುವಾಗ ಅಭಿಯಾನಿಯಾಗಿ ನಂಗೆ ಪರಿಚಯ ಆಗಿದ್ದು. ಆಮೇಲೆ ಪ್ರಶಸ್ತಿ ಬಂದಾಗ, ಸಿನಿಮಾ ಬಂದಾಗ ಅಭಿನಂದಿಸಿ ಇನ್‌ಸ್ಟಾಗ್ರಾಮ್‌ನಲ್ಲಿ ಸಂದೇಶ ಕಳುಹಿಸುತ್ತಿದ್ದರು. ಒಂದು ವರ್ಷದ ಹಿಂದೆ ಮತ್ತೆ ಭೇಟಿಯಾದೆವು. ಪ್ರಯಾಣದಲ್ಲಿ ನಾವಿಬ್ಬರೂ ಜೊತೆಯಾಗಿ ಬದುಕಿದರೆ ಚೆನ್ನಾಗಿರುತ್ತದೆ ಅನ್ನಿಸಿತು. ಮನೆಯಲ್ಲಿ ಎಲ್ಲರೂ ಒಪ್ಪಿದರು.

ನನಗೆ ವಚನ ಮಾಂಗಲ್ಯ, ಮಂತ್ರ ಮಾಂಗಲ್ಯ ಗೊತ್ತು. ಆದರೆ ಅದರ ನಿಯಮಗಳನ್ನು ಪಾಲಿಸಲು ಸಾಧ್ಯ ಆಗುವುದಿಲ್ಲ ಅನ್ನಿಸಿತು. ಮಂತ್ರ ಮಾಂಗಲ್ಯಕ್ಕೆ ಇಂತಿಷ್ಟೇ ಜನ ಬರಬೇಕು ಅಂತಿದೆ. ಆದರೆ ನನ್ನ ಮದುವೆಗೆ ಕಡಿಮೆ ಅಂದರೂ ಎರಡು ಸಾವಿರ ಜನ ಬರುತ್ತಾರೆ. ಮಂತ್ರ ಮಾಂಗಲ್ಯ ಅಂತ ಹೇಳಿ ಆ ಪರಿಕಲ್ಪನೆಯನ್ನು ಕೆಡಿಸುವುದು ಸರಿಯಲ್ಲ.

# 'ಉಪೇಂದ್ರ ಇಲ್ಲ ಅಂದ್ರೆ ನಾನಿಲ್ಲ'



ಸಾಧು ಕೋಕಿಲ ಅವರು ಹಾಸ್ಯ ನಟನಾಗಿ ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಹೆಸರು ಮಾಡಿದ್ದಾರೆ. ಅವರು ಬೆಳ್ಳಿ ಪರದೆ ಮೇಲೆ ಕಾಣಿಸಿಕೊಂಡರೆ ಥಿಯೇಟರ್ ರೂಫ್ ಕಿತ್ತು ಹೋಗುವ ರೀತಿಯಲ್ಲಿ ಸಿಳ್ಳೆ ಬೀಳುತ್ತದೆ.

ಸ್ಟಾರ್ ಹೀರೋಗೆ ಇರುವಷ್ಟೇ ಕ್ರೇಜ್ ಅವರ ಮೇಲೂ ಇದೆ. ಈಗ ಸಾಧು ಕೋಕಿಲ ಅವರು ತಮ್ಮ ಗುರುವನ್ನು ನೆನೆದಿದ್ದಾರೆ. ಇಲ್ಲಿಯವರೆಗೆ ಬಂದು ನಿಲ್ಲಲು ಕಾರಣ ಆದ ಉಪೇಂದ್ರ ಅವರಿಗೆ ಧನ್ಯವಾದ ಹೇಳಿದ್ದಾರೆ.

ಜೀ ಕನ್ನಡ ವಾಹಿನಿ 'ಜೀ ಎಂಟರ್‌ಟೇನರ್ಸ್ ಕಾಮಿಡಿ ಅವಾರ್ಡ್ಸ್ 2025' ನಡೆಸುತ್ತಿದೆ. ಇದರ ಶೂಟಿಂಗ್ ಪೂರ್ಣಗೊಂಡಿದ್ದು, ಈ ವಾರಾಂತ್ಯದಲ್ಲಿ ಇದು ಪ್ರಸಾರ ಕಾಣಲಿದೆ. ಜೀ ಕನ್ನಡದಲ್ಲಿ ರಾತ್ರಿ 9 ಗಂಟೆಗೆ ಈ ಪ್ರಶಸ್ತಿ ಕಾರ್ಯಕ್ರಮ ಪ್ರಸಾರ ಕಾಣಲಿದೆ. ಅವಾರ್ಡ್ ಸ್ವೀಕರಿಸಿದ ಸಾಧು ಕೋಕಿಲ ಅವರು ಉಪೇಂದ್ರ ಅವರನ್ನು ನೆನಪಿಸಿಕೊಂಡರು.

'ಜೀ ಎಂಟರ್‌ಟೇನರ್ಸ್ ಕಾಮಿಡಿ ಅವಾರ್ಡ್ಸ್ 2025'ನಲ್ಲಿ 'ಹಾಸ್ಯ ಚಕ್ರವರ್ತಿ ನರಸಿಂಹರಾಜು ಪ್ರಶಸ್ತಿ' ಸಾಧು ಕೋಕಿಲ ಅವರಿಗೆ ಸಿಕ್ಕಿದೆ. ಇದನ್ನು ಉಮೇಶ್ ಅವರು ಸಾಧು ಕೋಕಿಲಾಗೆ ನೀಡಿದರು. ಈ ಅವಾರ್ಡ್ ಸ್ವೀಕರಿಸಿ ಮಾತನಾಡಿದ ಸಾಧು ಕೋಕಿಲ ಅವರು, 'ನಾನಾಗಿರಬಹುದು, ಮನೋಹರ್ ಆಗಿರಬಹುದು, ಗುರು ಕಿರಣ್ ಆಗಿರಬಹುದು, ನಮ್ಮಲ್ಲಿದ್ದ ಟ್ಯಾಲೆಂಟ್ ತೆಗೆದಿದ್ದು ಅವರೇ' ಎಂದು ಸಾಧು ಕೋಕಿಲ ಹೇಳಿದರು.



'ಮ್ಯೂಸಿಕ್ ಡೈರೆಕ್ಟರ್ ಮಾಡಿದ್ದು ಅವರೇ, ಹಾಸ್ಯ ನಟನಾಗಿ ಮಾಡಿದ್ದೂ ಅವರೇ, ಡೈರೆಕ್ಷನ್ ಮಾಡ್ಸಿದ್ದೂ ಅವರೇ. ಉಪೇಂದ್ರ ಇಲ್ಲ ಅಂದ್ರೆ ನಾನು ಇಲ್ಲ' ಎಂದು ಹೆಮ್ಮೆಯಿಂದ ಸಾಧು ಕೋಕಿಲ ಅವರು ಹೇಳಿಕೊಂಡರು.

ಸಾಧು ಕೋಕಿಲ ಅವರು 'ಶ್' ಚಿತ್ರಕ್ಕೆ ಮ್ಯೂಸಿಕ್ ಕೊಟ್ಟರು. ಈ ವೇಳೆ ಅಲ್ಲಿ ಅತಿಥಿ ಪಾತ್ರ ಮಾಡಿದ್ದರು. ಅಲ್ಲಿಂದ ಅವರ ನಟನಾ ವೃತ್ತಿ ಆರಂಭ ಆಯಿತು. ಆ ಬಳಿಕ ಅವರು ಹಾಸ್ಯನಟನಾಗಿ ಹೆಚ್ಚು ಗುರುತಿಸಿಕೊಂಡರು.

ಅವರು ಕನ್ನಡ ಚಿತ್ರರಂಗದ ಬೇಡಿಕೆಯ ಕಾಮಿಡಿಯನ್. ಇತ್ತೀಚೆಗೆ ರಿಲೀಸ್ ಆದ ಉಪೇಂದ್ರ ನಟನೆಯ 'ಯುಐ' ಚಿತ್ರದಲ್ಲಿ ಸಾಧು ಕೋಕಿಲ ಅವರು ಬಣ್ಣ ಹಚ್ಚಿದ್ದರು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **9448074878**